

# ಬೆಳಗಾವಿ ವರದಿ

ಪ್ರಧಾನ ಸಂಪಾದಕರು: ಸತೀಶ್.ಬಿ.ಜಿ

BELAGAVI VARADI KANNADA DAILY

ಕನ್ನಡ ದಿನಪತ್ರಿಕೆ 24

Read,Share and Follow - www.belagavivaradi.com

Vol-04 | Issue: 251 | ₹ ಬೆಲೆ: 4 | Wednesday, 29, November,2023 | newsbelagavi@gmail.com | 9900332089 | Regn,No:G-2/PMG/KA/NK/BM/139/2021-23


## ಉತ್ತರಕಾಶಿ ಸುರಂಗ ಕುಸಿತ ಪೈಪ್ ಅಳವಡಿಕೆ ಕಾರ್ಯ ಪೂರ್ಣ, ಶೀಘ್ರ ಕಾರ್ಮಿಕರ ರಕ್ಷಣೆ: ಸಿಎಂ ಧಾಮಿ



ಉತ್ತರಕಾಶಿ: ಉತ್ತರಾಖಂಡದ ಉತ್ತರಕಾಶಿಯಲ್ಲಿರುವ ಸಿಲ್ಕ್ಯಾರಾ ಸುರಂಗ ಕುಸಿತದಿಂದ ಒಳಗಡೆ ಸಿಲುಕಿರುವ 41 ಕಾರ್ಮಿಕರ ರಕ್ಷಣೆಗಾಗಿ ಪೈಪ್ ಅಳವಡಿಕೆ ಕಾರ್ಯ ಪೂರ್ಣಗೊಂಡಿದೆ ಎಂದು ಉತ್ತರಾಖಂಡ ಮುಖ್ಯಮಂತ್ರಿ ಪುಷ್ಕರ್ ಸಿಂಗ್ ಧಾಮಿ ಅವರು ಮಂಗಳವಾರ ಹೇಳಿದ್ದಾರೆ. ಸುರಂಗದೊಳಗೆ ಪೈಪ್ ಅಳವಡಿಸುವ ಕೆಲಸ ಪೂರ್ಣಗೊಂಡಿದೆ. ಶೀಘ್ರದಲ್ಲೇ ಎಲ್ಲಾ ಕಾರ್ಮಿಕರನ್ನು ರಕ್ಷಿಸಲಾಗುವುದು" ಎಂದು ಉತ್ತರಾಖಂಡ ಸಿಎಂ ಪುಷ್ಕರ್ ಸಿಂಗ್ ಧಾಮಿ ಟ್ವೀಟ್ ಮಾಡಿದ್ದಾರೆ. ಉತ್ತರಾಖಂಡದ ಸಿಲ್ಕ್ಯಾರಾದಲ್ಲಿ ನಿರ್ಮಾಣ ಹಂತದ ಸುರಂಗ ಕುಸಿದ ಸ್ಥಳದಲ್ಲಿ ಕಳೆದ 17 ದಿನಗಳಿಂದ ರಕ್ಷಣಾ ಕಾರ್ಯಾಚರಣೆ ನಡೆಯುತ್ತಿದ್ದು, ಇಂದು ಸುರಂಗದಲ್ಲಿ 60 ಮೀಟರ್‌ಗಳಷ್ಟು ಅವಶೇಷಗಳನ್ನು ಭೇದಿಸಿದ ರಕ್ಷಣಾ ಕಾರ್ಯಕರ್ತರು, 41 ಕಾರ್ಮಿಕರ ಸಂಕಷ್ಟವನ್ನು ಕೊನೆಗೊಳಿಸಿದ್ದಾರೆ. ಸ್ಥಳಕ್ಕೆ ಸಿಎಂ ಧಾಮಿ ಸಹ ಆಗಮಿಸಿದ್ದಾರೆ. ಸ್ಥಳದಲ್ಲಿದ್ದ ಉತ್ತರಾಖಂಡದ ಹಿರಿಯ ಅಧಿಕಾರಿಯೊಬ್ಬರು ಕೊರೆಯು ಕಾರ್ಯ ಪೂರ್ಣಗೊಂಡಿದೆ ಎಂದು ಹೇಳಿದ್ದಾರೆ. ಸಿಕ್ಕಿಬಿದ್ದ ಕಾರ್ಮಿಕರನ್ನು ರಕ್ಷಿಸಿದ ನಂತರ ಅವರನ್ನು ತಕ್ಷಣ ವೈದ್ಯಕೀಯ ಚಿಕಿತ್ಸೆಗಾಗಿ ಆಸ್ಪತ್ರೆಗೆ ಸಾಗಿಸಲು ಎಲ್ಲಾ ರೀತಿಯ ಸಿದ್ಧತೆ ಮಾಡಿಕೊಳ್ಳಲಾಗಿದೆ.

ಸಿಲ್ಕ್ಯಾರಾದಿಂದ ಸುಮಾರು 30 ಕಿಮೀ ದೂರದಲ್ಲಿರುವ ಚಿನ್ಯಾಲಿಸೌರ್‌ನಲ್ಲಿರುವ ಸಮುದಾಯ ಆರೋಗ್ಯ ಕೇಂದ್ರದಲ್ಲಿ ಕಾರ್ಮಿಕರಿಗಾಗಿ 41 ಆಮ್ಲಜನಕ ಬೆಂಬಲಿತ ಹಾಸಿಗೆಗಳನ್ನು ಒಳಗೊಂಡ ಪ್ರತ್ಯೇಕ ವಾರ್ಡ್ ಅನ್ನು ಸಿದ್ಧಪಡಿಸಲಾಗಿದೆ. ಕಳೆದ ಹದಿನೈದು ದಿನಗಳಿಂದ ಭಾರೀ ವಾಹನಗಳ ನಿಯಮಿತ ಸಂಚಾರದಿಂದಾಗಿ ಸುರಂಗಕ್ಕೆ ತೆರಳು ರಸ್ತೆ ಸಂಪೂರ್ಣ ಹಾಳಾಗಿದ್ದು, ಅದನ್ನು ದುರಸ್ತಿ ಮಾಡಲಾಗುತ್ತಿದೆ. ಈ ಮೂಲಕ ಆಂಬ್ಯುಲೆನ್ಸ್‌ಗಳ ಸುಗಮ ಸಂಚಾರಕ್ಕಾಗಿ ಅವಕಾಶ ಮಾಡಿಕೊಡಲಾಗುತ್ತಿದೆ.

## ಚಾಮುಂಡೇಶ್ವರಿಗೆ 5 ವರ್ಷಗಳ ಗೃಹಲಕ್ಷ್ಮಿ ಯೋಜನೆಯ ಹಣ ಜಮಾ: ಸಚಿವೆ ಲಕ್ಷ್ಮಿ ಹೆಬ್ಬಾಳ್ಕರ್

ಬೆಳಗಾವಿ : ರಾಜ್ಯ ಕಾಂಗ್ರೆಸ್ ಸರ್ಕಾರದ ಮಹತ್ವಾಕಾಂಕ್ಷಿ ಗೃಹ ಲಕ್ಷ್ಮಿ ಯೋಜನೆಯ ಭರ್ತಿ ಐದು ವರ್ಷಗಳ ಕಂತನ್ನು ಶಾಸಕ ದಿನೇಶ್ ಗೂಳಿಗೌಡ ಅವರು ತಾಯಿ ಚಾಮುಂಡೇಶ್ವರಿಗೆ ಸಮರ್ಪಿಸಿದರು.

ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಅವರ ಪರವಾಗಿ ಶಾಸಕ ದಿನೇಶ್ ಗೂಳಿಗೌಡ ಅವರು ಮೈಸೂರಿನ ಚಾಮುಂಡಿ ಬೆಟ್ಟಕ್ಕೆ ತೆರಳಿ ನಾಡದೇವತೆ ಚಾಮುಂಡೇಶ್ವರಿ ದೇವಿ ದರ್ಶನ ಪಡೆದು ಹಣವನ್ನು ಅರ್ಪಿಸುವ ಮೂಲಕ ಸರ್ಕಾರದ ಹರಕೆ ತೀರಿಸಿದರು.

ಪ್ರತಿ ತಿಂಗಳಿಗೆ 2 ಸಾವಿರ ರೂ.ನಂತೆ 59 ತಿಂಗಳ ಕಂತಿನ ಹಣ ಒಟ್ಟು 1.18 ಲಕ್ಷ ರೂ.ಗಳನ್ನು ಸಚಿವೆ ಹೆಬ್ಬಾಳ್ಕರ್ ವೈಯಕ್ತಿಕವಾಗಿ ನೀಡಿದ್ದಾರೆ.

**ಮೊದಲ ಕಂತು ಸಲ್ಲಿಸಿದ್ದ ಸಿಎಂ ಸಿದ್ದರಾಮಯ್ಯ, ಡಿಸಿಎಂ ಡಿ.ಕೆ.ಶಿವಕುಮಾರ್:**

ಈ ಕುರಿತು ಪತ್ರಿಕಾ ಪ್ರಕಟಣೆ ಹೊರಡಿಸಿರುವ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್, ವಿಧಾನಸಭಾ ಚುನಾವಣೆಗೂ ಪೂರ್ವ ಮೇ 9 ರಂದು ಸಿದ್ದರಾಮಯ್ಯ, ಡಿ.ಕೆ.ಶಿವಕುಮಾರ್, ಕೆ.ಜೆ.ಜಾರ್ಜ, ದಿನೇಶ್ ಗೂಳಿಗೌಡ ಹಾಗೂ ಇತರ ಕಾಂಗ್ರೆಸ್ ನಾಯಕರು ಚಾಮುಂಡಿ ದೇವಿ ಸನ್ನಿಧಿಯಲ್ಲಿ ಗ್ಯಾರಂಟಿ ಕಾರ್ಡ್ ಗಳನ್ನಿಟ್ಟು ಹರಕೆ ಕಟ್ಟಿದ್ದರು. ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬರಲು ಶಕ್ತಿ ನೀಡುವಂತೆ ತಾಯಿಯಲ್ಲಿ ಬೇಡಿಕೊಂಡಿದ್ದರು. ಅದರಂತೆ ವಿಧಾನಸಭಾ ಚುನಾವಣೆಯಲ್ಲಿ ಕಾಂಗ್ರೆಸ್ 135 ಸ್ಥಾನಗಳೊಂದಿಗೆ



ಅಭೂತಪೂರ್ವ ಜಯಭೇರಿ ಬಾರಿಸಿ ಅಧಿಕಾರವನ್ನು ಹಿಡಿದಿದೆ. ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದು 100 ದಿನ ಕಳೆಯುವುದರೊಳಗೆ ಭರವಸೆ ನೀಡಿದ್ದಂತೆ ಐದರಲ್ಲಿ ನಾಲ್ಕು ಗ್ಯಾರಂಟಿ ಯೋಜನೆಗಳನ್ನು ಜಾರಿ ಮಾಡಲಾಗಿದೆ.

ಆಗಸ್ಟ್ 30 ರಂದು ಮೈಸೂರಿನಲ್ಲಿ ಗೃಹಲಕ್ಷ್ಮೀ ಯೋಜನೆಗೆ ಚಾಲನೆ ನೀಡುವ ಮೊದಲು ಸಿಎಂ ಸಿದ್ದರಾಮಯ್ಯ, ಡಿಸಿಎಂ ಡಿ.ಕೆ.ಶಿವಕುಮಾರ್, ನಾನು, ಶಾಸಕರಾದ ದಿನೇಶ್ ಗೂಳಿಗೌಡ ಇತರ ಪ್ರಮುಖರು ದೇವಿಯ ದರ್ಶನ ಮಾಡಿ ಹರಕೆ ತೀರಿಸಿದ್ದೆವು. ರಾಜ್ಯದ ಯಜಮಾನಿಯರ ಖಾತೆಗೆ ಪ್ರತಿ ತಿಂಗಳು ಜಮಾ ಮಾಡುವ ತಲಾ 2 ಸಾವಿರ ರೂ.ಗಳ ಮೊದಲ ಕಂತನ್ನು ತಾಯಿ ಚಾಮುಂಡೇಶ್ವರಿ ದೇವಿಗೆ ಅಂದು ಸಮರ್ಪಣೆ ಮಾಡಿದ್ದೆವು ಎಂದು ಹೆಬಾಳ್ಕರ್ ಹೇಳಿಕೆಯಲ್ಲಿ ವಿವರಿಸಿದ್ದಾರೆ.

ಪ್ರತಿ ತಿಂಗಳು ತಾಯಿ ಚಾಮುಂಡೇಶ್ವರಿ ದೇವಿಗೆ ಗೃಹಲಕ್ಷ್ಮಿ ಕಂತನ್ನು ನೀಡುವಂತೆ ಶಾಸಕ ದಿನೇಶ ಗೂಳಿಗೌಡ ಅವರು ಸಿಎಂ ಸಿದ್ದರಾಮಯ್ಯ ಹಾಗೂ ಡಿಸಿಎಂ ಡಿ.ಕೆ. ಶಿವಕುಮಾರ್ ಅವರಲ್ಲಿ ಮನವಿ ಮಾಡಿದ್ದರು. ಅವರು ತಕ್ಷಣ ಈ ಕುರಿತು ಕ್ರಮ ವಹಿಸುವಂತೆ ಸೂಚಿಸಿದ್ದರು. ಆ ಹಿನ್ನೆಲೆಯಲ್ಲಿ ಒಂದೇ ಸಲ ಎಲ್ಲಾ ಕಂತಿನ ಹಣವನ್ನು ನಾಡದೇವಿಗೆ ಅರ್ಪಿಸಲಾಗಿದೆ ಎಂದು ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ತಿಳಿಸಿದ್ದಾರೆ.

ಮೊದಲ ಕಂತನ್ನು ಸಿಎಂ, ಡಿಸಿಎಂ ಹಾಗೂ ನಾನು ತಾಯಿ ಚಾಮುಂಡೇಶ್ವರಿ ದೇವಿಗೆ ಅರ್ಪಿಸಿದ್ದೇವೆ. ಹಾಗಾಗಿ ಉಳಿದ 59 ತಿಂಗಳ ಹಣವನ್ನು ದೇವಿಗೆ ನಾನು ವೈಯಕ್ತಿಕವಾಗಿ ಸಲ್ಲಿಸುತ್ತಿದ್ದೇನೆ. ಈ ಮೊತ್ತವನ್ನು ಶಾಸಕರಾದ ದಿನೇಶ್ ಗೂಳಿಗೌಡ ಅವರ ಮೂಲಕ ಸಮರ್ಪಿಸುತ್ತಿದ್ದೇನೆ ಎಂದು ಸಚಿವೆ ಲಕ್ಷ್ಮಿ ಹೆಬ್ಬಾಳ್ಕರ್ ಹೇಳಿದ್ದಾರೆ.

**5 ವರ್ಷವೂ ಯೋಜನೆ:**

ಮಹಿಳೆಯರನ್ನು ಆರ್ಥಿಕವಾಗಿ ಸಬಲರನ್ನಾಗಿ ಮಾಡುವ ಗೃಹಲಕ್ಷ್ಮೀ ಯೋಜನೆಯು ದೇಶದಲ್ಲಿ, ಅಥವಾ ವಿಶ್ವದಲ್ಲಿ ಜಾರಿಯಾದ ಅತಿ ವಿಶಿಷ್ಟ ಹಾಗೂ ಜನಪ್ರಿಯ ಯೋಜನೆಯಾಗಿದೆ.

ಇದುವರೆಗೆ ರಾಜ್ಯಾದ್ಯಂತ 1 ಕೋಟಿ 17 ಲಕ್ಷ ಯಜಮಾನಿಯರು ಗೃಹಲಕ್ಷ್ಮಿ ಯೋಜನೆ ಮೂಲಕ ಹಣ ಪಡೆಯಲು ನೋಂದಣಿ ಮಾಡಿಕೊಂಡಿದ್ದಾರೆ. ಇವರಲ್ಲಿ 1 ಕೋಟಿ 10 ಲಕ್ಷ ಯಜಮಾನಿಯರ ಖಾತೆಗಳಿಗೆ ನೇರವಾಗಿ ಹಣ ಜಮಾ ಆಗುತ್ತಿದೆ. ಯೋಜನೆಗಾಗಿ ನಮ್ಮ ಸರ್ಕಾರ 11,200 ಕೋಟಿ ರೂ.ಗಳನ್ನು ಈಗಾಗಲೇ ಬಿಡುಗಡೆ ಮಾಡಿದೆ. ಪ್ರತಿ ತಿಂಗಳು ಸುಮಾರು 2,100 ಕೋಟಿ ರೂ.ಗಳನ್ನು ಮಹಿಳೆಯರ ಖಾತೆಗೆ ಜಮಾ ಮಾಡಲಾಗುತ್ತಿದೆ. ಇದುವರೆಗೆ ಸುಮಾರು 6 ಸಾವಿರ ಕೋಟಿ ರೂ. ಜಮಾ ಆಗಿದೆ.

**ನುಡಿದಂತೆ ನಡೆದ ಕಾಂಗ್ರೆಸ್ ಸರ್ಕಾರ:**

ಕಾಂಗ್ರೆಸ್ ಸರ್ಕಾರ ನುಡಿದಂತೆ ನಡೆದಿದೆ. ಮಾಡಿದ ವಾಗ್ದಾನದಂತೆ ದೇವಿಗೆ ಹಣ ಸಲ್ಲಿಸುತ್ತಿದ್ದೇವೆ. ಮುಂದಿನ ಐದು ವರ್ಷ ಕೂಡ ನಿರಂತರವಾಗಿ ಗ್ಯಾರಂಟಿ ಯೋಜನೆಗಳು ಜನರಿಗೆ ತಲುಪಲಿವೆ. ಮಾತ್ರವಲ್ಲ 2028 ರ ವಿಧಾನಸಭೆ ಚುನಾವಣೆಯಲ್ಲೂ ನಾವು ಮತ್ತೆ ಅಧಿಕಾರಕ್ಕೆ ಬಂದು ಗ್ಯಾರಂಟಿ ಯೋಜನೆಗಳನ್ನು ಪುನಃ, ಪುನಃ ಮುಂದುವರಿಸಲಿದ್ದೇವೆ. ಯೋಜನೆ 3 ತಿಂಗಳಿಗೆ ನಿಲ್ಲುತ್ತದೆ, 6 ತಿಂಗಳಿಗೆ ಸ್ಥಗಿತವಾಗುತ್ತದೆ. ಲೋಕಸಭಾ ಚುನಾವಣೆಯ ನಂತರ ಮುಕ್ತಾಯವಾಗುತ್ತದೆ ಎಂದು ವಿರೋಧ ಪಕ್ಷಗಳು ಅಪಪ್ರಚಾರ ಮಾಡುತ್ತಿವೆ. ಅವುಗಳಿಗೆ ಕಿವಿಗೊಡಬೇಡಿ. ಕೇವಲ ಈ ಐದು ವರ್ಷವಲ್ಲ,ಮುಂದಿನ ಐದು ವರ್ಷವೂ ನಾವೇ ಅಧಿಕಾರದಲ್ಲಿರುತ್ತೇವೆ. ಮತ್ತೆ ಈ ಗ್ಯಾರಂಟಿ ಯೋಜನೆಗಳನ್ನು ಮುಂದುವರಿಸುತ್ತೇವೆ ಎಂದು ಸಚಿವೆ ಲಕ್ಷ್ಮಿ ಹೆಬ್ಬಾಳ್ಕರ್ ಹೇಳಿಕೆಯಲ್ಲಿ ಸ್ಪಷ್ಟಪಡಿಸಿದ್ದಾರೆ.

## ಡಿ.1ರಿಂದ ವಾಹನಗಳಿಗೆ ಪ್ಯಾನಿಕ್ ಬಟನ್ ಎಲ್ವಿಟಿ ಕಡ್ಡಾಯಗೊಳಿಸಿದ ಸರ್ಕಾರ

ಬೆಂಗಳೂರು: ಟ್ಯಾಕ್ಸಿ, ಕ್ಯಾಬ್ ಸೇರಿದಂತೆ ಸಾರ್ವಜನಿಕ ಸೇವಾ ವಾಹನಗಳಿಗೆ ವೆಹಿಕಲ್ ಲೊ?ಕೇಷನ್ ಟ್ರ್ಯಾಕಿಂಗ್ ಡಿವೈಸ್ (ವಿಎಲ್ಟಿ) ಮತ್ತು ಎಮರ್ಜೆನ್ಸಿ ಪ್ಯಾನಿಕ್ ಬಟನ್ ಅಳವಡಿಕೆ ಕಡ್ಡಾಯಗೊಳಿಸಿ ರಾಜ್ಯ ಸರ್ಕಾರ ಆದೇಶ ಹೊರಡಿಸಿದೆ. ಡಿಸೆಂಬರ್ 1ರಿಂದ ಈ ಆದೇಶ ಜಾರಿಗೆ ಬರಲಿದೆ. ಆದ್ರೆ, ಎಲ್ಲಾ ಅಳವಡಿಕೆಗೆ 2024ರ ನವೆಂಬರ್ 30ರವರೆಗೆ ಅಂದರೆ ಒಂದು ವರ್ಷ ಅವಧಿಯ ಅವಕಾಶವನ್ನು ನೀಡಿದೆ.

ರಾಜ್ಯದಲ್ಲಿ ಮಹಿಳೆಯರು, ಮಕ್ಕಳು ಹಾಗೂ ಪ್ರಯಾಣಿಕರ ಸುರಕ್ಷತೆಗಾಗಿ ಸಾರ್ವಜನಿಕ ಸೇವೆ ಇರುವ ಖಾಸಗಿ ವಾಹನಗಳಿಗೆ ಎಮರ್ಜೆನ್ಸಿ ಪ್ಯಾನಿಕ್ ಬಟನ್ ಅಳವಡಿಸುವುದನ್ನು ಸರ್ಕಾರ ಗಂಭೀರವಾಗಿ ಪರಿಗಣಿಸಿದೆ. ಈ



ಕೆಲಸ ಶೀಘ್ರವಾಗಿ ಆಗಬೇಕಿರುವುದರಿಂದ ಆರ್ಟಿಒಗಳಲ್ಲಿ ಈ ಯೊ?ಜನೆಗೆ ಒಳಪಡುವ ವಾಹನಗಳಿಗೆ ಮಾತ್ರ ಎಫ್.ಸಿ ನವೀಕರಣಕ್ಕೆ ಸೂಚನೆ ನೀಡಲಾಗಿದೆ.


ಕೇಂದ್ರ ಹಾಗೂ ರಾಜ್ಯ ಸರ್ಕಾರದ 60:40 ಅನುಪಾತದ ಸಹಭಾಗಿತ್ವದಲ್ಲಿ ಸಾರ್ವಜನಿಕ ಸೇವಾ ವಾಹನಗಳಲ್ಲಿ ಈ ಡಿವೈಸ್ ಅಳವಡಿಕೆಗೆ ಒಪ್ಪಿಗೆ ನೀಡಲಾಗಿದೆ. ಈ ಯೋಜನೆ ಜಾರಿಗೆ 2035.90 ಲಕ್ಷಗಳ ವೆಚ್ಚಕ್ಕೆ ಅನುಮೋದನೆ ನೀಡಲಾಗಿದ್ದು, ವಾಹನ ಮಾಲೀಕರು ಅರ್ಹ ಕಂಪನಿಗಳಿಂದ ಪ್ಯಾನಿಕ್ ಬಟನ್ ಅಳವಡಿಸಬೇಕು ಎಂದು ತಿಳಿಸಲಾಗಿದೆ.

ಪ್ಯಾನಿಕ್ ಬಟನ್ ಒಳಗೊಂಡ ವೆಹಿಕಲ್ ಲೊಕೇಷನ್ ಟ್ರ್ಯಾಕಿಂಗ್ ಡಿವೈಸ್ ಅಳವಡಿಸಲು 7,599 ರೂಪಾಯಿ ನಿಗದಿ ಮಾಡಲಾಗಿದೆ. ಡಿಸೆಂಬರ್ 1 ರಿಂದಲೇ ಈ ಯೋಜನೆ ಪ್ರಾರಂಭವಾಗಲಿದೆ. ಒಂದು ವರ್ಷದೊಳಗೆ(30/11/24 ) ಪರ್ಮಿಟ್ ವಾಹನಗಳು ಈ ಸಾಧನಗಳನ್ನ ಅಳವಡಿಸಿರಬೇಕು.

ಇಲ್ಲವಾದಲ್ಲಿ ಸಾರಿಗೆ ಇಲಾಖೆಯಿಂದ ಕ್ರಮ ಕೈಗೊಳ್ಳಲಾಗುತ್ತದೆ. ಅಲ್ಲದೇ ಡಿವೈಸ್ ಅಳವಡಿಕೆ ಮಾಡದಿದ್ದರೆ ಎಫ್ ಸಿ ನವೀಕರಣವಾಗಲ್ಲ ಎಂದು ರಾಜ್ಯ ಸಾರಿಗೆ ಇಲಾಖೆ ಆದೇಶದಲ್ಲಿ ಉಲ್ಲೇಖಿಸಿದೆ.

ಯಾವ್ಯಾವ ವಾಹನಗಳಿಗೆ ಕಡ್ಡಾಯ? ಎಲ್ಲ ರೀತಿಯ ಸಾರ್ವಜನಿಕ ಸೇವಾ ವಾಹನಗಳು ಅಂದರೆ ಯೆಲ್ಲೊ? ಬೊ?ರ್ಡ್ನ ಟ್ಯಾಕ್ಸಿಗಳು, ಕ್ಯಾಬ್ಗಳು, ಖಾಸಗಿ ಬಸ್ಗಳು, ನ್ಯಾಷನಲ್ ಪರ್ಮಿಟ್ ಹೊಂದಿರುವ ಗೂಡ್ಸ್ ವಾಹನಗಳಿಗೆ ಈ ಆದೇಶ ಅನ್ವಯವಾಗಲಿದ್ದು, ಇನ್ನು ಒಂದು ವರ್ಷದ ಅವಧಿಯೊಳಗೆ ಈ ವಾಹನಗಳ ಮಾಲೀಕರು ಪ್ಯಾನಿಕ್ ಬಟನ್ ಹಾಗೂ ವಿಎಲ್ಟಿ ಅಳವಡಿಸಬೇಕಿದೆ. ಇನ್ನು ವಾಹನಗಳಿಗೆ ವಿಎಲ್ಟಿ ಸೇರಿದಂತೆ ಪ್ಯಾನಿಕ್ ಬಟನ್ ಅಳವಡಿಕೆಗೆ 7,599 ರೂಪಾಯಿ ಖರ್ಚಾಗಲಿದೆ. ಜಿಎಸ್‌ಟಿ ಹೊರತುಪಡಿಸಿ ಈ ಬೆಲೆಯನ್ನು ನಿಗದಿ ಮಾಡಲಾಗಿದೆ.

## ರಾಜ್ಯದಲ್ಲಿ ಬದಲಾವಣೆ ತರುವಂತೆ ತೆಲಂಗಾಣ ಮತದಾರರಲ್ಲಿ ಕಾಂಗ್ರೆಸ್ ನಾಯಕಿ ಸೋನಿಯಾ ಗಾಂಧಿ ಮನವಿ



ನವದೆಹಲಿ: ನವೆಂಬರ್ 30 ರಂದು ನಡೆಯಲಿರುವ ತೆಲಂಗಾಣ ವಿಧಾನಸಭಾ ಚುನಾವಣೆಗೆ ಮುಂಚಿತವಾಗಿ, ಹಿರಿಯ ಕಾಂಗ್ರೆಸ್ ನಾಯಕಿ ಸೋನಿಯಾ ಗಾಂಧಿ ಅವರು ಮಂಗಳವಾರ ತಮ್ಮ ಪಕ್ಷವನ್ನು ಅಧಿಕಾರಕ್ಕೆ ತರುವ ಮೂಲಕ ಬದಲಾವಣೆಯನ್ನು ತರಲು ರಾಜ್ಯದ ಮತದಾರರಿಗೆ ಮನವಿ ಮಾಡಿದರು.

ಈ ಕುರಿತು ಟ್ವೀಟ್ ಮಾಡಿರುವ ಅವರು, ಎರಡು ನಿಮಿಷಗಳ ವಿಡಿಯೋ ಸಂದೇಶದಲ್ಲಿ, 'ನಮಸ್ಕಾರಂ, ತೆಲಂಗಾಣದ ನನ್ನ ಪ್ರೀತಿಯ ಸಹೋದರಿಯರು ಮತ್ತು ಸಹೋದರರೇ, ನಾನು ನಿಮ್ಮೆಲ್ಲರ ನಡುವೆ ಬರಲು ಸಾಧ್ಯವಾಗಲಿಲ್ಲ ಆದರೆ ನಾನು ನಿಮ್ಮ ಹೃದಯಕ್ಕೆ ತುಂಬಾ ಹತ್ತಿರದಲ್ಲಿದ್ದೇನೆ. ಇಂದು ನಾನು ನಿಮಗೆ ಒಂದು ವಿಷಯವನ್ನು ಹೇಳಲು ಬಯಸುತ್ತೇನೆ. ನಾನು ತೆಲಂಗಾಣದ ಹುತಾತ್ಮ ಪುತ್ರರ ತಾಯಿಯರ ಕನಸನ್ನು ನನಸಾಗಿಸಲು ಬಯಸುತ್ತೇನೆ' ಎಂದಿದ್ದಾರೆ.

'ನಾವೆಲ್ಲರೂ 'ದೊರಲ' ತೆಲಂಗಾಣವನ್ನು 'ಪ್ರಜಲ' ತೆಲಂಗಾಣವನ್ನಾಗಿ (ದೊರೆಗಳ ತೆಲಂಗಾಣದಿಂದ ಪ್ರಜೆಗಳ ತೆಲಂಗಾಣವನ್ನಾಗಿ) ಪರಿವರ್ತಿಸಬೇಕೆಂದು ನಾನು ಪ್ರಾಮಾಣಿಕವಾಗಿ ಬಯಸುತ್ತೇನೆ.

ನಿಮ್ಮ ಕನಸುಗಳನ್ನು ನನಸು ಮಾಡಲು ಮತ್ತು ನಿಮಗೆ ನಿಜವಾದ ಮತ್ತು ಪ್ರಾಮಾಣಿಕ ಸರ್ಕಾರವನ್ನು ನೀಡಲು ಅವಕಾಶ ನೀಡಿ' ಎಂದು ಅವರು ಹೇಳಿದರು.

ಬಿಆರ್‌ಎಸ್ ಅಧಿಕಾರದಲ್ಲಿರುವ ದಕ್ಷಿಣ ರಾಜ್ಯದಲ್ಲಿ ಪ್ರಚಾರದ ಕೊನೆಯ ದಿನದಂದು ಕಾಂಗ್ರೆಸ್ ಸಂಸದೀಯ ಪಕ್ಷದ ಅಧ್ಯಕ್ಷರು ಮತ ಯಾಚನೆ ಮಾಡಿದ್ದಾರೆ.

'ಸೋನಿಯಾ ಅಮ್ಮಾ ಎಂದು ಕರೆಯುವ ಮೂಲಕ ನೀವು ನನಗೆ ಅಪಾರ ಗೌರವವನ್ನು ನೀಡಿದ್ದೀರಿ. ನೀವು ನನ್ನನ್ನು ತಾಯಿಯಂತೆ ನೋಡಿದ್ದೀರಿ.

ಈ ಪ್ರೀತಿ ಮತ್ತು ಗೌರವಕ್ಕೆ ನಾನು ನಿಮಗೆ ಯಾವಾಗಲೂ ಕೃತಜ್ಞಳಾಗಿರುತ್ತೇನೆ ಮತ್ತು ಎಂದೆಂದಿಗೂ ನಿಮಗೆ ಸಮರ್ಪಿತವಾಗಿರುತ್ತೇನೆ' ಎಂದು ಅವರು ಹೇಳಿದರು.

## ಬೆಳಗಾವಿ ಪಾಲಿಕೆ ಇಬ್ಬರ ಬಿಜೆಪಿ ಸದಸ್ಯರಿಗೆ ಅನರ್ಹ ಭೀತಿ





ಬೆಳಗಾವಿ: ಬೆಳಗಾವಿ ಮಹಾನಗರ ಪಾಲಿಕೆಯ ಮತ್ತಿಬ್ಬರು ಬಿಜೆಪಿ ಸದಸ್ಯರಿಗೆ ಅನರ್ಹ ಭೀತಿ ಶುರುವಾಗಿದೆ.

ಸರ್ಕಾರಿ ನಿಯಮಗಳನ್ನೇ ಗಾಳಿಗೆ ತೂರಿ ತಮ್ಮ ಪತ್ನಿ ಹೆಸರಿನಲ್ಲಿ ಮಳಿಗೆ ಪಡೆದುಕೊಂಡ ಪ್ರಕರಣ ಸಂಬಂಧ ವಾರ್ಡ್ ನಂಬರ್ 23ರ ಸದಸ್ಯ ಜಯಂತ್ ಜಾಧವ್ ಹಾಗೂ ವಾರ್ಡ್ ನಂಬರ್ 41ರ ಪಾಲಿಕೆ ಸದಸ್ಯ ಮಂಗೇಶ ಪವಾರ್ ಮೇಲೆ ಅನರ್ಹ ತೂಗುಗತ್ತಿ ತೂಗುತ್ತಿದೆ.

ಬಿಜೆಪಿ ಅಧಿಕಾರದ ಅವಧಿಯಲ್ಲಿ ಬಸವೇಶ್ವರ ವೃತ್ತದ ಬಳಿ ತಿನಿಸು ಕಟ್ಟೆ ನಿರ್ಮಾಣ ಮಾಡಲಾಗಿದ್ದು, ಈ ತಿನಿಸು ಕಟ್ಟೆಯಲ್ಲಿ ಬಡವರು, ನಿರ್ಗತಿಕರು, ಆರ್ಥಿಕವಾಗಿ ದುರ್ಬಲರಿಗೆ ಮಳಿಗೆ ನೀಡುವ ನಿಯಮವಿದೆ. ಆದರೆ ಜಯಂತ್ ಜಾಧವ್ ಮತ್ತು ಮಂಗೇಶ ಪವಾರ್ ಅವರು ತಮ್ಮ-ತಮ್ಮ ಪತ್ನಿಯರ ಹೆಸರಿನಲ್ಲಿ ಮಳಿಗೆ ಹಂಚಿಕೆ ಮಾಡಿಕೊಂಡಿದ್ದಾರೆ.

ಸೋನಾಲಿ ಜಯಂತ್ ಜಾಧವ್ ಹೆಸರಿನಲ್ಲಿ ತಿನಿಸು ಕಟ್ಟೆಯಲ್ಲಿ ಸಂಖ್ಯೆ 29ರ ಮಳಿಗೆ ಇದ್ದರೆ, ತಿನಿಸು ಕಟ್ಟೆಯಲ್ಲಿ ಸಂಖ್ಯೆ 28ರ ಮಳಿಗೆ ನೀತಾ ಮಂಗೇಶ ಪವಾರ್ ಹೆಸರಿನಲ್ಲಿ ಹಂಚಿಕೆ ಮಾಡಲಾಗಿದೆ.

ಈ ಸಂಬಂಧ ಹೋರಾಟಗಾರ ಸುಜೀತ್ ಮುಳಗುಂದ ಎನ್ನುವರು ಪ್ರಾದೇಶಿಕ ಆಯುಕ್ತರಿಗೆ ದೂರು ನೀಡಿದ್ದು, ಇಬ್ಬರು ಸದಸ್ಯರು ಕೆಎಂಸಿ ಕಾಯ್ದೆ 1976 ಸೆಕ್ಷನ್ 26(1)(ಕೆ) ಉಲ್ಲಂಘಿಸಿದ್ದಾರೆ. ಕಾನೂನು ಉಲ್ಲಂಘನೆ ಹಿನ್ನೆಲೆಯಲ್ಲಿ ಈ ಇಬ್ಬರ ಸದಸ್ಯತ್ವನ್ನು ರದ್ದು ಮಾಡಬೇಕು ಎಂದು ದೂರಿನಲ್ಲಿ ಮನವಿ ಮಾಡಿದ್ದಾರೆ.

ಈ ದೂರು ಬೆನ್ನಲ್ಲೇ ಪರಿಶೀಲನೆ ನಡೆಸಿ ಕ್ರಮ ಕೈಗೊಳ್ಳುವಂತೆ ಪ್ರಾದೇಶಿಕ ಆಯುಕ್ತರು ಜಿಲ್ಲಾಧಿಕಾರಿಗೆ ಪತ್ರ ಬರೆದಿದ್ದರು.

ಇದೀಗ ಪ್ರಾದೇಶಿಕ ಆಯುಕ್ತರ ಪತ್ರ ಉಲ್ಲೇಖಿಸಿ ಜಿಲ್ಲಾಧಿಕಾರಿ ನಿತೇಶ್ ಪಾಟೀಲ್ ಅವರು ಮಹಾನಗರ ಪಾಲಿಕೆ ಆಯುಕ್ತ ಅಶೋಕ ದುಡಗುಂಟಿಗೆ ಅವರಿಗೆ ಪತ್ರ ಬರೆದಿದ್ದು, ಪ್ರಕರಣ ಸಂಬಂಧ ಪರಿಶೀಲನೆ ನಡೆಸಿ, ಸೂಕ್ತ ಕ್ರಮ ಕೈಗೊಂಡು ಸ್ಪಷ್ಟವಾದ ಅಭಿಪ್ರಾಯಗಳೊಂದಿಗೆ ವಿವಾರವಾದ ವರದಿ ಸಲ್ಲಿಸುವಂತೆ ಸೂಚನೆ ನೀಡಿದ್ದಾರೆ. ಈ ಹಿನ್ನೆಲೆಯಲ್ಲಿ ಇಬ್ಬರು ಬಿಜೆಪಿ ಸದಸ್ಯರಿಗೆ ಅನರ್ಹಗೊಳ್ಳು ಆತಂಕ ಎದುರಾಗಿದೆ.

## ಇಂದಿನಿಂದ ವಿದ್ಯುತ್ ಚಾಲಿತ ರೈಲು ಸಂಚಾರ ಪ್ರಾರಂಭ: ಸಂಸದ ಈರಣ್ಣ ಕಡಾಡಿ



ಬೆಳಗಾವಿ: ಮೊಟ್ಟ ಮೊದಲ ವಿದ್ಯುತ್ ಚಾಲಿತ ರೈಲು ಸಂಚಾರ ಇಂದು ಬೆಂಗಳೂರಿನಿಂದ ಬೆಳಗಾವಿಗೆ ಆರಂಭವಾಗಲಿದೆ ಎಂದು ರಾಜ್ಯಸಭಾ ಸಂಸದ ಈರಣ್ಣ ಕಡಾಡಿ ಹೇಳಿದರು.

ಮಂಗಳವಾರ ನ-28 ರಂದು ಪತ್ರಿಕಾ ಹೇಳಿಕೆ ನೀಡಿದ ಅವರು ಬೆಳಗಾವಿ-ಹುಬ್ಬಳ್ಳಿ ನಡುವೆ ರೈಲ್ವೆ ಮಾರ್ಗದ ವಿದ್ಯುದ್ದಿಕರಣ ಕಾಮಗಾರಿ ಪೂರ್ಣಗೊಂಡಿದ್ದು, ದಿನಾಂಕ 29.11.2023 ರಂದು ರೈಲು ಸಂಖ್ಯೆ:20653 ಬೆಂಗಳೂರು-ಬೆಳಗಾವಿ ಸೂಪರ್ ಫಾಸ್ಟ್ ಏಕ್ಸ್‌ಪ್ರೇಸ್ ರೈಲು ಡೀಸೆಲ್ ಎಂಜಿನ್ ಬದಲು ಎಲೆಕ್ಟ್ರಿಕ್ ಎಂಜಿನ್ ಮೂಲಕ ಸಂಚಾರ ನಡೆಸಲಿದೆ.

ದಿನಾಂಕ 30.11.2023 ರಂದು ರೈಲು ಸಂಖ್ಯೆ:20654 ಬೆಳಗಾವಿ ರೈಲು ನಿಲ್ದಾಣದಿಂದ ಮೊಟ್ಟ ಮೊದಲ ವಿದ್ಯುತ್‌ಚಾಲಿತ ರೈಲು ಪ್ರತಿದಿನ ಸಂಚಾರ ನಡೆಸಲಿದೆ. ವೇಳಾಪಟ್ಟಿಯಲ್ಲಿ ಯಾವುದೇ ಬದಲಾವಣೆ ಇಲ್ಲ.

ಬರುವಂತಹ ದಿನಗಳಲ್ಲಿ ಪ್ರಯಾಣಿಕರಿಗೆ ಕಡಿಮೆ ಸಮಯದಲ್ಲಿ ಬೆಳಗಾವಿಯಿಂದ ಬೆಂಗಳೂರಿಗೆ ತಲುಪಲು ಹಾಗೂ ಬೆಂಗಳೂರಿನಿಂದ ಬೆಳಗಾವಿಗೆ ಬರಲು ಸಮಯ ಉಳಿತಾಯದ ಅನುಕೂಲವಾಗಿದೆ ಎಂದರು.

## ನೀತಿ ಸಂಹಿತೆ ಉಲ್ಲಂಘನೆ ಪ್ರಕರಣ: ದೆಹಲಿ ಸಿಎಂ ಕೇಜ್ರಿವಾಲ್‌ಗೆ ಗೋವಾ ಕೋರ್ಟ್ ನಿಂದ ಸಮನ್ಸ್



ಪಣಜಿ: ಮಾದರಿ ನೀತಿ ಸಂಹಿತೆ ಉಲ್ಲಂಘಿಸಿದ ಪ್ರಕರಣಕ್ಕೆ ಸಂಬಂಧಿಸಿದಂತೆ ಎಎಪಿ ರಾಷ್ಟ್ರೀಯ ಸಂಚಾಲಕ ಹಾಗೂ ದೆಹಲಿ ಮುಖ್ಯಮಂತ್ರಿ ಅರವಿಂದ್ ಕೇಜ್ರಿವಾಲ್ ಅವರಿಗೆ ಗೋವಾ ನ್ಯಾಯಾಲಯ ಮಂಗಳವಾರ ಸಮನ್ಸ್ ಜಾರಿ ಮಾಡಿದ್ದು, ನವೆಂಬರ್ 29ರಂದು ವಿಚಾರಣೆಗೆ ಹಾಜರಾಗುವಂತೆ ಸೂಚಿಸಿದೆ.

ಆಮ್ ಆದ್ಮಿ ಪಕ್ಷದ ಸ್ಥಳೀಯ ಘಟಕವು ಸಮನ್ಸ್ ಸ್ವೀಕರಿಸಿದೆ. ಆದರೆ ದೆಹಲಿ ಮುಖ್ಯಮಂತ್ರಿ ವಿರುದ್ಧದ ಕ್ರಿಮಿನಲ್ ಮೊಕದ್ದಮೆಯ ವಿವರಗಳ ಬಗ್ಗೆ ಯಾವುದೇ ಮಾಹಿತಿ ನೀಡಿಲ್ಲ.

ನ್ಯಾಯಾಲಯದ ಮೂಲಗಳ ಪ್ರಕಾರ, ದೆಹಲಿ ಸಿಎಂ ವಿರುದ್ಧ ಭಾರತೀಯ ದಂಡ ಸಂಹಿತೆಯ (IPC) ಪ್ರಜಾಪ್ರತಿನಿಧಿ ಕಾಯ್ದೆ ಮತ್ತು ಸೆಕ್ಷನ್ 171 (ಇ) ಅಡಿಯಲ್ಲಿ ಪ್ರಕರಣವನ್ನು ದಾಖಲಿಸಲಾಗಿದೆ.

ಕೇಜ್ರಿವಾಲ್ ಅವರು ನ್ಯಾಯಾಲಯಕ್ಕೆ ಹಾಜರಾಗಬೇಕಿರುವ ಒಂದು ದಿನ ಮೊದಲು ಅಂದರೆ ಮಂಗಳವಾರ ಸಮನ್ಸ್ ಸ್ವೀಕರಿಸಿದ್ದೇವೆ ಎಂದು ಎಎಪಿ ಗೋವಾ ಮುಖ್ಯಸ್ಥ ಅಮಿತ್ ಪಾಲೇಕರ್ ಅವರು ಹೇಳಿದ್ದಾರೆ.

ಈ ಸಂಬಂಧ 2018 ರಲ್ಲಿ ಚಾರ್ಜ್ ಶೀಟ್ ಸಲ್ಲಿಸಿದಂತೆ ಕಾಣುತ್ತಿದ್ದು, ಆದರೆ ಪ್ರಕರಣದ ಬಗ್ಗೆ ಹೆಚ್ಚಿನ ವಿವರಗಳು ನಮಗೆ ತಿಳಿದಿಲ್ಲ ಎಂದು ಅವರು ಹೇಳಿದ್ದಾರೆ. ಬುಧವಾರ ದೆಹಲಿ ಸಿಎಂ ಕೇಜ್ರಿವಾಲ್ ಅವರ ಪರವಾಗಿ ತಾವು ನ್ಯಾಯಾಲಯಕ್ಕೆ ಹಾಜರಾಗುವುದಾಗಿ ವಕೀಲರೂ ಆಗಿರುವ ಪಾಲೇಕರ್ ಅವರು ತಿಳಿಸಿದ್ದಾರೆ.

## ನಿಮಗೆ ಈಗಾಗಲೇ 50 ವರ್ಷ ದಾಟಿದೆ, ಬಹುಶಃ ಒಂಟಿತನ ನಿಮ್ಮನ್ನು ಕಾಡುತ್ತಿರಬಹುದು: ರಾಹುಲ್ ಕಾಲೆಳೆದ ಓವೈಸಿ



ಹೈದರಾಬಾದ್: ನಿಮಗೆ ಈಗಾಗಲೇ 50 ವರ್ಷ ದಾಟಿದೆ. ಬಹುಶಃ ಒಂಟಿತನ ನಿಮ್ಮನ್ನು ಕಾಡುತ್ತಿರಬಹುದು ಎಂದು ಅಖಿಲ ಭಾರತ ಮಜ್ಲಿಸ್-ಎ-ಇತ್ತೆಹಾದ್-ಉಲ್-ಮುಸ್ಲಿಮೀನ್ ಅಧ್ಯಕ್ಷ ಅಸಾದುದ್ದೀನ್ ಓವೈಸಿ ವ್ಯಂಗ್ಯವಾಡಿದ್ದಾರೆ.

ಓವೈಸಿ ಅವರು ಪ್ರಧಾನಿ ನರೇಂದ್ರ ಮೋದಿ ಅವರ ಮಾಜಿ ಸ್ನೇಹಿತ ಎನ್ನುವ ರಾಹುಲ್ ಗಾಂಧಿ ಹೇಳಿಕೆಗೆ ಪ್ರತಿಕ್ರಿಯಿಸಿದ್ದಾರೆ. ನಾವು ಯಾರ ನಿರ್ಧಾರಗಳನ್ನು ಪ್ರಶ್ನೆ ಮಾಡುವುದಿಲ್ಲ, ಯಾರ ಜೀವನದಲ್ಲಿ ಹಸ್ತಕ್ಷೇಪ ಮಾಡಲು ಬಯಸುವುದಿಲ್ಲ, ಯಾರಿಗೂ ತೊಂದರೆ ಕೊಡುವುದಿಲ್ಲ. ನೀವೂ ಸಹ ನಿಮ್ಮನ್ನು ಚುಡಾಯಿಸಿದವರನ್ನು ಬಿಡಬೇಡಿ ಎಂದು ಹೇಳಿದ್ದಾರೆ.

ಇತ್ತೀಚೆಗೆ ತೆಲಂಗಾಣದಲ್ಲಿ ಚುನಾವಣಾ ಭಾಗವಾಗಿ ನಡೆದ ಸಾರ್ವಜನಿಕ ಸಭೆಯಲ್ಲಿ ರಾಹುಲ್ ಗಾಂಧಿ ಮಾತನಾಡಿದ್ದರು.

ಈ ವೇಳೆ ಆಡಳಿತರೂಢ ಭಾರತ್ ರಾಷ್ಟ್ರ ಸಮಿತಿ ಸರ್ಕಾರವನ್ನು ಭ್ರಷ್ಟ ಸರ್ಕಾರ ಎಂದು ಕಿಡಿ ಕಾರಿದ್ದರು.

ಅಲ್ಲದೇ ಪ್ರಧಾನಿ ಮೋದಿಗೆ ತೆಲಂಗಾಣ ಸಿಎಂ ಕೆ. ಚಂದ್ರಶೇಖರ್ ರಾವ್ ಮತ್ತು ಓವೈಸಿ ಇಬ್ಬರು ಸ್ನೇಹಿತರಿದ್ದಾರೆ ಎಂದು ನುಡಿದಿದ್ದರು. ಇದಕ್ಕೆ ಓವೈಸಿ ಪ್ರತಿಕ್ರಿಯಿಸಿದ್ದಾರೆ.

ಕೆಸಿಆರ್ ಮೋದಿ ಪ್ರಧಾನಿ ಆಗಬೇಕೆಂದು ಬಯಸುತ್ತಿದ್ದಾರೆ, ಅದೇ ರೀತಿ ಕೆಸಿಆರ್ ಮುಖ್ಯಮಂತ್ರಿ ಆಗಬೇಕೆಂದು ಮೋದಿ ಬಯಸುತ್ತಿದ್ದಾರೆ.

ಆದ್ದರಿಂದ ಕಾಂಗ್ರೆಸ್ ಪಕ್ಷವು ತೆಲಂಗಾಣದಲ್ಲಿ ಮೋದಿ ತೇನೃತ್ವದ ಬಿಜೆಪಿ ಸರ್ಕಾರವನ್ನು ಸೋಲಿಸುವ ಉದ್ದೇಶ ಹೊಂದಿದೆ.

ಮುಂಬರುವ ಚುನಾವಣೆಯಲ್ಲಿ ನಮ್ಮ ಪಕ್ಷ ಪ್ರಚಂಡ ಗೆಲುವು ಸಾಧಿಸಲಿದೆ ಎಂದು ಗುಡುಗಿದ್ದರು.

## ಮುಂಬೈ: ನೌಕಾಪಡೆಯಲ್ಲಿ ಅಗ್ನಿವೀರ್ ತರಬೇತಿ ಪಡೆಯುತ್ತಿದ್ದ ಕೇರಳ ಮೂಲದ 20 ವರ್ಷದ ಯುವತಿ ಆತ್ಮಹತ್ಯೆ




ಮುಂಬೈ: ಭಾರತೀಯ ನೌಕಾಪಡೆಯಲ್ಲಿ ಅಗ್ನಿವೀರ್ ತರಬೇತಿ ಪಡೆಯುತ್ತಿದ್ದ 20 ವರ್ಷದ ಮಹಿಳೆ ಮುಂಬೈನ ಐಎನ್‌ಎಸ್ ಹಮ್ಲಾದಲ್ಲಿರುವ ತನ್ನ ಹಾಸ್ಟೆಲ್ ಕೋಣೆಯಲ್ಲಿ ನೇಣು ಬಿಗಿದುಕೊಂಡು ಆತ್ಮಹತ್ಯೆ ಮಾಡಿಕೊಂಡಿದ್ದಾರೆ ಎಂದು ಪೊಲೀಸರು ಮಂಗಳವಾರ ತಿಳಿಸಿದ್ದಾರೆ.

ಕೇರಳ ಮೂಲದ ಯುವತಿ ಮಲಾಡ್‌ನ ಪಶ್ಚಿಮ ಉಪನಗರದಲ್ಲಿರುವ ಮಾಲ್ವಾನಿ ಪ್ರದೇಶದ ಐಎನ್‌ಎಸ್ ಹಮ್ಲಾದಲ್ಲಿ ತರಬೇತಿ ಪಡೆಯುತ್ತಿದ್ದರು. ಸೋಮವಾರ ಬೆಳಗ್ಗೆ ಆಕೆ ಹಾಸ್ಟೆಲ್ ಕೊಠಡಿಯಲ್ಲಿ ನೇಣು ಬಿಗಿದುಕೊಂಡು ಆತ್ಮಹತ್ಯೆ ಮಾಡಿಕೊಂಡಿದ್ದಾರೆ ಎಂದು ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

ಘಟನಾ ಸ್ಥಳದಲ್ಲಿ ಯಾವುದೇ ಡೆತ್ ನೋಟ್ ಪತ್ತೆಯಾಗಿಲ್ಲದಿದ್ದರೂ, ವೈಯಕ್ತಿಕ ಕಾರಣಗಳಿಂದ ಯುವತಿ ಆತ್ಮಹತ್ಯೆ ಮಾಡಿಕೊಂಡಿರಬಹುದು ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಯುವತಿ ತನ್ನ ಮೂಲಭೂತ ತರಬೇತಿಯನ್ನು ಪೂರ್ಣಗೊಳಿಸಿದ ನಂತರ ಕಳೆದ 15 ದಿನಗಳಿಂದ ಈ ಸೌಲಭ್ಯದಲ್ಲಿ ತರಬೇತಿ ಪಡೆಯುತ್ತಿದ್ದರು ಎಂದು ಅವರು ಹೇಳಿದರು.

ಪೊಲೀಸರು ಆಕಸ್ಮಿಕ ಸಾವಿನ ವರದಿಯನ್ನು (ಎಡಿಆರ್) ದಾಖಲಿಸಿಕೊಂಡಿದ್ದಾರೆ ಮತ್ತು ಹೆಚ್ಚಿನ ತನಿಖೆ ನಡೆಯುತ್ತಿದೆ ಎಂದು ಅಧಿಕಾರಿ ತಿಳಿಸಿದ್ದಾರೆ.

ಅಗ್ನಿವೀರ್‌ಗಳು 2022ರಲ್ಲಿ ಪರಿಚಯಿಸಲಾದ ಅಗ್ನಿಪಥ್ ಯೋಜನೆಯಡಿ ಸಶಸ್ತ್ರ ಪಡೆಗಳಿಗೆ ನೇಮಕಗೊಂಡಂತ ಸೈನಿಕರು.

ನೂತನ ಅಗ್ನಿಪಥ್ ಯೋಜನೆ ಅಡಿಯಲ್ಲಿ ಭಾರತೀಯ ಸೇನೆಯ ಮೂರು ವಿಭಾಗಗಳಲ್ಲಿ ಕೆಲಸ ಮಾಡಲು ಇಚ್ಛಿಸುವ ಯುವಕ-ಯುವತಿಯರು ತರಬೇತಿ ಸೇರಿದಂತೆ ನಾಲ್ಕು ವರ್ಷಗಳ ಕಾಲ 'ಅಗ್ನಿವೀರ್' ಎಂಬ ಹೆಸರಿನ ಯೋಧರಾಗಿ ಕೆಲಸ ಮಾಡಬಹುದಾಗಿದೆ. ನಾಲ್ಕು ವರ್ಷಗಳಲ್ಲಿ ಮೊದಲಿಗೆ ಆರು ತಿಂಗಳ ಕಠಿ ತರಬೇತಿ ಪಡೆಯಬೇಕಿರುತ್ತದೆ. ಅಗ್ನಿವೀರರಾಗಲು 10ನೇ ತರಗತಿ ಮತ್ತು ಪಿಯುಸಿ ಪಾಸಾದವರು ಅರ್ಹರು.

## ಬೆಳಗಾವಿ ಚಳಿಗಾಲ ಅಧಿವೇಶನಕ್ಕೆ 5 ಸಾವಿರ ಪೊಲೀಸರ ನಿಯೋಜನೆ



ಬೆಳಗಾವಿ: ಡಿ. 4 ರಿಂದ 15 ರವರೆಗೆ ಸುವರ್ಣ ವಿಧಾನಸೌಧದಲ್ಲಿ ನಡೆಯಲಿರುವ ರಾಜ್ಯ ವಿಧಾನಮಂಡಲದ ಚಳಿಗಾಲದ ಅಧಿವೇಶನದ ಭದ್ರತೆಗಾಗಿ 5 ಸಾವಿರಕ್ಕೂ ಹೆಚ್ಚು ಪೊಲೀಸ್ ಸಿಬ್ಬಂದಿಯನ್ನು ನಿಯೋಜಿಸಲಾಗಿದೆ ಎಂದು ಪೊಲೀಸ್ ಆಯುಕ್ತ ಎಸ್.ಎನ್.ಸಿದ್ದರಾಮಪ್ಪ ಹೇಳಿದರು.

ಮಾಧ್ಯಮ ಪ್ರತಿನಿಧಿಗಳೊಂದಿಗೆ ಮಾತನಾಡಿದ ಅವರು ವಿಧಾನಮಂಡಲ ಅಧಿವೇಶನಕ್ಕೆ ಅಗತ್ಯ ಭದ್ರತಾ ವ್ಯವಸ್ಥೆ ಮಾಡಲಾಗುತ್ತಿದೆ ಎಂದು ಅವರು, 12 ಜನ ಎಸ್ಪಿ, 42 ಡಿವೈಎಸ್ಪಿಗಳು ಮತ್ತು 100 ಜನ ಪೊಲೀಸ್ ಇನ್ಸ್‌ಪೆಕ್ಟರ್‌ಗಳು ಸೇರಿದಂತೆ 5 ಸಾವಿರಕ್ಕೂ ಹೆಚ್ಚು ಪೊಲೀಸರನ್ನು ಭದ್ರತೆಗೆ ನಿಯೋಜಿಸಲಾಗಿದೆ. ಮತ್ತು ಪೊಲೀಸ್ ಸಿಬ್ಬಂದಿಗೆ ವಸತಿ ಕಲ್ಪಿಸಲು ಒಟ್ಟು 15 ಸ್ಥಳಗಳನ್ನು ಗುರುತಿಸಲಾಗಿದೆ ಎಂದರು.

ವೆಚ್ಚ ತಗ್ಗಿಸಲು ಕ್ರಮ: ಚಳಿಗಾಲದ ಅಧಿವೇಶನದ ವೆಚ್ಚ ಕಡಿಮೆ ಮಾಡಲು ಜಿಲ್ಲಾಡಳಿತ ಕಸರತ್ತು ನಡೆಸಿದೆ.

ಕಳೆದ ವರ್ಷ 17.50 ಕೋಟಿ ರೂ. ವೆಚ್ಚವಾಗಿತ್ತು. ಈ ಬಾರಿ ಅದಕ್ಕಿಂತ ಕಡಿಮೆ ಮಾಡುವ ಗುರಿ ನೀಡಲಾಗಿದೆ. ಅಧಿವೇಶನದ ವೆಚ್ಚ ವರ್ಷದಿಂದ ವರ್ಷಕ್ಕೆ ಹೆಚ್ಚುತ್ತಿದೆ.

ಇದೇ ಸೌಧದಲ್ಲಿ 2012ರಲ್ಲಿ ನಡೆದ ಮೊದಲ ಅಧಿವೇಶನಕ್ಕೆ 7.39 ಕೋಟಿ ರೂ. ವೆಚ್ಚವಾದರೆ, 2022ರ ಅಧಿವೇಶನಕ್ಕೆ 17.50 ಕೋಟಿ ರೂ. ವೆಚ್ಚವಾಗಿತ್ತು. ಬೆಳಗಾವಿಯಲ್ಲಿ ಈವರೆಗೆ ನಡೆದಿರುವ 11 ಅಧಿವೇಶನಗಳಿಗೆ ಬರೋಬ್ಬರಿ 131.3 ಕೋಟಿ ವೆಚ್ಚವಾಗಿದೆ.

News

# ಅಪರಿಚಿತ ಮೃತದೇಹ ಪತ್ತೆ

ಬೆಳಗಾವಿ: ಸುತಗಟ್ಟಿ ಗ್ರಾಮದ ಘಟಪ್ರಭಾ ನದಿ ದಡದ ಮೇಲೆ ನವ್ಹೆಂಬರ್ 21, 2023 ರಂದು 30 ರಿಂದ 45 ವರ್ಷ ವಯಸ್ಸಿನ ಅಪರಿಚಿತ ಯುವಕನ ಮೃತದೇಹ ಪತ್ತೆಯಾಗಿದೆ.

ಮೃತ ವ್ಯಕ್ತಿಯ ವಿವರ: ಎತ್ತರ 5 ಪೂಟ 4 ಇಂಚ, ಕೆಂಪು ಬಣ್ಣದ ಉದ್ದ ತೋಳಿನ ಶರ್ಟ ಕಂದು ಬಣ್ಣದ ಪ್ಯಾಂಟ, ಕಪ್ಪು ಕೂದಲು ಇರುತ್ತವೆ.

ಸದರಿ ಮೃತನ ವಾರಸುದಾರರು ಯಾರಾದರೂ ಪತ್ತೆಯಾದಲ್ಲಿ ಕಾಕತಿ ಪೋಲೀಸ್‌ಠಾಣೆ ದೂ.ಸಂ. 0831–2405203, ಪಿ.ಐ 9480804115, ಪಿ.ಎಸ್.ಐ 9480804083 ಅಥವಾ **kakatibgm@ksp.gov.in** ಗೆ ಸಂಪರ್ಕಿಸಬಹುದು ಎಂದು ಠಾಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕುರಿ ಮತ್ತು ಮೇಕೆ ಸಾಕಾಣಿಕೆ 10 ದಿನಗಳ ತರಬೇತಿ: ಅರ್ಜಿ ಆಹ್ವಾನ

ಬೆಳಗಾವಿ: ಬೆಳಗಾವಿ ಜಿಲ್ಲೆಯ ಗ್ರಾಮೀಣ ಪ್ರದೇಶದ ಮತ್ತು ನಿರುದ್ಯೋಗ ಯುವಕ ಯುವತಿಯರಿಗೆ ಉದ್ಯೋಗ ತರಬೇತಿ ನೀಡುವ ಉದ್ದೇಶದಿಂದ ಬೆಳಗಾವಿಯ ಕೆನರಾ ಬ್ಯಾಂಕ್ ಗ್ರಾಮೀಣ ಸ್ವ ಉದ್ಯೋಗ ತರಬೇತಿ ಸಂಸ್ಥೆ (ಸಿಬಿ ಆರ್‌ಸೆಟಿ) ವತಿಯಿಂದ ಕುರಿ ಮತ್ತು ಮೇಕೆ ಸಾಕಾಣಿಕೆ 10 ದಿನಗಳ ತರಬೇತಿಯನ್ನು ನವೆಂಬರ್ 28 ರಂದು ಹಮ್ಮಿಕೊಳ್ಳಲಾಗಿದೆ. ಆಸಕ್ತ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ತರಬೇತಿ ಪಡೆಯುವ ಅಭ್ಯರ್ಥಿಗಳು 18 ರಿಂದ 45 ವಯಸ್ಸಿನವರಾಗಿರಬೇಕು. ಗಾಮೀಣ ಪ್ರದೇಶದವರಾಗಿರಬೇಕು (ಮೊದಲ ಆದ್ಯತೆ). ಬಿಪಿಎಲ್ ಅಥವಾ ಜಾಬ್ ಕಾರ್ಡ್ ಹೊಂದಿರಬೇಕು. ಅರ್ಜಿಯನ್ನು ಸಂಸ್ಥೆಯ ಅರ್ಜಿ ನಮೂನೆಯಲ್ಲಿ ಅಥವಾ ಬಿಳಿಹಾಳೆಯಲ್ಲಿ ನೇರವಾಗಿ ಕಾರ್ಯಾಲಯಕ್ಕೆ, ಪೋಸ್ಟ್ ಮುಖಾಂತರ ಅಥವಾ ಇಮೇಲ್(cbrsetibelagavi@gmail.com) ಗೆ ಕಳುಹಿಸಬಹುದು ಅಥವಾ ಗೂಗಲ್ ಲಿಂಕ್ (https://forms.gle/Y1hntNgHijkmga8d7) ಅರ್ಜಿ ಮೂಲಕ ಅರ್ಜಿ ಸಲ್ಲಿಸಬೇಕು.

ಅರ್ಜಿ ಸಲ್ಲಿಸಲು ಬಿಪಿಎಲ್ ಕಾರ್ಡ್, ಆಧಾರ್ ಕಾರ್ಡ್, ಬ್ಯಾಂಕ್ ಪಾಸ್ ಬುಕ್, ಮೂರು ಪಾಸ್‌ಪೋರ್ಟ್ ಸೈಜ್ ಭಾವಚಿತ್ರ ಕಡ್ಡಾಯ. ಅರ್ಜಿ ಸಲ್ಲಿಸಲು ನವೆಂಬರ್.25 ಕೊನೆ ದಿನವಾಗಿದೆ.

ತರಬೇತಿ ಅವಧಿಯಲ್ಲಿ ಊಟ ಮತ್ತು ವಸತಿ ಉಚಿತವಾಗಿದೆ. ಹೆಚ್ಚಿನ ಮಾಹಿತಿಗಾಗಿ ಕೆನರಾ ಬ್ಯಾಂಕ್ ಗ್ರಾಮೀಣ ಸ್ವ ಉದ್ಯೋಗ ತರಬೇತಿ ಸಂಸ್ಥೆ (ಸಿಬಿ ಆರ್‌ಸೆಟಿ), ಪಾಟ್ ನಂ. ಸಿಎ–03 (ಪಾರ್ಟ್) ಕಣಬರ್ಗಿ ಇಂಡಸ್ಟ್ರಿಯಲ್ ಏರಿಯಾ, ಆಟೋ ನಗರ. ಬೆಳಗಾವಿ–590015. ದೂ.ನಂ. 0831–2440644, 7829601768, 9845750043, 8050406866, 8867388906,9449860564 ಸಂಪರ್ಕಿಸಬಹುದು ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ.

# ವಿವಿಧ ಹುದ್ದೆಗಳಿಗೆ ತಾತ್ಕಾಲಿಕ ಆಧಾರದ ಮೇಲೆ ಭರ್ತಿ

ಬೆಳಗಾವಿ: ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಬೆಳಗಾವಿಯ ಅಡಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಕಾನೂನು ಅಭಿರಕ್ಷಣಾ ವ್ಯವಸ್ಥೆ (Legal Aid Defense Counsel System) ಯಲ್ಲಿ ತಾತ್ಕಾಲಿಕ ಆಧಾರದ ಮೇಲೆ ಮಾಸಿಕ ಸಂಬಳದೊಂದಿಗೆ 06 ತಿಂಗಳ ಅವಧಿಗಾಗಿ ಕಚೇರಿ ಸಹಾಯಕ/ಗುಮಾಸ್ತ ಹಾಗೂ ಸ್ವಾಗತಕಾರ–ವ–ದತ್ತಾಂಶ ನಮೂದಕರ (Receptionist-cum-Data Entry operator) ನೇಮಕಾತಿಗಾಗಿ ಅಧಿಸೂಚನೆಯನ್ನು ಹೊರಡಿಸಿದ್ದು, ಸದರಿ ಹುದ್ದೆಗಳಿಗೆ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ. 0831–2423216 ಹಾಗೂ ವಿದ್ಯುನ್ಮಾನ ಅಂಚೆ: dlsa.belgaum2@gmail.com ಮೂಲಕ ಸಂಪರ್ಕಿಸಬಹುದು ಎಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಸದಸ್ಯ ಕಾರ್ಯದರ್ಶಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ನ.30 ರಂದು ಕನಕದಾಸ ಜಯಂತ್ಯೋತ್ಸವ–2023 ಆಚರಣೆ

ಬೆಳಗಾವಿ: ಬೆಳಗಾವಿಯ ಜಿಲ್ಲಾಡಳಿತ ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಮಹಾನಗರ ಪಾಲಿಕೆ ಇವರ ಸಂಯುಕ್ತ ಆಶ್ರಯದಲ್ಲಿ ಕನಕದಾಸ ಜಯಂತ್ಯೋತ್ಸವವನ್ನು ನವೆಂಬರ್ 30, 2023 ರಂದು ಆಚರಿಸಲಾಗುತ್ತಿದೆ.

ಬೆಳಿಗ್ಗೆ 11 ಗಂಟೆಗೆ ಕನಕದಾಸ ವೃತ್ತದಿಂದ ಕುಮಾರ ಗಂಧರ್ವ ಕಲಾಮಂದಿರದವರೆಗೆ ಭಾವಚಿತ್ರದ ಮೆರವಣಿಗೆ ನಡೆಯಲಿದೆ. ಮಧ್ಯಾಹ್ನ 12.30 ಕ್ಕೆ ವೇದಿಕೆ ಕಾರ್ಯಕ್ರಮ ಜರುಗಲಿದೆ.

ಜಿಲ್ಲಾ ಉಸ್ತುವಾರಿ ಹಾಗೂ ಲೋಕೋಪಯೋಗಿ ಸಚಿವರಾದ ಸತೀಶ ಲ. ಜಾರಕಿಹೊಳಿಯವರು ಕಾರ್ಯಕ್ರಮವನ್ನು ಉದ್ಘಾಟಿಸಲಿದ್ದಾರೆ. ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಸಚಿವರಾದ ಲಕ್ಷ್ಮಿ ಆರ್. ಹೆಬ್ಬಾಳ್ಕರ್ ಅವರು ಮುಖ್ಯ ಅತಿಥಿಗಳಾಗಿ ಆಗಮಿಸಲಿದ್ದಾರೆ.

ಶಾಸಕರಾದ ಆಸೀಫ್ ಸೇಠ್ ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಲಿದ್ದಾರೆ. ಸರ್ಕಾರಿ ಮುಖ್ಯ ಸಚೇತಕರಾದ ಅಶೋಕ ಮ. ಪಟ್ಟಣ, ಕರ್ನಾಟಕ ಸರ್ಕಾರದ ಮಾನ್ಯ ವಿಶೇಷ ಪ್ರತಿನಿಧಿ–2 ನವದೆಹಲಿ ಪ್ರಕಾಶ್ ಬಾ. ಹುಕ್ಕೇರಿ ವಿಶೇಷ ಆಮಂತ್ರಿತರಾಗಿದ್ದಾರೆ.

ಆರ್ಪಿ.ಡಿ ಮಹಾವಿದ್ಯಾಲಯದ ಕನ್ನಡ ಪ್ರಾಧ್ಯಾಪಕರಾದ ಡಾ. ಎಚ್. ಬಿ. ಕೋಲಕಾರ ಅವರು ಉಪನ್ಯಾಸ ನೀಡಲಿದ್ದಾರೆ ಹಾಗೂ ಸೀಮಾ ಕುಲಕರ್ಣಿ ಹಾಗೂ ತಂಡದವರಿಂದ ಸಂಗೀತ ಕಾರ್ಯಕ್ರಮ ನಡೆಯಲಿದೆ.

ಬೆಳಗಾವಿ ವಿಭಾಗದ ಪ್ರಾದೇಶಿಕ ಆಯುಕ್ತರಾದ ಸಂಜಯ್ ಬಿ. ಶಟ್ಟೆಣ್ಣವರ್, ಪೊಲೀಸ್ ಮಹಾನಿರೀಕ್ಷಕರಾದ ವಿಕಾಶ್ ಕುಮಾರ್ ವಿಕಾಶ್, ಜಿಲ್ಲಾಧಿಕಾರಿಗಳಾದ ನಿತೇಶ್ ಕೆ. ಪಾಟೀಲ, ಪೊಲೀಸ್ ಆಯುಕ್ತರಾದ ಎಸ್.ಎನ್. ಸಿದ್ದರಾಮಪ್ಪ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಭೀಮಾಶಂಕರ್ ಎಸ್. ಗುಳೇದ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಹರ್ಷಲ್ ಭೋಯರ್, ಮಹಾನಗರ ಪಾಲಿಕೆ ಆಯುಕ್ತರಾದ ಅಶೋಕ ದುಡಗುಂಟಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಉಪನಿರ್ದೇಶಕರಾದ ವಿದ್ಯಾವತಿ ಭಜಂತ್ರಿ, ಸಮಾಜದ ಮುಖಂಡರು ಹಾಗೂ ಮತ್ತಿತರ ಗಣ್ಯರು ಜಯಂತ್ಯೋತ್ಸವದ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಲಿದ್ದಾರೆ.

## ಗ್ರಾಮವನ್ನೇ ಮಾರಾಟ ಮಾಡಲು ಮುಂದಾದ ಪಿಡಿಒ–ಬಿಲ್ ಕಲೆಕ್ಟರ ಸಸ್ಪೆಂಡ್




ಚಿಕ್ಕಬಳ್ಳಾಪುರ: ನಕಲಿ ಖಾತೆ ಸೃಷ್ಟಿಸಿ ಇಡೀ ಗ್ರಾಮವನ್ನೇ ಮಾರಾಟ ಮಾಡಲು ಮುಂದಾದ ಪ್ರಕರಣವೊಂದು ಚಿಕ್ಕಬಳ್ಳಾಪುರ ತಾಲ್ಲೂಕಿನ ಅವಲಗುರ್ಕಿ ಗ್ರಾಮಪಂಚಾಯತಿ ನಡೆದಿದೆ. ಈ ಪ್ರಕರಣಕ್ಕೆ ಸಂಬಂಧಿಸಿ ಪಂಚಾಯತಿ ಬಿಲ್ ಕಲೆಕ್ಟರನ್ನು ಸಸ್ಪೆಂಡ್ ಮಾಡಲಾಗಿದೆ. ಇಶಾ ಫೌಂಡೇಶನ್ ಬಳಿ ಇರುವ ಸರ್ಕಾರಿ ಗ್ರಾಮ ಠಾಣ್ ಸ್ಥಳವನ್ನು ಅಕ್ರಮ ಮಾರಾಟ ಮಾಡಲು ಪಂಚಾಯತಿ ಸದಸ್ಯರು ಹಾಗೂ ಸಿಬ್ಬಂದಿ ಮುಂದಾಗಿದ್ದರು. ನನಗೊಂದು ನನ್ನ ಹೆಂಡತಿ ಮಕ್ಕಳಿಗೊಂದು ಅಂತ ಸೈಟ್ ಗಳನ್ನ ಹಂಚಿಕೊಂಡಿದ್ದರು. ಈ ವಿಚಾರ ತಿಳಿದಂತೆ ಚಿಕ್ಕಬಳ್ಳಾಪುರ ಜಿಲ್ಲಾ ಪಂಚಾಯತಿ ಸಿಇಓ ಪ್ರಕಾಶ್ ಜಿ ನಿಟ್ಟಾಲಿ ತನಿಖೆಗೆ ಆದೇಶಿಸಿದ್ದರು.

ತನಿಖೆಯಲ್ಲಿ ಮೊದಲು ಗ್ರಾಮ ಪಂಚಾಯ್ತಿ ಪಿಡಿಒ ಎಂ.ಸಿ. ವೆಂಕಟೇಶ ನನ್ನ ಅಮಾನತು ಮಾಡಲಾಗಿತ್ತು. ನಂತರ ಗ್ರಾ.ಪಂ ಅಧ್ಯಕ್ಷೆ ನಾಗಮಣಿ ಅನುಮತಿ ಮೇರೆಗೆ ಪಿಡಿಒ ಅರುಣ ಗೋಪಿ ಆದೇಶ ಹೊರಡಿಸಿದ್ದು, ಅವಲಗುರ್ಕಿ ಗ್ರಾಮಪಂಚಾಯತಿ ಬಿಲ್ ಕಲೆಕ್ಟರ್ ಪ್ರಕಾಶ್ನನ್ನು ಸಸ್ಪೆಂಡ್ ಮಾಡಲಾಗಿದೆ.

# 4ನೇ ಹಂತದಲ್ಲಿ 11 ಒತ್ತೆಯಾಳುಗಳನ್ನು ಬಿಡುಗಡೆ ಮಾಡಿದ ಹಮಾಸ್, ಕದನ ವಿರಾಮ 2 ದಿನ ವಿಸ್ತರಣೆ

ಜೆರುಸಲೇಂ: ಕದನ ವಿರಾಮ ಒಪ್ಪಂದದಂತೆ 4ನೇ ಹಂತದಲ್ಲಿ 11 ಮಂದಿ ಇಸ್ರೇಲಿ ಒತ್ತೆಯಾಳುಗಳನ್ನು ಹಮಾಸ್ ಬಂಡುಕೋರರು ಬಿಡುಗಡೆ ಮಾಡಿದ್ದಾರೆ.

ಒತ್ತೆಯಾಳುಗಳನ್ನು ಗಾಜಾಪಟ್ಟಿಯಲ್ಲಿರುವ ರೆಡ್‌ಕ್ರಾಸ್ ಪ್ರತಿನಿಧಿಗಳಿಗೆ ಒಪ್ಪಿಸಲಾಗಿದೆ ಎಂದು ಇಸ್ರೇಲ್ ರಕ್ಷಣಾ ಪಡೆ **(IDF)** ದೃಢಪಡಿಸಿದೆ. ಕದನ ವಿರಾಮ ಘೋಷಣೆಯ 4ನೇ ದಿನವಾದ ಸೋಮವಾರ ಈ ಪ್ರಕ್ರಿಯೆ ನಡೆದಿದೆ.

'ಒಪ್ಪಂದದಂತೆ ನಿನ್ನೆ 11 ಮಂದಿ ಇಸ್ರೇಲಿ ಒತ್ತೆಯಾಳುಗಳನ್ನು ಬಿಡುಗಡೆ ಮಾಡಲಾಗಿದೆ. ಇದಕ್ಕೆ ಪ್ರತಿಯಾಗಿ ಇಸ್ರೇಲ್ ಕೂಡ 33 ಮಂದಿ ಪ್ಯಾಲೆಸ್ಟೀನಿ ಕೈದಿಗಳನ್ನು ಬಿಡುಗಡೆ ಮಾಡಿದೆ' ಎಂದು ಕತಾರ್‌ನ ವಿದೇಶಾಂಗ ಸಚಿವಾಲಯದ ವಕ್ತಾರ ಮಜೀದ್ ಅಲ್ ಅನ್ಸಾರಿ ಅವರು ಹೇಳಿದ್ದಾರೆ.



**2 ದಿನ ಕದನ ವಿರಾಮ ವಿಸ್ತರಣೆ**

ಈ ನಡುವೆ ಇಸ್ರೇಲ್ ಕದನದಲ್ಲಿ ಮತ್ತೆರಡು ದಿನಗಳ ಯುದ್ಧ ವಿರಾಮವನ್ನು ಘೋಷಣೆ ಮಾಡಲಾಗಿದೆ. ಈ ಮೊದಲಿನ ಒಪ್ಪಂದಂತೆ 4 ದಿನಗಳ ಕದನ ವಿರಾಮ ಸೋಮವಾರಕ್ಕೆ ಅಂತ್ಯವಾಗಬೇಕಿತ್ತು. ಆದರೆ, ಮಾನವೀಯತೆಯ ದೃಷ್ಟಿಯಿಂದ 2 ದಿನ ವಿಸ್ತರಣೆ ಮಾಡಲಾಗಿದೆ.

ಈ ವೇಳೆ ಮತ್ತಷ್ಟು ಒತ್ತೆಯಾಳುಗಳನ್ನು ಉಭಯ ಬಣಗಳು ವಿನಿಮಯ ಮಾಡಿಕೊಳ್ಳಲಿವೆ. ಕದನ ವಿರಾಮದ 3ನೇ ದಿನ ಹಮಾಸ್ 17 ಜನರನ್ನು, ಇಸ್ರೇಲ್ 39 ಜನರನ್ನು ಬಿಡುಗಡೆ ಮಾಡಿದೆ.

2ನೇ ದಿನ ಹಮಾಸ್ 20 ಇಸ್ರೇಲಿಗರು, ಇಸ್ರೇಲ್ 39 ಪ್ಯಾಲೆಸ್ತೀನಿ ಕೈದಿಗಳನ್ನು ಬಿಡುಗಡೆ ಮಾಡಿದ್ದವು.

ಮೂರನೇ ದಿನ 39 ಕೈದಿಗಳನ್ನು ಹಾಗೂ ಹಮಾಸ್ 24 ಮಂದಿ ಒತ್ತೆಯಾಳುಗಳನ್ನು ಬಿಡುಗಡೆ ಮಾಡಿದ್ದವು.

ಇಸ್ರೇಲ್ ಮತ್ತು ಹಮಾಸ್ ನಡುವೆ ನಾಲ್ಕು ದಿನಗಳ ಕದನ ವಿರಾಮ ಶುಕ್ರವಾರ (ನವೆಂಬರ್ 24) ರಂದು ಪ್ರಾರಂಭವಾಯಿತು.

ಇದರಂತೆ ಹಮಾಸ್ ಹಾಗೂ ಇಸ್ರೇಲ್ ನಡುವಿನ ಒಪ್ಪಂದದನ್ವಯ 3 ಹಾಗೂ 1ರ ಅನುಪಾತದಲ್ಲಿ ಒತ್ತೆಯಾಳುಗಳ ಬಿಡುಗಡೆ ಪ್ರಕ್ರಿಯೆ ನಡೆಯುತ್ತಿದೆ.

ಅಂದರೆ ಹಂತ, ಹಂತವಾಗಿ ಹಮಾಸ್ ಬಂಡುಕೋರರಿಂದ 50 ಒತ್ತೆಯಾಳುಗಳ ಬಿಡುಗಡೆ ಹಾಗೂ ಪ್ರತಿಯಾಗಿ ಇಸ್ರೇಲ್‌ನಿಂದ 150 ಪ್ಯಾಲೆಸ್ಟೀನ್ ಕೈದಿಗಳ ಬಿಡುಗಡೆ ಕುರಿತಂತೆ ಒಪ್ಪಂದ ಆಗಿತ್ತು.

ಅಕ್ಟೋಬರ್ 7 ರಂದು ಹಮಾಸ್ ಉಗ್ರರು ಇಸ್ರೇಲ್ ಮೇಲೆ 5 ಸಾವಿರಕ್ಕೂ ಅಧಿಕ ರಾಕೆಟ್ಗಳಿಂದ ದಾಳಿ ನಡೆಸಿದ್ದರು. ಅದಕ್ಕೆ ಪ್ರತಿಯಾಗಿ ಇಸ್ರೇಲ್ ಗಾಜಾದಲ್ಲಿ ದಾಳಿ ಆರಂಭಿಸಿತ್ತು.

ಹಮಾಸ್ನ್ನು ಹತ್ತಿಕ್ಕುವವರೆಗೂ ಯುದ್ಧವನ್ನು ನಿಲ್ಲಿಸುವುದಿಲ್ಲ ಎಂದು ಇಸ್ರೇಲ್ ಹೇಳಿತ್ತು. ಅಷ್ಟೇ ಅಲ್ಲದೆ, ಯುದ್ಧವನ್ನು ನಾವು ಪ್ರಾರಂಭಿಸಿಲ್ಲ ಆದರೆ ಅಂತ್ಯ ನಮ್ಮಿಂದಲೇ ಆಗಲಿದೆ ಎಂದು ಇಸ್ರೇಲ್ ಪ್ರಧಾನಿ ಬೆಂಜಮಿನ್ ನೇತನ್ಯಾಹು ಹೇಳಿದ್ದರು.

# ಜ್ಞಾನವಾಪಿ ಮಸೀದಿ: ವೈಜ್ಞಾನಿಕ ಸಮೀಕ್ಷೆ ವರದಿ ಸಲ್ಲಿಸಲು ಮತ್ತೆ ಸಮಯ ಕೋರಿದ ಎಎಸ್ಐ

ವಾರಣಾಸಿ: ಜ್ಞಾನವಾಪಿ ಮಸೀದಿ ಸಂಕೀರ್ಣದ ವೈಜ್ಞಾನಿಕ ಸಮೀಕ್ಷೆ ವರದಿ ಸಲ್ಲಿಸಲು ಭಾರತೀಯ ಪುರಾತತ್ವ ಸರ್ವೇಕ್ಷಣಾ ಇಲಾಖೆ(ಎಎಸ್ಐ) ಮಂಗಳವಾರ ಇಲ್ಲಿನ ಜಿಲ್ಲಾ ನ್ಯಾಯಾಲಯಕ್ಕೆ ಮೂರು ವಾರಗಳ ಕಾಲಾವಕಾಶ ಕೋರಿದೆ. ನ್ಯಾಯಾಲಯ ಬುಧವಾರ ಅರ್ಜಿಯ ವಿಚಾರಣೆ ನಡೆಸಲಿದೆ.

ವಾರಣಾಸಿಯ ಜಿಲ್ಲಾ ನ್ಯಾಯಾಲಯ ನವೆಂಬರ್ 28 ರೊಳಗೆ ಜ್ಞಾನವಾಪಿ ಮಸೀದಿ ಸಂಕೀರ್ಣದ ವರದಿ ಸಲ್ಲಿಸುವಂತೆ ಎಎಸ್ಐಗೆ ಸೂಚಿಸಿತ್ತು.

ಎಎಸ್ಐ ವರದಿ ಸಲ್ಲಿಸಲು ಇನ್ನೂ ಮೂರು ವಾರಗಳ ಕಾಲಾವಕಾಶ ಕೋರಿ ಅರ್ಜಿ ಸಲ್ಲಿಸಿದೆ.



ವಿಭಿನ್ನ ತಜ್ಞರು ರಚಿಸಿದ ಮಾಹಿತಿಯನ್ನು ಒಟ್ಟುಗೂಡಿಸಲು ಹೆಚ್ಚಿನ ಸಮಯ ಬೇಕಾಗುತ್ತದೆ ಎಂದು ಹಿಂದೂ ಪರ ವಕೀಲ ಮದನ್ ಮೋಹನ್ ಯಾದವ್ ಅವರು ತಿಳಿಸಿದ್ದಾರೆ.

ಪುರಾತತ್ವಶಾಸ್ತ್ರಜ್ಞರು, ಸರ್ವೇಯರ್‌ಗಳು ಮತ್ತು ಇತರ ತಜ್ಞರು ಸಂಗ್ರಹಿಸಿದ ವಿವಿಧ ರೀತಿಯ ದತ್ತಾಂಶಗಳ ಮೇಲೆ ತಜ್ಞರು ಕೆಲಸ ಮಾಡುತ್ತಿದ್ದಾರೆ ಎಂದು ಎಎಸ್ಐ ತನ್ನ ಅರ್ಜಿಯಲ್ಲಿ ತಿಳಿಸಿದೆ.

"ವಿವಿಧ ತಜ್ಞರು ಮತ್ತು ವಿಭಿನ್ನ ಸಾಧನಗಳಿಂದ ರಚಿಸಲಾದ ಮಾಹಿತಿಯನ್ನು ಒಟ್ಟುಗೂಡಿಸುವುದು ಕಷ್ಟಕರ ಮತ್ತು ನಿಧಾನ ಪ್ರಕ್ರಿಯೆಯಾಗಿದೆ. ಅಂತಿಮವಾಗಿ ವರದಿ ಸಿದ್ಧಪಡಿಸಲು ಇನ್ನೂ ಸ್ವಲ್ಪ ಸಮಯ ತೆಗೆದುಕೊಳ್ಳುತ್ತದೆ. ಆದ್ದರಿಂದ ಅದನ್ನು ಸಲ್ಲಿಸಲು ಎಎಸ್ಐಗೆ ಇನ್ನೂ ಮೂರು ವಾರಗಳ ಕಾಲಾವಕಾಶ ನೀಡುವಂತೆ ನ್ಯಾಯಾಲಯವನ್ನು ಕೋರಲಾಗಿದೆ" ಎಂದು ಯಾದವ್ ಅವರು ಹೇಳಿದ್ದಾರೆ.

# ಮಕ್ಕಳ ಸಾಹಿತ್ಯ ಪರಿಷತ್ತಿಗೆ ಪದಾಧಿಕಾರಿಗಳ ನೇಮಕ

ಬೈಲಹೊಂಗಲ: ಕರ್ನಾಟಕ ರಾಜ್ಯ ಮಕ್ಕಳ ಸಾಹಿತ್ಯ ಪರಿಷತ್ (ರಿ) ತಾಲೂಕಾ ಘಟಕಕ್ಕೆ ನೂತನ ಪದಾಧಿಕಾರಗಳನ್ನು ನೇಮಕ ಮಾಡಲಾಗಿದೆ.

ರಮೇಶ ಇಂಗಳಗಿ (ಗೌರವ ಅಧ್ಯಕ್ಷ), ಸಿ.ವಾಯ್. ಮೆನಸಿನಕಾಯಿ (ತಾಲೂಕಾ ಅಧ್ಯಕ್ಷ), ರಾಜು ಬಡಿಗೇರ (ಉಪಾಧ್ಯಕ್ಷರು), ಶಿವಬಸ್ಸು ಮೆಳವಂಕಿ (ಕೋಶ್ಯಾಧ್ಯಕ್ಷರು), ಆನಂದ ಮಾಲಗತ್ತಿಮಠ (ಪ್ರಧಾನ ಕಾರ್ಯದರ್ಶಿ), ಶಂಕರ ಮದಲಭಾಂವಿ(ಸಹ ಕಾರ್ಯದರ್ಶಿ), ಮಹಾಂತೇಶ ರಾಜಗೋಳಿ (ಸಂಘಟನಾ ಕಾರ್ಯದರ್ಶಿ), ಸರಸ್ವತಿ ಬನ್ನಿಗಿಡದ (ಮಹಿಳಾ ಕಾರ್ಯದರ್ಶಿ), ಈಶ್ವರ ಶಿಲ್ಲೇದಾರ (ಮಾಧ್ಯಮ ವಕ್ತಾರ) ಎಸ್.ಎಸ್.ಪಾಟೀಲ, ಸಿದ್ದು ನೇಸರಗಿ, ರಾಜು ಹರಕುಣಿ, ಭಾರತಿ ಕಿತ್ತೂರಮಠ ನಿರ್ದೇಶಕರಾಗಿ ಆಯ್ಕೆಯಾಗಿದ್ದಾರೆ ಎಂದು ಜಿಲ್ಲಾಧ್ಯಕ್ಷ ಸಿದ್ರಾಮ ನಿಲಜಗಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವ್ಯಕ್ತಿ ಕಾಣೆ

ಮಂಗಳೂರು: ಕುಳಾಯಿ ಕೃಷ್ಣನಗರದ ನಿವಾಸಿ ಉಸ್ಮಾನ್ ಅಹಮದ್ (44) ಎಂಬವರು ಕಾಣೆಯಗಿರುವ ಗ್ಗೆ ಸುರತ್ಕಲ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಸಾಲದ ವಿಚಾರವಾಗಿ ಜಗಳವಾಗಿ ಮುಕ್ಕದಲ್ಲಿರುವ ತಾಯಿ ಮನೆಗೆ ಹೋಗಿದ್ದು, ಎರಡು ದಿನಗಳ ಬಳಿಕ ತಾನು ಮಕ್ಕಳನ್ನು ಹೆಂಡತಿಯ ಮನೆಯಲ್ಲಿ ಬಿಟ್ಟು ಬರುವುದಾಗಿ ತಿಳಿಸಿ ಹೋದವರು ವಾಪಾಸ್ಸು ಮನೆಗೆ ಬಾರದೆ ನವೆಂಬರ್ 15ರಂದು ಕಾಣೆಯಾಗಿದ್ದಾರೆ.

ಚಹರೆ: ಎತ್ತರ 5.8 ಅಡಿ, ಕಪ್ಪು ಮೈಬಣ್ಣ ಚಿಗುರು ಮೀಸೆ, ಕನ್ನಡ, ತುಳು, ಬ್ಯಾರಿ, ಹಿಂದಿ, ಮಲಯಾಳಂ ಹಾಗೂ ತಮಿಳು ಭಾಗಫ ಮಾತನಾಡುತ್ತಾರೆ. ಕಾಣೆಯಾಗುವಾಗ ನೀಲಿ ಬಣ್ಣದ ಶರ್ಟ್ ಮತ್ತು ಕಪ್ಪು ಬಣ್ಣದ ಜೀನ್ಸ್ ಪ್ಯಾಂಟ್ ಧರಿಸಿರುತ್ತಾರೆ.

ಇವರು ಪತ್ತೆಯಾದಲ್ಲಿ ಸುರತ್ಕಲ್ ಪೊಲೀಸ್ ಠಾಣೆ ದೂರವಾಣಿ ಸಂಖ್ಯೆ: 0824–2220540, 9480805360, 9480802345 ಹಾಗೂ ಮಂಗಳೂರು ನಗರ ಕಂಟ್ರೋಲ್ ರೂಮ್ ದೂರವಾಣಿ ಸಂಖ್ಯೆ: 0824–2220800 ಕರೆ ಮಾಡಿ ಸಂಪರ್ಕಿಸುವಂತೆ ಸುರತ್ಕಲ್ ಠಾಣಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಐಸಿಐಸಿಐ ಪ್ರುಡೆನ್ಶಿಯಲ್ ಲೈಫ್; ಕ್ಲೈಮ್ ಇತ್ಯರ್ಥದಲ್ಲಿ ಅಗ್ರಸ್ಥಾನ

ಬೆಳಗಾವಿ: 2024 ರ ಎರಡನೆಯ ತ್ರೈಮಾಸಿಕದಲ್ಲಿ ಐಸಿಐಸಿಐ ಪ್ರುಡೆನ್ಶಿಯಲ್ ಲೈಫ್ ಇನ್ಶುರೆನ್ಸ್‌ನ ಕ್ಲೈಮ್ ಸೆಟ್ಲ್‌ಮೆಂಟ್ ಅನುಪಾತವು 98.14% ಆಗಿ ಅಗ್ರಸ್ಥಾನದಲ್ಲಿದೆ.

ಮೊದಲ ತ್ರೈಮಾಸಿಕದಲ್ಲಿ ಕಂಪನಿಯು ಶೇ.97.9ನಷ್ಟು ಅತ್ಯುತ್ತಮ ಕ್ಲೈಮ್ ಇತ್ಯರ್ಥ ಅನುಪಾತವನ್ನು ಹೊಂದಿತ್ತು. ಗ್ರಾಹಕರು ಮತ್ತು ಅವರ ಕುಟುಂಬಗಳಿಗೆ ತಾವು ನೀಡಿದ ಭರವಸೆಗಳನ್ನು ತಲುಪಿಸುವುದರಲ್ಲಿನ ಬದ್ಧತೆಯನ್ನು ಇದು ತೋರಿಸುತ್ತದೆ.

ಗಮನಾರ್ಹವಾಗಿ, ಆರ್ಥಿಕ ವರ್ಷ 2023ರಲ್ಲಿ ಕಂಪನಿಯ ಕ್ಲೈಮ್ ಇತ್ಯರ್ಥ ಅನುಪಾತವು ಶೇ.98.7 ಆಗಿತ್ತು ಮತ್ತು ಕೃತಕವಲ್ಲದ ಮರಣದ ಕ್ಲೈಮ್ ಅನ್ನು ಇತ್ಯರ್ಥಗೊಳಿಸಲು ತೆಗೆದುಕೊಂಡ ಸರಾಸರಿ ಸಮಯ 1.2 ದಿನಗಳು ಆಗಿದ್ದುವು.

ಹಕ್ಕುದಾರರು ಕ್ಲೈಮ್ ಮೊತ್ತ ಬಳಕೆಯ ಅವಕಾಶವನ್ನು ತಕ್ಷಣ ಪಡೆಯುತ್ತಾರೆ ಎಂಬುದನ್ನು ಇದು ಖಚಿತಪಡಿಸುತ್ತದೆ. ಕಂಪನಿಯ ವೆಬ್‌ಸೈಟ್‌ನಲ್ಲಿ ಈ ಕುರಿತ ಮಾಹಿತಿ ಸಾರ್ವಜನಿಕವಾಗಿ ಲಭ್ಯವಿದೆ

2024 ರ ಎರಡನೆಯ ತ್ರೈಮಾಸಿಕದಲ್ಲಿ ಐಸಿಐಸಿಐ ಪ್ರುಡೆನ್ಶಿಯಲ್ ಲೈಫ್ ಇನ್ಶುರೆನ್ಸ್‌ನ ಕ್ಲೈಮ್ ಸೆಟ್ಲ್‌ಮೆಂಟ್ ಅನುಪಾತವು 98.14% ಆಗಿದೆ. TATA AIA ಲೈಫ್ ಇನ್ಶುರೆನ್ಸ್ 90.55%, ಊಆಈಅ ಲೈಫ್ 96.62%, ಬಜಾಜ್ ಅಲಿಯಾನ್ಸ್ ಲೈಫ್ ಇನ್ಶುರೆನ್ಸ್ 91.79%, ಮ್ಯಾಕ್ಸ್ ಲೈಫ್ ಇನ್ಶುರೆನ್ಸ್ 95.90% ಮತ್ತು SBI ಲೈಫ್ ಇನ್ಶುರೆನ್ಸ್ 95.67%. ಈ ಮಾಹಿತಿಯು ಐಸಿಐಸಿಐ ಪ್ರುಡೆನ್ಶಿಯಲ್ ಲೈಫ್ ಇನ್ಶುರೆನ್ಸ್‌ನ ಸ್ಥಿರತೆಯನ್ನು ತೋರಿಸುತ್ತದೆ. ನೀಡಿರುವ ಡೇಟಾವು ಕಂಪನಿಯ ವೆಬ್‌ಸೈಟ್‌ನಲ್ಲಿ ಸಾರ್ವಜನಿಕವಾಗಿ ಲಭ್ಯವಿದೆ.

ಮೇಲಿನ ಕೋಷ್ಟಕವು ಕ್ಲೈಮ್‌ಗಳನ್ನು ಇತ್ಯರ್ಥಪಡಿಸುವಲ್ಲಿ ಐಸಿಐಸಿಐ ಪ್ರುಡೆನ್ಶಿಯಲ್ ಲೈಫ್ ಇನ್ಶೂರೆನ್ಸ್‌ನ ಸ್ಥಿರತೆಯನ್ನು ತೋರಿಸುತ್ತದೆ. ಕಂಪನಿಯು ಗ್ರಾಹಕ–ಕೇಂದ್ರಿತವಾಗಿದೆ ಮತ್ತು ಅದರ 'ಕ್ಲೈಮ್ ಫಾರ್ ಶ್ಯೂರ್' ಸೇವೆ ಉಪಕ್ರಮವು ಎಲ್ಲಾ ಅಗತ್ಯ ದಾಖಲೆಗಳನ್ನು ಸ್ವೀಕರಿಸಿದ ನಂತರ 1 ದಿನದಲ್ಲಿ ಎಲ್ಲಾ ಅರ್ಹ ಮರಣ ಕ್ಲೈಮ್ ಗಳನ್ನು ಇತ್ಯರ್ಥಗೊಳಿಸುವುದನ್ನು ಖಚಿತಪಡಿಸುತ್ತದೆ.

# ಸಂಡೂರಿನ ದೇವಾಲಯಗಳನ್ನು ಯುನೆಸ್ಕೋ ಪಟ್ಟಿಗೆ ಸೇರಿಸಲು ಪ್ರಯತ್ನ: ಗ್ರಾಮಸ್ಥರಿಂದ ಸಹಿ ಅಭಿಯಾನ

ಬಳ್ಳಾರಿ: ಗಣಿಗಾರಿಕೆ ಚಟುವಟಿಕೆಗಳಿಂದ ನಲುಗಿ ಹೋಗಿರುವ ಸ್ವಾಮಿಮಲೈ ಬೆಟ್ಟದ 1,200 ವರ್ಷಗಳಷ್ಟು ಹಳೆಯದಾದ ಕುಮಾರಸ್ವಾಮಿ ಮತ್ತು ಪಾರ್ವತಿ ದೇವಿ ದೇವಸ್ಥಾನಗಳನ್ನು ಉಳಿಸಲು ಸಂಡೂರು ತಾಲೂಕಿನ ಗ್ರಾಮಸ್ಥರು ಸಹಿ ಅಭಿಯಾನ ಆರಂಭಿಸಿದ್ದಾರೆ.

ಭಾರತೀಯ ಪುರಾತತ್ವ ಸರ್ವೇಕ್ಷಣಾ ಇಲಾಖೆಗೆ ಒಳಪಟ್ಟಿರುವ ಈ ದೇವಾಲಯವನ್ನು ಯುನೆಸ್ಕೊ ಪಟ್ಟಿಗೆ ಒಳಪಡಿಸಲು ಗ್ರಾಮಸ್ಥರು ಜನಸಂಗ್ರಾಮ ಪರಿಷತ್ತಿನ ಸಮಾಜ ಪರಿವರ್ತನಾ ಸಾನುದಯ ಸಮಾಜಮುಖಿ ಸಹಯೋಗದಲ್ಲಿ ಅಭಿಯಾನವನ್ನು ಕೈಗೊಂಡಿದ್ದಾರೆ.

ಕುಮಾರಸ್ವಾಮಿ ದೇವಸ್ಥಾನವನ್ನು ವಿಜಯನಗರ ಸಾಮ್ರಾಜ್ಯಕ್ಕಿಂತಲೂ



ಮೊದಲು ನಿರ್ಮಿಸಲಾಯಿತು. ಕಳೆದ ವರ್ಷ, ದೇವಾಲಯದ ಬಳಿ ತೀವ್ರವಾದ ಗಣಿಗಾರಿಕೆ ಚಟುವಟಿಕೆಗಳಿಂದಾಗಿ ಅದರ ಒಂದು ಕಂಬವು ಕುಸಿದುಹೋಗಿದೆ. ಕೆಲವು ಗ್ರಾಮಸ್ಥರು ಗಣಿ ಕಂಪನಿ ವಿರುದ್ಧ ಕರ್ನಾಟಕ ಹೈಕೋರ್ಟ್‌ನಲ್ಲಿ ಮೊಕದ್ದಮೆ ಹೂಡಿದರು.

ಈ ಕುರಿತು ಪರಿಶೀಲಿಸಲು ಪರಿಸರ ಮಂಡಳಿಯಿಂದ ಸಮಿತಿಯೊಂದನ್ನು ರಚಿಸುವಂತೆ ನ್ಯಾಯಾಲಯ ಆದೇಶಿಸಿದೆ.

ಗ್ರಾಮಸ್ಥರ ತಂಡದ ಮುಖಂಡ ಶ್ರೀಶೈಲ್ ಆಲದಹಳ್ಳಿ, ಕಳೆದ ಎರಡು ದಿನಗಳಿಂದ ಸಂಡೂರಿನ ಸ್ಕಂದ ಜಾತ್ರೆ ನಡೆಯುತ್ತಿದ್ದು, ಜನರ ಬೆಂಬಲ ಬಳಸಿಕೊಂಡು ಕುಮಾರಸ್ವಾಮಿ ದೇವಸ್ಥಾನ ಉಳಿಸಲು ಪ್ರಯತ್ನಿಸುತ್ತಿದ್ದೇವೆ. ಮೇಳದಲ್ಲಿ ಎರಡು ದಿನಗಳ ಸಹಿ ಅಭಿಯಾನ ನಡೆಸುತ್ತಿದ್ದೇವೆ. ದೇವಸ್ಥಾನದ ಬಳಿ ಗಣಿಗಾರಿಕೆ ನಡೆಸುವುದನ್ನು ನಿಲ್ಲಿಸುವಂತೆ ಹೈಕೋರ್ಟ್ ಆದೇಶ ನೀಡಿದ್ದರೂ, ಕೆಲವು ಗಣಿ ಕಂಪನಿಗಳು ನಿರ್ದೇಶನಗಳನ್ನು ಅನುಸರಿಸುತ್ತಿಲ್ಲ.

ಗಣಿಗಾರಿಕೆ ಸ್ಥಗಿತ: ದೇವಾಲಯವನ್ನು ಯುನೆಸ್ಕೋ ಸಂರಕ್ಷಿತ ತಾಣವೆಂದು ಘೋಷಿಸಿದ ನಂತರ ಯಾವುದೇ ಗಣಿಗಾರಿಕೆ ಅಥವಾ ಅರಣ್ಯೇತರ ಚಟುವಟಿಕೆಗಳಿಗೆ ಅನುಮತಿ ನೀಡಲಾಗುವುದಿಲ್ಲ ಎಂದು ಅವರು ಹೇಳಿದರು. ನಾವು ಯುನೆಸ್ಕೋ ದೇಶದ ಮುಖ್ಯ ಕಚೇರಿಗೆ ಪತ್ರಗಳನ್ನು ಕಳುಹಿಸಲು ಯೋಜಿಸಿದ್ದೇವೆ.

ದೇವಸ್ಥಾನದ 2 ಕಿ.ಮೀ ವ್ಯಾಪ್ತಿಯಲ್ಲಿ ಗಣಿಗಾರಿಕೆ ಚಟುವಟಿಕೆಗಳನ್ನು ನಿಲ್ಲಿಸಲು ಅನುಕೂಲವಾಗುವಂತೆ ಸಂರಕ್ಷಿತ ಅರಣ್ಯ ಎಂದು ತಕ್ಷಣವೇ ಘೋಷಿಸಲು ನಾವು ರಾಜ್ಯ ಸರ್ಕಾರವನ್ನು ಕೋರುತ್ತೇವೆ ಎಂದರು.

ಸುಮಾರು 20,000 ಒಪ್ಪಂದ ಪತ್ರಕ್ಕೆ ಸಹಿ ಹಾಕುವ ನಿರೀಕ್ಷೆಯಿದೆ ಎಂದು ಮತ್ತೊಬ್ಬ ಗ್ರಾಮಸ್ಥರು ತಿಳಿಸಿದ್ದಾರೆ.

ಒಮ್ಮೆ ಸಹಿ ಹಾಕಿದ ನಂತರ, ಪ್ರತಿಗಳನ್ನು ಯುನೆಸ್ಕೋ ಕೇಂದ್ರ ಕಚೇರಿಗೆ ಮತ್ತು ಇನ್ನೊಂದನ್ನು ಕರ್ನಾಟಕ ಹೈಕೋರ್ಟ್‌ಗೆ ಕಳುಹಿಸಲಾಗುತ್ತದೆ. ಐತಿಹಾಸಿಕ ದೇವಾಲಯವನ್ನು ಮುಂದಿನ ಪೀಳಿಗೆಗೆ ಉಳಿಸುವುದು ನಮ್ಮ ಏಕೈಕ ಧ್ಯೇಯವಾಗಿದೆ ಎಂದು ಅವರು ಹೇಳಿದರು.

# ವಿದ್ಯಾರ್ಥಿನಿಯರೊಂದಿಗೆ ಅನುಚಿತ ವರ್ತನೆ; ಶಿಕ್ಷಕನ ವಿರುದ್ಧ ಕ್ರಮಕ್ಕೆ ಆಗ್ರಹಿಸಿ ಪೋಷಕರ ಪ್ರತಿಭಟನೆ

ತುಮಕೂರು: ಜಿಲ್ಲೆಯ ಶಾಲೆ ಯೊಂದರಲ್ಲಿ ವಿದ್ಯಾರ್ಥಿನಿಯ ರೊಂದಿಗೆ ಅನುಚಿತವಾಗಿ ವರ್ತಿಸಿದ ಶಿಕ್ಷಕನ ವಿರುದ್ಧ ಕ್ರಮ ಕೈಗೊಳ್ಳುವಂತೆ ಒತ್ತಾಯಿಸಿ ಪೋಷಕರ ಗುಂಪೊಂದು ಮಂಗಳವಾರ ಶಾಲಾ ಆವರಣದಲ್ಲಿ ಪ್ರತಿಭಟನೆ ನಡೆಸಿತು.

ಮಧುಗಿರಿ ತಾಲೂಕಿನ ರಂಟವಾಳ ಗ್ರಾಮದಲ್ಲಿ ಘಟನೆ ವರದಿಯಾಗಿದೆ. ಶಿಕ್ಷಕ ಲಕ್ಷ್ಮೀಕಾಂತ ಕುಡಿದ



ಅಮಲಿನಲ್ಲಿ ಶಾಲೆಗೆ ಬಂದು ವಿದ್ಯಾರ್ಥಿನಿಯ ರೊಂದಿಗೆ ಅನುಚಿತವಾಗಿ ವರ್ತಿಸಿದ್ದಾನೆ ಎಂದು ಪ್ರತಿಭಟನಾಕಾರರು ಆರೋಪಿಸಿದ್ದಾರೆ.

ಆರೋಪಿ ಶಿಕ್ಷಕನು ವಿದ್ಯಾರ್ಥಿನಿಯರಿಗೆ ಹಣದ ಆಮಿಷವೊಡ್ಡುತ್ತಿದ್ದನು ಮತ್ತು ತನಗೆ ಅವರ ತಂದೆಯ ಪರಿಚಯವಿದೆ ಎಂದು ಹೇಳುವ ಮೂಲಕ ಲೈಂಗಿಕ ಕಿರುಕುಳ ನೀಡುತ್ತಿದ್ದನು ಎಂದು ಪೋಷಕರು ಆರೋಪಿಸಿದ್ದಾರೆ.

ಶಿಕ್ಷಣ ಇಲಾಖೆ ಅಧಿಕಾರಿಗಳು ಸ್ಥಳಕ್ಕೆ ದೌಡಾಯಿಸಿದ್ದು, ಆರೋಪಿ ಶಿಕ್ಷಕನನ್ನು ಕೂಡಲೇ ವರ್ಗಾವಣೆ ಮಾಡಿ, ಆತನ ವಿರುದ್ಧ ಕ್ರಮ ಕೈಗೊಳ್ಳಬೇಕು ಎಂದು ಪ್ರತಿಭಟನೆ ನಡೆಸುತ್ತಿದ್ದ ಪೋಷಕರು ಆಗ್ರಹಿಸಿದ್ದಾರೆ.

## ಚಿಂದಿ ಆಯುವನೇ ನಟೋರಿಯಸ್ ಕಳ್ಳ: ಆರೋಪಿಯನ್ನು ಹೆಡೆಮುರಿ ಕಟ್ಟಿದ ಪೊಲೀಸರು

# ಕಳ್ಳನಿಂದ 40 ಗ್ರಾಂ ಚಿನ್ನ ಹಾಗೂ ಒಂದೂವರೆ ಕೆಜಿ ಬೆಳ್ಳಿ ವಶಕ್ಕೆ

ಬೆಂಗಳೂರು: ಅಂತರರಾಜ್ಯ ನಟೋರಿಯಸ್ ಕಳ್ಳನೋರ್ವನನ್ನು ಜಿಗಣಿ ಪೊಲೀಸರು ಬಂಧಿಸಿದ್ದಾರೆ. ಮೂವತ್ತಕ್ಕೂ ಹೆಚ್ಚು ಪ್ರಕರಣಗಳಿಗೆ ಬೇಕಾಗಿದ್ದ ಆರೋಪಿಯನ್ನು ಅರೆಸ್ಟ್ ಮಾಡಿದ್ದಾರೆ.

ಡೆಲ್ಲಿಯ ಶಿಮಾಪುರ್ ಮೂಲದ ಸಾದತ್ ಖಾನ್ ಬಂಧಿತ ಆರೋಪಿ. ಈತ ಬೆಳಿಗ್ಗೆ ಚಿಂದಿ ಆಯುವ ಕೆಲಸ ಮಾಡುತ್ತಿದ್ದ. ರಾತ್ರಿಯಾದ್ರೆ ಮನೆಗೆ ಕನ್ನ ಹಾಕುತ್ತಿದ್ದ. ಮೂವತ್ತಕ್ಕೂ ಹೆಚ್ಚು



ಪ್ರಕರಣಗಳಲ್ಲಿ ಭಾಗಿಯಾಗಿದ್ದ. ಈತನನ್ನು ಜಿಗಣಿ ಪೊಲೀಸರು ಯಶ್ವಸಿಯಾಗಿ ಕಾರ್ಯಾಚರಣೆ ನಡೆಸಿ ಬಂಧಿಸಿದ್ದಾರೆ.ಸಾದತ್ ಖಾನ್ ಕೂಡ್ಲು ಗ್ರಾಮದ ಬಾಡಿಗೆ ಮನೆಯಲ್ಲಿ ವಾಸವಿದ್ದ. ಸ್ನೇಹಿತ ರುಬೆಲ್ ಜೊತೆ ಒಂದೇ ರೂಂನಲ್ಲಿದ್ದ. ಬೆಳಿಗ್ಗೆ ಸಮಯ ಕಸ ಆಯುವ ನೆಪದಲ್ಲಿ ಓಡಾಡುತ್ತಿದ್ದ ಈತ ಬೀಗ ಹಾಕಿರುವ ಮನೆಗಳನ್ನ ನೋಡಿ ಬರುತ್ತಿದ್ದ. ರಾತ್ರಿಯಾಗುತ್ತಿದ್ದಂತೆ ಮನೆಯ ಬೀಗ ಮುರಿದು ಕಳ್ಳತನ ಮಾಡುತ್ತಿದ್ದ.

ಸಾದತ್ ಖಾನ್ 7 ಪೊಲೀಸ್ ಸ್ಟೇಷನ್ ವ್ಯಾಪ್ತಿಯಲ್ಲಿ ಕೈಚಳಕ ತೋರಿಸಿದ್ದ. ಜಿಗಣಿ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿಯೇ ಐದಕ್ಕೂ ಹೆಚ್ಚು ಪ್ರಕರಣ ಈತನ ಮೇಲಿತ್ತು. ಇದಲ್ಲದೆ, ಸಾದತ್ ಖಾನ್ ಕೈಚಳಕದ ದೃಶ್ಯ ಪೊಲೀಸರಿಗೆ ದೊರೆತ್ತಿತ್ತು. ಆದರೆ ಡೆಲ್ಲಿಯಲ್ಲಿ ತಲೆಮರೆಸಿಕೊಂಡಿದ್ದ ಖತರ್ನಾಕ್ ಕಳ್ಳ ಸಾದತ್ ಖಾನ್ನು ಪೊಲೀಸರು ಹೆಡೆಮುರಿ ಕಟ್ಟಿದ್ದಾರೆ.

**ಕಿತ್ತೂರ ರಾಣಿ ಚನ್ನಮ್ಮ ಅರ್ಬನ್ ಕ್ರೆಡಿಟ್ ಸೌಹಾರ್ದ ಸಹಕಾರಿ ನಿ.,ಬೈಲಹೊಂಗಲ**

ಶಾಖೆ:–ಹಿರೇಬಾಗೇವಾಡಿ ತಾ/ಜಿ : ಬೆಳಗಾವಿ

**ಹರಾಜು ಪ್ರಕಟಣೆ**

**ಇಪಿ ಸಂಖ್ಯೆ:ಕ.ರಾ.ಸೌ.ಸಂ.ಸ.ನಿ/ಸ.ಸಂ.ಸ.ನಿ/ವ.ಅ.ಬೆ/100/2022–23**

ಕಿತ್ತೂರ ರಾಣಿ ಚನ್ನಮ್ಮ ಅರ್ಬನ್ ಕ್ರೆಡಿಟ್ ಸೌಹಾರ್ದ ಸಹಕಾರಿ ನಿ.,ಬೈಲಹೊಂಗಲ ಶಾಖೆ–ಹಿರೇಬಾಗೇವಾಡಿ ಸುಸ್ತಿದಾರರಾದ 1) ಶ್ರೀ ಆಸೀಪಹ್ಮದ ಜಮೀಲಹ್ಮದಢ ಬಾಗವಾನ ಸಾ: ಮೊಮಿನ ಗಲ್ಲಿ ಹಿರೇಬಾಗೇವಾಡಿ ತಾ/ಜಿ ಬೆಳಗಾವಿ ಹಾಗೂ 2)ಶ್ರೀ ಶಾಹಿದಹ್ಮದ ಇಸಾಕಹ್ಮದ ನಮಕವಾಲೆ 3)ಉಮರಪಾರೂಕ ಜಮೀಲಹ್ಮದ ಬಾಗವಾನ ಇವರಿಂದ ದಿನಾಂಕ: 27/10/2023ಕ್ಕೆ ಬರಬೇಕಾದ ಬಾಕಿ ಮೊತ್ತರೂ. 92,715+ ಬಡ್ಡಿ ಮತ್ತು ಇತರೆ ವೆಚ್ಚಗಳ ಸಂದಾಯದ ಬಗ್ಗೆ ಈ ಕೆಳಗೆ ನಮೂದಿಸಲಾದ ಸ್ಥಿರ ಸ್ವತ್ತುಗಳ ಹರಾಜನ್ನು ಗುರುವಾರ ದಿನಾಂಕ:07/12/2023ರಂದು ಬಹಿರಂಗ ಹರಾಜು ಮಾಡಲಾಗುವುದು ಅಥವಾ ಹರಾಜನ್ನು ಮುಂದೂಡಲಾದ ದಿನಾಂಕದಂದು ಸ್ಥಿರ ಸ್ವತ್ತುಗಳಿರುವ ಹಿರೇಬಾಗೇವಾಡಿ ಗ್ರಾಮ ಪಂಚಾಯತಿ ವ್ಯಾಪ್ತಿಯ ಹಿರೇಬಾಗೇವಾಡಿ ಗ್ರಾಮದಲ್ಲಿ ಬಹಿರಂಗ ಹರಾಜನ್ನು ಮಾಡಲಾಗುವುದೆಂದು ತಿಳಿಸಲಾಗಿದೆ. ಸದರಿ ಹರಾಜು ಬೆಳ್ಳಗ್ಗೆ 11:00 ಘಂಟೆಗೆ ಪ್ರಾರಂಭವಾಗಿ ಅತ್ಯಧಿಕ ಮೊತ್ತಕ್ಕೆ ಬಿಡ್ ಕೂಗುವವರಿಗೆ ಸ್ವತ್ತನ್ನು ಮೂರು ಸಲಕ್ಕಾಗಿ ಖಾಯಂ ಮಾಡಲಾಗುವುದು.

ಸ್ಥಿರ ಸ್ವತ್ತುಗಳ ವಿವರ:– 1)ಶ್ರೀ ಆಸೀಪಅಹ್ಮದ ಜಮೀಲಹ್ಮದ ಬಾಗವಾನ ಸಾ॥ ಹಿರೇಬಾಗೇವಾಡಿ ಗ್ರಾಮ ಪಂಚಾಯತಿ ಆಸ್ತಿ ನಂ:1298/1 ತಾ/ಜಿ:ಬೆಳಗಾವಿ ಹಿರೇಬಾಗೇವಾಡಿ ಗ್ರಾಮದ ಹಿರೇಬಾಗೇವಾಡಿ ಗ್ರಾಮ ಪಂಚಾಯತಿಯ ಆಸ್ತಿಯಾಗಿರುತ್ತದೆ.

**ಹರಾಜು ಬಗ್ಗೆ ಸಂಪರ್ಕಿಸಬೇಕಾದ ವಿಳಾಸ :**

**: ಮಾರಾಟಾಧಿಕಾರಿಗಳು :**

ಕಿತ್ತೂರ ರಾಣಿ ಚನ್ನಮ್ಮ ಅರ್ಬನ್ ಕ್ರೆಡಿಟ್ ಸೌಹಾರ್ದ ಸಹಕಾರಿ ನಿ.,ಬೈಲಹೊಂಗಲ

ಪ್ರಧಾನ ಕಛೇರಿ: ಬೈಲಹೊಂಗಲ ಶಾಖೆ:–ಹಿರೇಬಾಗೇವಾಡಿ

ಮೊಬೈಲ್ ನಂ:9606098032, 7259001979

# ಕ್ರೀಡೆಗಳಿಗೆ ಎಲ್ಲಾ ಇಲಾಖೆ ಮಹತ್ವ ನೀಡಲಿ: ಸಚಿವ ಸತೀಶ್ ಜಾರಕಿಹೊಳಿ



ಗೋಕಾಕ: " ಅಂತರಾಷ್ಟ್ರೀಯ ಮಟ್ಟದಲ್ಲಿ ಭಾರತ ಮಿಂಚಬೇಕಾದರೆ, ದೇಶದ ಕ್ರೀಡಾಪಟುಗಳಿಗೆ ಪ್ರಾಮುಖ್ಯತೆ ನೀಡುವ ಅಗತ್ಯವಿದೆ" ಎಂದು ಲೋಕೋಪಯೋಗಿ ಇಲಾಖೆ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಸತೀಶ್ ಜಾರಕಿಹೊಳಿ ಅವರು ಹೇಳಿದರು.

ನಗರದ ವಾಲ್ಮೀಕಿ ಕ್ರೀಡಾಂಗಣದಲ್ಲಿ ಆಯೋಜಿಸಿದ್ದ ಬೆಳಗಾವಿ ವೃತ್ತ ಮಟ್ಟದ ಅರಣ್ಯ ಕ್ರೀಡಾಕೂಟವನ್ನು ಕ್ರೀಡಾ ಜ್ಯೋತಿ ಬೆಳಗಿಸಿ, ಸಸಿಗೆ ನೀರು ಹಾಕುವ ಮೂಲಕ ಉದ್ಘಾಟಿಸಿ ಮಾತನಾಡಿದ ಅವರು,

ಪ್ರತಿ ವರ್ಷ ವೃತ್ತ ಮಟ್ಟದ ಅರಣ್ಯ ವಲಯದ ಕ್ರೀಡಾ ಕೂಟ ಜಿಲ್ಲಾ ಮಟ್ಟದಲ್ಲಿ ಆಯೋಜನೆ ಮಾಡಲಾಗುತ್ತಿದೆ. ಆದರೆ, ಈ ಬಾರಿ ಗೋಕಾಕದಲ್ಲಿ ಆಯೋಜಿಸಿರಿವುದು ಹೆಮ್ಮೆಯ ವಿಷಯ, ಅರಣ್ಯ ಇಲಾಖೆ ಹಮ್ಮಿಕೊಂಡಿರುವ ಈ ಕ್ರೀಡಾಕೂಟದಲ್ಲಿ ಕ್ರೀಡಾಪಟುಗಳು ಪಾಲ್ಗೊಂಡು ರಾಜ್ಯ, ರಾಷ್ಟ್ರ ಮಟ್ಟದಲ್ಲಿ ಸಾಧನೆ ಮಾಡಬೇಕೆಂದು ತಿಳಿಸಿದರು. ಕ್ರೀಡೆಗಳಿಗೆ ಎಲ್ಲಾ ಇಲಾಖೆ ಮಹತ್ವ ನೀಡಬೇಕು. ಕ್ರೀಡೆ ನಮ್ಮ ಜೀವನದ ಪ್ರಮುಖ ಭಾಗವಾಗಿದ್ದು, ಎಲ್ಲರೂ ಕ್ರೀಡಾ ಮನೋಭಾವ ಬೆಳೆಸಿಕೊಳ್ಳಬೇಕಿದೆ ಎಂದರು.

ಅಧಿಕಾರಿಗಳಿಗೆ ಕ್ರೀಡೆಗಳ ಕುರಿತು ಉತ್ತೇಜನ ನೀಡಬೇಕಿದೆ. ಕ್ರೀಡೆಯ ಮೂಲಕ ಇಲಾಖೆ ಹೆಸರು ಬರಬೇಕು ಎನ್ನುವುದು ಸರ್ಕಾರ ಕನಸಾಗಿದೆ, ಎಲ್ಲಾ ಇಲಾಖೆ ಅಧಿಕಾರಿಗಳು, ಸಿಬ್ಬಂದಿ ಕ್ರೀಡೆಯಲ್ಲಿ ಭಾಗಿಯಾಗಿ ಸರ್ಕಾರ ಕನಸನ್ನು ನನಸು ಮಾಡಬೇಕು ಎಂದ ಅವರು, ದೇಶದಲ್ಲಿ ಕ್ರೀಡೆ ಬಹಳ ಪ್ರಾಮುಖ್ಯತೆ ನೀಡಬೇಕಿದೆ.

ಆದರೆ, ಅದು ಇಲ್ಲಿವರೆಗೂ ಸಾಧ್ಯವಾಗಿಲ್ಲ ಈಗಲಾದರೆ ಸರ್ಕಾರಗಳು ಕ್ರೀಡೆಗಳಿಗೆ ಮಹತ್ವ ನೀಡಲಿ. ಕ್ರೀಡಾಪಟುಗಳನ್ನು ಬೆಳೆಸಿದಾಗ ಅಂದಾಗ ಮಾತ್ರ ಭಾರತ ಅಂತರಾಷ್ಟ್ರೀಯ ಮಟ್ಟದಲ್ಲಿ ಮಿಂಚಲು ಸಾಧ್ಯ.

ಈ ದೇಶದ ಕ್ರೀಡಾಪಟುಗಳಿಗೆ ಉತ್ತಮವಾದ ವೇದಿಕೆ ಸಿಗುತ್ತಿಲ್ಲ, ಒಳ್ಳೆಯ ವೇದಿಕೆ ಸಿಕ್ಕರೆ ದೇಶವನ್ನು ಉತ್ತುಂಗಕ್ಕೆ ಕೊಂಡ್ಯೊಯುತ್ತಾರೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ಕೆಲವು ಇಲಾಖೆಯಲ್ಲಿ ಮಾತ್ರ ಕ್ರೀಡಾ ಕೂಟ ನಡೆಯುತ್ತಿದ್ದು, ಇನ್ನೂಳಿದ ಇಲಾಖೆಗಳು ಕ್ರೀಡಾಕೂಟದಲ್ಲಿ ಪಾಲ್ಗೊಳ್ಳಬೇಕೆಂದು ತಿಳಿಸಿದರು. ಸಮಾಜದ ನೆಮ್ಮದಿಗಾಗಿ ಹಗಲಿರುಳು ಕೆಲಸ ಮಾಡುವ ಅರಣ್ಯ ಅಧಿಕಾರಿಗಳಿಗೆ ದೈಹಿಕ ಮತ್ತು ಮಾನಸಿಕ ಸದೃಢತೆ ಕಾಯ್ದುಕೊಳ್ಳುವುದು ಅವಶ್ಯವಾಗಿದೆ.

ದೈನಂದಿನ ಕೆಲಸ ಕಾರ್ಯಗಳ ಸಂದರ್ಭ ಅರಣ್ಯ ಇಲಾಖೆ ಹೊಸ ಹೊಸ ಸವಾಲು ಹಾಗೂ ಸಮಸ್ಯೆ ಎದುರಿಸುವುದು ಅನಿವಾರ್ಯವಾಗುತ್ತದೆ. ಅಂಥ ಒತ್ತಡಗಳಿಂದ ಹೊರಬರಲು ಹಾಗೂ ಮಾನಸಿಕ, ದೈಹಿಕ ಸಾಮರ್ಥ್ಯ ಅಭಿವೃದ್ಧಿಗೆ ಕ್ರೀಡೆಯಲ್ಲಿ ಪಾಲ್ಗೊಳ್ಳುವಿಕೆ ಸಹಾಯ ಮಾಡುತ್ತದೆ ಎಂದು ಸಲಹೆ ನೀಡಿದರು.

ಇದಕ್ಕೂ ಮೊದಲು ಕ್ರೀಡಾಕೂಟಕ್ಕೆ ಚಾಲನೆ ನೀಡಿದ ಜಿಲ್ಲಾ ಉಸ್ತುವಾರಿ ಸಚಿವ ಸತೀಶ್ ಜಾರಕಿಹೊಳಿ ನಂತರ ಜಿಲ್ಲೆಯ ಅರಣ್ಯ ಸಿಬ್ಬಂದಿಯು ಆಕರ್ಷಕ ಪಥಸಂಚಲನ ನಡೆಸಿದರು.

ಕ್ರೀಡಾಕೂಟದಲ್ಲಿ ರನ್ನಿಂಗ್, ವಾಲಿಬಾಲ್, ಹೈ ಜಂಪ್, ಲಾಂಗ್ ಜಂಪ್ ಸೇರಿದಂತೆ ಇನ್ನಿತರ ಕ್ರೀಡೆಗಳಲ್ಲಿ ಅರಣ್ಯ ಇಲಾಖೆ ಸಿಬ್ಬಂದಿ ಭಾಗಿಯಾಗಿದ್ದರು.

ಈ ಸಂದರ್ಭದಲ್ಲಿ ಯುವ ನಾಯಕ ಅಮರನಾಥ ಜಾರಕಿಹೊಳಿ ಹಾಗೂ ಅರಣ್ಯ ಇಲಾಖೆ ಅಧಿಕಾರಿಗಳು, ಕ್ರೀಡಾಪಟುಗಳು ಉಪಸ್ಥಿತರಿದ್ದರು.

# ಶುಲ್ಕ ಮರುಪಾವತಿಗಾಗಿ ಅರ್ಜಿ ಆಹ್ವಾನ

ಬೆಳಗಾವಿ: ಮೆಟ್ರಿಕ್ ನಂತರದ ಕೋರ್ಸುಗಳಲ್ಲಿ ವ್ಯಾಸಂಗ ಮಾಡುತ್ತಿರುವ ಅರ್ಹ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳು 2023-24 ನೇ ಸಾಲಿಗೆ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೂಲಕ ನೀಡಲಾಗುತ್ತಿರುವ "ಶುಲ್ಕ ಮರುಪಾವತಿ" ಕಾರ್ಯಕ್ರಮಕ್ಕೆ ಆನ್ ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

ಪ್ರವೇಶ ಬಯಸುವ ಪ್ರವರ್ಗ-1, 2ಎ, 3ಎ, 3ಬಿ, ಸೇರಿದ ವಿದ್ಯಾರ್ಥಿಗಳು ಜನವರಿ 10, 2023 ರವರೆಗೆ ಅರ್ಜಿ ಸಲ್ಲಿಸಬಹುದಾಗಿದೆ.

ಇಲಾಖೆಯ ವೆಬ್‌ಸೈಟ್ **https://ssp.postmatric.karnataka.gov.in** ನ್ನು ಸಂಪರ್ಕಿಸಿ ಅರ್ಜಿಯನ್ನು ಸಲ್ಲಿಸಬೇಕು.

ಕಾರ್ಯಕ್ರಮಗಳ ವಿವರ, ಅರ್ಹತೆ, ಸಲ್ಲಿಸಬೇಕಾದ ದಾಖಲೆಗಳ ವಿವರ ಮತ್ತು ಸರ್ಕಾರದ ಆದೇಶಕ್ಕಾಗಿ, ಅರ್ಜಿ ಸಲ್ಲಿಸಲು ತಾಂತ್ರಿಕ ತೊಂದರೆಗಳಾದಲ್ಲಿ ಇಲಾಖೆಯ ವೆಬ್‌ಸೈಟ್ https://bcwd.karnataka.gov.in / postmatrichelp@karnataka.gov.in ಇ-ಮೇಲ್ ಅಥವಾ ದೂ.ಸಂ.080-35254757 ಗೆ ಸಂಪರ್ಕಿಸಬಹುದು ಎಂದು ತಾಲೂಕಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ತಿನಿಸುಕಟ್ಟೆ ಮಳಿಗೆಗಳ ಅಕ್ರಮದ ಬಗ್ಗೆ ಸೂಕ್ತ ಕ್ರಮ ಜರುಗಿಸುವಂತೆ ಕಾರ್ಪೋರೇಷನಗೆ ನೋಟಿಸ್ ಜಾರಿ ಮಾಡಿದ ಡಿಸಿ



ಬೆಳಗಾವಿ: ಬಸವೇಶ್ವರ ವೃತ್ತದ ಸಮೀದಲ್ಲಿರುವ ತಿನಿಸು ಕಟ್ಟೆಯಲ್ಲಿ ಕಾನೂನು ಬಾಹಿರವಾಗಿ ಮಳಿಗೆ ಪಡೆದಿರುವ ಪಾಲಿಕೆಯ ಸದಸ್ಯರ ಸದಸ್ಯತ್ವವನ್ನು ವಜಾ ಮಾಡಬೇಕೆಂದು ಆಗ್ರಹಿಸಿ ಸಾಮಾಜಿಕ ಕಾರ್ಯಕರ್ತ ಸುಜೀತ ಮುಳಗುಂದ ಸೋಮವಾರ ಪ್ರಾದೇಶಿಕ ಆಯುಕ್ತರಿಗೆ ಮನವಿ ಸಲ್ಲಿಸಿದ್ದಾರೆ.

ಪಾಲಿಕೆ ಸದಸ್ಯರಾದ ವಾರ್ಡ್ ನಂಬರ್ 23 ರ ಸದಸ್ಯ ಜಯಂತ ಜಾಧವ, ವಾರ್ಡ್ ನಂಬರ್ 41 ರ ಸದಸ್ಯ ಮಂಗೇಶ ಪವಾರ್ ಇವರು ತಮ್ಮ ರಾಜಕೀಯ ಪ್ರಭಾವದಿಂದ ತಿನಿಸು ಕಟ್ಟೆಯಲ್ಲಿ ತಮ್ಮ ಕುಟುಂಬದವರಿಗೆ ಮಳಿಗೆ ನೀಡಿದ್ದಾರೆ. ತತಕ್ಷಣ ಇವರನ್ನು ಪಾಲಿಕೆ ಸದಸ್ಯತ್ವದಿಂದ ವಜಾ ಮಾಡಬೇಕೆಂದು ಆಗ್ರಹಿಸಿದ್ದಾರೆ

ವಿಷಯಕ್ಕೆ ಕುರಿತಂತೆ ಪ್ರಾದೇಶಿಕ ಆಯುಕ್ತರು ಜಿಲ್ಲಾಧಿಕಾರಿಗಳಿಗೆ ನೋಟಿಸ ಜಾರಿಮಾಡಿದ್ದರು ತಕ್ಷಣವೇ ಜಿಲ್ಲಾಧಿಕಾರಿಗಳು ಕಾರ್ಪೋರೇಷನಗೆ ಬೆಳಗಾವಿ ಮಹಾನಗರ ಪಾಲಿಕೆ ಸದಸ್ಯರನ್ನು ಅನರ್ಹತೆ ಮಾಡುವ ಕುರಿತು ನೋಟೀಸ ರವಾನೆ ಮಾಡಿದ್ದಾರೆ ಕೆ.ಎಂ.ಸಿ ಕಾಯ್ದೆ-1976, ಸೆಕ್ಷನ್ 26(1)(ಕೆ) ಯ ಸ್ಪಷ್ಟ ಉಲ್ಲಂಘನೆ ಮಾಡಿದ ಜಯಂತ್ ಜಾಧವ್., ಮಂಗೇಶ್ ಪವಾರ್ ಇಬ್ಬರೂ ಮಹಾನಗರ ಪಾಲಿಕೆಯ ಸದಸ್ಯರನ್ನು ಅನರ್ಹತೆಗೊಳಿಸಿ ಸದಸ್ಯತ್ವವನ್ನು ರದ್ದುಪಡಿಸಬೇಕೆಂದು ನೋಟೀಸನ್ನು ರವಾನೆ ಮಾಡಿದ್ದಾರೆ.

ಸಾಮಾಜಿಕ ಕಾರ್ಯಕರ್ತ ಸುಜೀತ್ ಮ. ಮುಳಗುಂದ ಅವರು ತೆಗದುಕೊಂಡ ಈ ನಿರ್ಧಾರದಿಂದ ಅಕ್ರಮವೆಸಗಿದ ಸದಸ್ಯರ ಮೇಲೆ ಕಾನೂನು ಯಾವ ರೀತಿ ಕ್ರಮ ಜರಗಿಸುತ್ತದೆ ಎಂಬುದನ್ನು ಕಾದುನೋಡಬೇಕಿದೆ.

# ಅಂತ್ಯಕ್ರಿಯೆಗೆ ಸ್ಮಶಾನವಿಲ್ಲವೆಂದು ಗ್ರಾಪಂ ಒಳಗೇ ಮೃತದೇಹ ತಂದಿಟ್ಟ ಕುಟುಂಬಸ್ಥರು




ದಾವಣಗೆರೆ: ಶವ ಸಂಸ್ಕಾರಕ್ಕೆ ಜಾಗವಿಲ್ಲ ಎಂದು ಆರೋಪಿಸಿ, ಮೃತರ ಕುಟುಂಬಸ್ಥರು ಗ್ರಾಮ ಪಂಚಾಯತಿ ಒಳಗೆ ಶವವಿಟ್ಟು ಪ್ರತಿಭಟನೆ ನಡೆಸಿರುವ ಘಟನೆ ಕಳೆದ ದಿನ ದಾವಣಗೆರೆ ಜಿಲ್ಲೆಯ ನ್ಯಾಮತಿ ತಾಲೂಕಿನ ಬಸವನಹಳ್ಳಿ ಗ್ರಾಮದಲ್ಲಿ ನಡೆದಿದೆ.

ಬಸವನಹಳ್ಳಿ ಗ್ರಾಮದ ದೊಡ್ಡಪ್ಪ (65) ಮೃತಪಟ್ಟಿದ್ದ ವ್ಯಕ್ತಿ. ಮೃತರ ಕುಟುಂಬಸ್ಥರು ಶವಸಂಸ್ಕಾರ ಮಾಡಲು ನಿಗದಿತ ಸ್ಥಳವಿಲ್ಲವೆಂದು ಮೊದಲಿಗೆ ಗ್ರಾ. ಪಂ ಒಳಗೆ ನುಗ್ಗಿ ಶವ ಇರಿಸಿ ಪ್ರತಿಭಟನೆ ನಡೆಸಿದರು.

ಬಳಿಕ ಮತ್ತೆ ಶವವನ್ನು ಗ್ರಾಮ ಪಂಚಾಯ್ತಿಯಿಂದ ಹೊರತಂದಿಟ್ಟು ಸ್ಮಶಾನಕ್ಕಾಗಿ ಆಗ್ರಹಿಸಿದ್ದಾರೆ.

ಈ ಹಿಂದೆ ಗ್ರಾಮದ ಆಚೆ ಸ್ಮಶಾನಕ್ಕೆ ಮೀಸಲಿಟ್ಟ ಜಾಗವನ್ನು ಗ್ರಾಮದ ಕೆಲ ಜನರು ಒತ್ತುವರಿ ಮಾಡಿದ್ದಾರೆಂದು ಜನರು ಆರೋಪ ಮಾಡ್ತಿದ್ದಾರೆ. ಇದೀಗ ಶವ ಸಂಸ್ಕಾರ ಮಾಡಲು ಜಾಗ ನೀಡಬೇಕೆಂದು ಒತ್ತಾಯಿಸಿ, ಪಂಚಾಯತಿಯ ಅಧಿಕಾರಿಗಳ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಕಳೆದ ದಿನ ಮಧ್ಯರಾತ್ರಿವರೆಗೂ ಶವವನ್ನು ಗ್ರಾಮ ಪಂಚಾಯತಿ ಒಳಗಡೆ ಇಟ್ಟ ಮೃತರ ಕುಂಬಸ್ಥರು ಸ್ಮಶಾನ ಜಾಗವನ್ನು ನಿಗದಿಪಡಿಸಿ, ಅಲ್ಲಿತನಕ ಶವ ಹೊರತೆಗೆಯುವುದಿಲ್ಲ ಎಂದು ಪಟ್ಟು ಹಿಡಿದಿದ್ದರು.

ಬಳಿಕ ಸ್ಥಳಕ್ಕೆ ಶಾಸಕ ಶಾಂತನಗೌಡ ಭೇಟಿ ನೀಡಿ, ಸ್ಮಶಾನಕ್ಕೆ ಜಾಗ ಒದಗಿಸುವ ಬಗ್ಗೆ ಭರವಸೆ ನೀಡಿದರು.

ಇದಕ್ಕೆ ಜಗ್ಗದ ಗ್ರಾಮಸ್ಥರು ಮೊದಲಿಗೆ ಸ್ಮಶಾನದ ಅವಶ್ಯಕತೆ ಇದೆ, ನಮಗೆ ಸ್ಮಶಾನ ಕಲ್ಪಿಸಿ ಎಂದು ಪಟ್ಟು ಹಿಡಿದರು.

ಈ ವೇಳೆ ಸ್ಥಳಕ್ಕೆ ನ್ಯಾಮತಿ ತಹಶೀಲ್ದಾರ್ ಗೋವಿಂದಪ್ಪ ಹಾಗೂ ನ್ಯಾಮತಿ ಪೊಲೀಸ್ ಠಾಣೆಯ ಪೊಲೀಸರು ಭೇಟಿ ನೀಡಿದ್ದರು ಕೂಡ ಪ್ರತಿಭಟನೆ ಮಾತ್ರ ಕೈ ಬಿಡಲಿಲ್ಲ. ಬಳಿಕ ಸ್ಥಳಕ್ಕೆ ಜಿಲ್ಲಾಧಿಕಾರಿ ಬರುವರೆಗೂ ಶವ ತೆಗೆಯುವುದಿಲ್ಲ ಎಂದು ಗ್ರಾಮಸ್ಥರು ಪಟ್ಟು ಹಿಡಿದು ಮಧ್ಯರಾತ್ರಿವರೆಗೂ ಗ್ರಾಮ ಪಂಚಾಯಿತಿಯಲ್ಲಿ ಶವವಿಟ್ಟು ಕುಳಿತಿದ್ದರು.

ಬಳಿಕ ಸ್ಥಳಕ್ಕೆ ಭೇಟಿ ನೀಡಿದ ಡಿವೈಎಸ್ಪಿ ಪ್ರಶಾಂತ್ ಅವರು ಪ್ರತಿಭಟನಾನಿರತರ ಮನವೊಲಿಸುವಲ್ಲಿ ಸಫಲರಾಗಿದ್ದರಿಂದ ಕುಟುಂಬಸ್ಥರು ಶವಸಂಸ್ಕಾರ ಮಾಡಿದರು.

# ಅಪರಿಚಿತ ಮೃತದೇಹ ಪತ್ತೆ

ಬೆಳಗಾವಿ: ಜಿಲ್ಲೆಯ ಭುತರಾಮಟ್ಟಿ ಗ್ರಾಮದ ಮುಕ್ತಿ ಮಠದ ಹತ್ತಿರ ಲೀಲಾವತಿ ಬಸಯ್ಯ ಮಠದ ಇವರ ಹೊಲದ ಎದುರಿಗೆ ಹೈವೆ ರಸ್ತೆಯ ಡಿವೈಡರ ಹತ್ತಿರ 30 ರಿಂದ 35 ವರ್ಷ ವಯಸ್ಸಿನ ಅಪರಿಚಿತ ವ್ಯಕ್ತಿಯ ಮೃತದೇಹ ದೊರಕಿರುತ್ತದೆ.

ಮೃತ ವ್ಯಕ್ತಿಯ ವಿವರ: ಎತ್ತರ: 5 ಪೂಟ 4 ಇಂಚ, ಕಪ್ಪು ಕೂದಲು, ಚಾಕ್ಲೆಟ್ ಬಣ್ಣದ ಬಟ್ಟೆ ಧರಿಸಿರುತ್ತಾನೆ.

ಸದರಿ ಮೃತನ ವಾರಸುದಾರರು ಯಾರಾದರೂ ಪತ್ತೆಯಾದಲ್ಲಿ ಕಾಕತಿ ಪೋಲೀಸ್‌ಠಾಣೆ ದೂ.ಸಂ. 0831-2405203, ಪಿ.ಐ 9480804115, ಪಿ.ಎಸ್.ಐ 9480804083 ಅಥವಾ ಇಚಿಇಚಿಣುಭರಂಟ@ಇರಿ.ರಠತ.ಾಟಿ ಗೆ ಸಂಪರ್ಕಿಸಬಹುದು ಎಂದು ಠಾಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ರಾಜ್ಯ ಮಟ್ಟದ ಭಾರ ಎತ್ತುವ ಪಂದ್ಯಾವಳಿಯಲ್ಲಿ ಜಿಲ್ಲೆಯ ಕ್ರೀಡಾಪಟುಗಳ ಸಾಧನೆ



ಬೆಳಗಾವಿ: ನವೆಂಬರ 18 ಮತ್ತು 19, 2023 ರಂದು ಬೆಂಗಳೂರಿನ ಶ್ರೀ ಕಂಠೀರವ ಕ್ರೀಡಾಂಗಣದಲ್ಲಿ ಜರುಗಿದ ರಾಜ್ಯ ಮಟ್ಟದ ಭಾರ ಎತ್ತುವ ಪಂದ್ಯಾವಳಿಯಲ್ಲಿ ಬೆಳಗಾವಿ ಜಿಲ್ಲೆಯ ಕ್ರೀಡಾಪಟುಗಳು ಪದಕವನ್ನು ಪಡೆದಿದ್ದಾರೆ.

ನಕುಶಾ ಪಾಟೀಲ ಚಿನ್ನ ಮತ್ತು ಬೆಳ್ಳಿ ಪದಕ (ಜೂನಿಯರ್ & ಸೀನಿಯರ್) (ಜೂ. ಬೆಸ್ಟ್ ಲಿಫ್ಟರ್), ಸಂಕೇತ ಚಂದಿಲಕರ್ ಚಿನ್ನ ಮತ್ತು ಬೆಳ್ಳಿ ಪದಕ (ಜೂನಿಯರ್ & ಸೀನಿಯರ್), ಅದಿತಿ ಪಾಟೀಲ ಬೆಳ್ಳಿ ಪದಕ (ಯೂತ್), ಸಾಯಿಶಾ ಗೌಂಡಾಡಕರ ಬೆಳ್ಳಿ ಪದಕ (ಯೂತ್), ಋತಿಕಾ ಬಂಡಗಿ ಬೆಳ್ಳಿ ಪದಕ (ಯೂತ್), ರೋಣಿತ ಮುರಕುಟೆ ಬೆಳ್ಳಿ ಪದಕ (ಯೂತ್), ಪಕೀರಗೌಡ ಪಾಟೀಲ ಬೆಳ್ಳಿ ಪದಕ (ಜೂನಿಯರ್),ಸೃಷ್ಠಿ ಮುತಗೇಕರ ಕಂಚಿನ ಪದಕ (ಯೂತ್), ವೈಭವಿ ದಳ ಕಂಚಿನ ಪದಕ (ಜೂನಿಯರ್), ಧ್ಯಾನೇಶ್ವರ ಬೆಕ್ಕಿನಕೇರಿ ಕಂಚಿನ ಪದಕ (ಯೂತ್) ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಉಪ ನಿರ್ದೇಶಕರಾದ ಬಿ. ಶ್ರೀನಿವಾಸ್, ತಂಡದ ವ್ಯವಸ್ಥಾಪಕರಾದ ಪೂಜಾ ಸಂತಾಜಿ, ತಂಡದ ತರಬೇತುದಾರರಾದ ಸದಾನಂದ ಮಾಳಶೆಟ್ಟಿ, ಸಾಹಸ ತರಬೇತಿದಾರರಾದ ರಮೇಶ ಅಲಗುಡೇಕರ ಶುಭ ಕ್ರೀಡಾಪಟುಗಳಿಗೆ ಹಾರೈಸಿದ್ದಾರೆ.

# ಅರಭಾವಿ ಮಠಕ್ಕೆ ಸಚಿವ ಸತೀಶ್ ಜಾರಕಿಹೊಳಿ ಭೇಟಿ



ಅರಭಾವಿ: ಅರಭಾವಿ ಮಠದ ಶ್ರೀ ದುರದುಂಡೇಶ್ವರ ಸಿದ್ಧಸಂಸ್ಥಾನ ಮಠಕ್ಕೆ ಲೋಕೋಪಯೋಗಿ ಸಚಿವರಾದ ಸತೀಶ್ ಜಾರಕಿಹೊಳಿ ಅವರು ಮಠಕ್ಕೆ ಭೇಟಿ ನೀಡಿ, ಆಶೀರ್ವಾದ ಪಡೆದರು.

ಬಳಿಕ, ಪೀಠಾಧಿಪತಿಗಳಾಗಿ ಶ್ರೀ ಮ.ನಿ.ಪ್ರ.ಸ್ವ. ಶ್ರೀ ಗುರು ಬಸವಲಿಂಗ ಮಹಾಸ್ವಾಮಿಜೀ ಅವರೊಂದಿಗೆ ಕೆಲಹೊತ್ತು ಚರ್ಚೆ ನಡೆಸಿದರು.

ಈ ಸಂದರ್ಭದಲ್ಲಿ ಸಚಿವರ ಆಪ್ತ ಸಹಾಯಕರಾದ ಪಾಂಡು ಮನ್ನಿಕೇರಿ, ಪ್ರಹ್ಲಾದ್ ನಾಡಿಗೇರ ಮುಖಂಡರಾದ ಶಂಕರ ಬಿಲಕುಂದಿ, ಮಾರುತಿ ವಿಜಯನಗರ, ಸದಾ ಅಂಗಡಿ, ರಾಜು ಜೋಕಾನಟ್ಟಿ ಹಾಗೂ ಮಠದ ಭಕ್ತರು ಇತರರು ಇದ್ದರು.

# ಆಘಾತಕಾರಿ ತರಂಗಗಳ ಸದ್ಬಳಕೆಗಾಗಿ ಭಾರತೀಯ ವಿಜ್ಞಾನ ಮಂದಿರದಲ್ಲಿ ವ್ಯಾಪಕ ಸಂಶೋಧನೆ: ಖ್ಯಾತ ವಿಜ್ಞಾನಿ ಡಾ. ಜಗದೀಶ್ ಗೋಪಾಲನ್




ಬೆಂಗಳೂರು: ಪಟಾಕಿ, ಬಾಂಬ್, ಸಿಲಿಂಡರ್ ಸ್ಫೋಟ, ಭೂಕಂಪ ಜ್ವಾಲಾಮುಖಿಯಂತಹ ಸ್ಫೋಟದಿಂದ ಹೊರ ಹೊಮ್ಮುವ ಶಬ್ಧದಿಂದ ಘಾತಕಕಾರಿ ತರಂಗಗಳು ಹೊರ ಬರಲಿದ್ದು, ಇವು ಪರಿಸರದ ಮೇಲೆ ಭಾರೀ ಪ್ರತಿಕೂಲ ಪರಿಣಾಮ ಬೀರಲಿವೆ. ಇಂತಹ ಘಾತಕಕಾರಿ ತರಂಗಗಳನ್ನು ಸಮಾಜಕ್ಕೆ ಉಪಯೋಗವಾಗುವ ರೀತಿಯಲ್ಲಿ ಬೆಳೆಸಿಕೊಳ್ಳಲು ಭಾರತೀಯ ವಿಜ್ಞಾನ ಮಂದಿರದಲ್ಲಿ ವ್ಯಾಪಕ ಸಂಶೋಧನೆ ನಡೆಯುತ್ತಿದೆ ಎಂದು ಖ್ಯಾತ ವಿಜ್ಞಾನಿ, ಭಾರತೀಯ ವಿಜ್ಞಾನ ಮಂದಿರದ ಏರೋಸ್ಪೇಸ್ ಇಂಜಿನಿಯರಿಂಗ್ ವಿಭಾಗದ ಹಿರಿಯ ಪ್ರಾಧ್ಯಾಪಕ ಡಾ. ಜಗದೀಶ್ ಗೋಪಾಲನ್ ತಿಳಿಸಿದರು.

ಬಸವನಗುಡಿಯ ನ್ಯಾಷನಲ್ ಕಾಲೇಜಿನ ಡಾ. ಎಚ್.ಎನ್. ಸಭಾಂಗಣದಲ್ಲಿ ಬೆಂಗಳೂರಿನ ವಿಜ್ಞಾನ ವೇದಿಕೆಯಿಂದ ವಿಜ್ಞಾನ ಕುರಿತು ವಿಶೇಷ ಉಪನ್ಯಾಸ ಸರಣಿಗೆ ಚಾಲನೆ ನೀಡಿ ಮಾತನಾಡಿದರು. ಆಘಾತ ತರಂಗ ಪ್ರಸರಣ ಕ್ಷೇತ್ರದಲ್ಲಿ ಪರಿಣಿತಿ ಪಡೆದಿರುವ ಅವರು, ಇಂತಹ ಘಾತಕಕಾರಿ ತರಂಗಗಳಿಂದ ರಕ್ತನಾಳದಲ್ಲಿ ರಕ್ತ ಪರಿಚಲನೆ ಕಡಿಮೆಯಾಗುತ್ತದೆ. ಸೇನೆಯಿಂದ ನಿವೃತ್ತರಾದವರು. ಯುದ್ಧ ಭೂಮಿಯಿಂದ ಹೊರಬರುವ ಯೋಧರಲ್ಲಿ ರಕ್ತ ನಾಳಗಳು ಹಾನಿಗೊಳಗಾಗಿರುತ್ತವೆ. ಇಂತಹ ರಕ್ತನಾಳಗಳನ್ನು ಸೂಕ್ತ ರೀತಿಯಲ್ಲಿ ಕಾರ್ಯನಿರ್ವಹಿಸುವಂತೆ ಮಾಡುವುದೂ ಸೇರಿದಂತೆ ಉಪಯುಕ್ತ ರೀತಿಯಲ್ಲಿ ಬಳಸಿಕೊಳ್ಳಲು ಭಾರತೀಯ ವಿಜ್ಞಾನ ಮಂದಿರದಲ್ಲಿ (ಖಙಖಿ) "ಲ್ಯಾಬೊರೇಟರೀಸ್ ಆನ್ ಹೈಪರ್ ಸಾನಿಕ್ ಅಂಡ್ ಶಾರ್ಟ್ ವೇವ್" ಪ್ರಯೋಗಾಲಯದಲ್ಲಿ ಭಿನ್ನ, ವಿಭಿನ್ನ ಪ್ರಯೋಗಗಳು ನಡೆಯುತ್ತಿವೆ. ಇದು ಪ್ರಪಂಚದಲ್ಲೇ ಅತ್ಯಂತ ದೊಡ್ಡ ಪ್ರಯೋಗಾಲಯ ಎಂದು ಹೇಳಿದರು.

ಇಂತಹ ಘಾತುಕಕಾರಿ ತರಂಗಗಳ ಕುರಿತು ಹೆಚ್ಚಿನ ಜನರಿಗೆ ಅರಿವಿಲ್ಲ. ಮಕ್ಕಳ ಮುಂದೆ ಪಟಾಕಿ ಹೊಡೆದರೆ ಆಗ ಮಕ್ಕಳ ಮೆದುಳು ಶೇ 30 ರಷ್ಟು ಕೆಲಸ ಮಾಡುವುದು ಕಡಿಮೆ ಮಾಡುತ್ತದೆ. ಶೇ ಒಂದರಷ್ಟು ಶ್ವಾಸಕೋಶ ಸಮಸ್ಯೆ ಹೆಚ್ಚಾಗುತ್ತದೆ. ಇಂತಹ ಸಮಸ್ಯೆಗಳ ನಿವಾರಣೆಗಾಗಿ ಇದೀಗ ಒಳ್ಳೊಳ್ಳೆ ಅಪ್ಲಿಕೇಶನ್ ಗಳು ಬರುತ್ತಿವೆ. ಘಾತುಕಕಾರಿ ತರಂಗಗಳಿಂದ ಹುಣ್ಣುಗಳು ವಾಸಿಯಾಗುವ ಜೊತೆಗೆ ಮೂತ್ರ ಪಿಂಡದ ಕಲ್ಲುಗಳನ್ನು ಹೊರತೆಗೆಯಲು ಸಹಕಾರಿಯಾಗಲಿದೆ. ಘಾತಕಕಾರಿ ತರಂಗಗಳು ಒಂದು ರೀತಿಯಲ್ಲಿ ಚಾಕು ಇದ್ದ ಹಾಗೆ, ಇದನ್ನು ಬಳಸಿಕೊಂಡು ಯಾರನ್ನು ಬೇಕಾದರೂ ಕೊಲ್ಲಬಹುದು. ಅದೇ ರೀತಿಯಲ್ಲಿ ಇಂತಹ ತರಂಗಗಳನ್ನು ಉತ್ತಮ ಚಿಕಿತ್ಸೆಗೂ ಸಹ ಬಳಸಿಕೊಳ್ಳಬಹುದಾಗಿದೆ. ಮಧುಮೇಹ ಮತ್ತಿತರೆ ಸಮಸ್ಯೆಗಳ ನಿವಾರಣೆಗೆ ಇದು ಸಹಕಾರಿಯಾಗಲಿದೆ ಎಂದರು.

ವಿಜ್ಞಾನ ಯಾರಿಗೂ ಅರ್ಥವಾಗದಂತಹ ಕ್ಲಿಷ್ಟಕರ ವಿಷಯವಲ್ಲ. ಜನರಿಗೆ ತಂತ್ರಜ್ಞಾನದ ಬಗ್ಗೆ ಅರಿವಿದೆ. ಆದರೆ ವಿಜ್ಞಾನದ ಬಗ್ಗೆ ತಿಳಿವಳಿಕೆ ಇಲ್ಲ.

ಮೂಲ ವಿಜ್ಞಾನದ ಬಗ್ಗೆ ಅರಿವು ಮೂಡಿಸುವುದು ಅತ್ಯಂತ ಅಗತ್ಯವಾಗಿದೆ. ಅದರಲ್ಲೂ ವಿದ್ಯಾರ್ಥಿಗಳಲ್ಲಿ ವಿಜ್ಞಾನದ ಬಗ್ಗೆ ಆಸಕ್ತಿ ಮೂಡಿಸಬೇಕು ಎಂದರು.

ಪದ್ಮಭೂಷಣ ಡಾ. ಎಚ್. ನರಸಿಂಹಯ್ಯ ಅವರು ಸ್ಥಾಪಿಸಿದ ವಿಜ್ಞಾನ ವೇದಿಕೆಯಿಂದ ವಿಜ್ಞಾನ ಜನಪ್ರಿಯಗೊಳಿಸಲು ಇಂದಿನಿಂದ ಪ್ರಾರಂಭವಾಗಿರುವ ಸರಣಿ ಉಪನ್ಯಾಸದಲ್ಲಿ ವಿಜ್ಞಾನ ವಲಯದ ಪರಿಣಿತರು ವಿವಿಧ ವಿಷಯಗಳ ಕುರಿತು ಬೆಳಕು ಚೆಲ್ಲಲಿದ್ದಾರೆ.

ಕಾರ್ಯಕ್ರಮದಲ್ಲಿ ನ್ಯಾಷನಲ್ ಎಜುಕೇಶನ್ ಸೊಸೈಟಿಯ ಉಪಾಧ್ಯಕ್ಷ ವೈ.ಜಿ. ಮಧುಸೂಧನ್, ಕಾರ್ಯದರ್ಶಿಗಳಾದ ವೆಂಟಕಶಿವಾ ರೆಡ್ಡಿ, ಬಿ.ಎಸ್. ಅರುಣ್ ಕುಮಾರ್, ಎನ್.ಸಿ.ಬಿ ಅಧ್ಯಕ್ಷ ಸುಧಾಕರ್ ಎಸ್ತೂರಿ ಮತ್ತಿತರರು ಉಪಸ್ಥಿತರಿದ್ದರು.

# ಬೆಳಗಾವಿಯಲ್ಲಿ ದ್ವಿಚಕ್ರ ವಾಹನ ಕಳ್ಳರ ಬಂಧನ




ಬೆಳಗಾವಿ: ಮೂವರು ಅಂತರಾಜ್ಯ ದ್ವಿಚಕ್ರ ವಾಹನ ಕಳ್ಳರನ್ನು ಬಂಧಿಸಿ, ಅವರಿಂದ 6.79 ಲಕ್ಷ ಮೌಲ್ಯದ 14 ದ್ವಿಚಕ್ರ ವಾಹನಗಳನ್ನು ವಶಪಡಿಸಿಕೊಳ್ಳುವಲ್ಲಿ ಬೆಳಗಾವಿ ನಗರ ಪೊಲೀಸರು ಯಶಸ್ವಿಯಾಗಿದ್ದಾರೆ.

ವಿಜಯಪುರ ಜಿಲ್ಲೆಯ ಇಂಡಿ ತಾಲೂಕಿನ ಅಥರ್ಗಾ ನಿವಾಸಿಗಳಾದ ಮಹೇಶ ನಿಂಗಪ್ಪ ಮಾದರ (23), ಅಮೀರ ಬಾಬು ಏಳಗಿ (19) ಹಾಗೂ ಪ್ರಶಾಂತ ಗೋಪಾಲ ಮೋರೆ (21) ಬಂಧಿತರು. ಬೆಳಗಾವಿ ನಗರದ ಖಡೇಬಜಾರ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಜೂನ್ 18 ರಂದು ದಿಚಕ್ರ ವಾಹನ ಕಳ್ಳತನ ಪ್ರಕರಣ ದಾಖಲಾಗಿತ್ತು.

ಈ ಪ್ರಕರಣದ ಬೆನ್ನು ಬಿದ್ದ ಪೊಲೀಸರು, ಈ ಮೂವರನ್ನು ಪತ್ತೆ ಹಚ್ಚಿ ವಿಚಾರಣೆ ನಡೆಸಿದ್ದಾರೆ. ಈ ವೇಳೆ ಆರೋಪಿತರು ತಪ್ಪೊಪ್ಪಿಕೊಂಡಿದ್ದಲ್ಲೇ, ಬೆಳಗಾವಿ, ಅಥಣಿ, ವಿಜಯಪುರ, ಮಹಾರಾಷ್ಟ್ರದ ಸೋಲ್ಲಾಪೂರ ಹಾಗೂ ಗೋವಾದಲ್ಲಿಯೂ ದ್ವಿಚಕ್ರ ವಾಹನ ಕಳ್ಳತನ ಮಾಡಿರುವುದಾಗಿ ಮಾಹಿತಿ ನೀಡಿದ್ದಾರೆ.

# ಫಸಲ್ ಬಿಮಾ ರೈತ ಸುರಕ್ಷಾ ಜಾಗೃತಿ ಜಾಥಾಗೆ ಚಾಲನೆ




ಬೈಲಹೊಂಗಲ: ಕರ್ನಾಟಕ ರೈತ ಸುರಕ್ಷಾ ಪ್ರಧಾನ ಮಂತ್ರಿ ಫಸಲ್ ಬೀಮಾ (ಬೆಳೆ ವಿಮೆ) ಯೋಜನೆ ಹಿಂಗಾರು ಮತ್ತು ಬೇಸಿಗೆ 2023-24 ರ ಅನುಷ್ಠಾನಗೊಳಿಸಲಾಗಿದ್ದು ಈ ಕುರಿತು ತಾಲೂಕಿನ ರೈತರಲ್ಲಿ ಕೃಷಿ ಇಲಾಖೆ ಹಾಗೂ ಯುನಿವರ್ಸಲ್ ಸೊಂಪೊ ಜನರಲ್ ಇನ್ಸೂರೆನ್ಸ ಕಂಪನಿ ಸಹಯೋಗದಲ್ಲಿ ಜಾಗೃತಿ ಮೂಡಿಸಲು ಕರಪತ್ರ ಬಿಡುಗಡೆಗೊಳಿಸಿ ಸಂಚಾರಿ ವಾಹನಕ್ಕೆ ಸೋಮವಾರ ಚಾಲನೆ ನೀಡಲಾಯಿತು.

ಈ ಸಂದರ್ಭದಲ್ಲಿ ತಾಲೂಕಿನ ಸಹಾಯಕ ಕೃಷಿ ನಿರ್ದೇಶಕ ಬಸವರಾಜ ದಳವಾಯಿ ಮಾತನಾಡಿ, 2023-24 ರ ಹಿಂಗಾರು ಹಂಗಾಮಿನಲ್ಲಿ ಬೆಳೆ ಸಾಲ ಪಡೆಯುವ ಮತ್ತು ಬೆಳೆ ಸಾಲ ಪಡೆಯದ ರೈತರಿಗೆ ಈ ಬೆಳೆ ವಿಮಾ ಯೋಜನೆಯಲ್ಲಿ ಪಾಲ್ಗೊಳ್ಳಲು ಮುಸುಕಿನ ಜೋಳ (ನೀರಾವರಿ), ಗೋದಿ (ನೀರಾವರಿ) ಕಡಲೆ ( ಮಳೆ ಆಶ್ರಿತ ಹಾಗೂ ನೀರಾವರಿ) ಬೆಳೆಗಳಿಗೆ ಡಿ. 15 ಕೊನೆಯ ದಿನವಾಗಿದ್ದು ಉಳಿದ ಹಿಂಗಾರು ಬೆಳೆಗಳಿಗೆ ಡಿ. 01 ಕೊನೆಯ ದಿನವಾಗಿದೆ. ಸ್ಥಳೀಯ ಬ್ಯಾಂಕು, ಗ್ರಾಮ ಒನ್/ ಸಾಮಾನ್ಯ ಸೇವಾ ಕೇಂದ್ರ, ಸಹಕಾರಿ ಸಂಘ, ಕಂದಾಯ, ಕೃಷಿ, ತೋಟಗಾರಿಕೆ ಇಲಾಖೆ ಮುಂತಾದ ಕಛೇರಿಗಳಲ್ಲಿ ರೈತರು ಮಾಹಿತಿ ಪಡೆಯಬಹುದಾಗಿದೆ ಎಂದರು.

ಈ ಸಂದರ್ಭದಲ್ಲಿ ಇಲಾಖಾ ಅಧಿಕಾರಿಗಳಾದ ಎಂ.ಎಸ್.ಬಿಸಗುಪ್ಪಿ, ದೇಮಪ್ಪ ಹೊಡೆಪ್ಪನವರ, ಚಂದ್ರಕಾಂತ ಮರಡಿ, ಅಶೋಕ ಗಣಾಚಾರಿ, ಬಿ.ಕೆ. ಜಮಾದಾರ, ಕಲ್ಲಯ್ಯಾ ಗಣಾಚಾರಿ, ಮಂದಾರ ಮಡಿವಾಳರ, ಮಾರುತಿ ಮಾಸ್ತಮ್ಮನವರ, ರಾಜು ಅಂಗಡಿ ಮುಂತಾದವರು ಇದ್ದರು.

# ಪಿಎಸ್‌ಐ ಸೇರಿ ಮೂವರು ಪೊಲೀಸ್ ಸಿಬ್ಬಂದಿ ವಿರುದ್ಧ ಎಫ್‌ಐಆರ್ ದಾಖಲು




ಕೋಲಾರ: ವಿಚಾರಣೆಗೆಂದು ಕರೆತಂದು ಪೊಲೀಸರ ಸುಪರ್ದಿಯಲ್ಲಿದ್ದ ಕಳವು ಪ್ರಕರಣದ ಶಂಕಿತ ಆರೋಪಿ ಲಾಕಪ್ ಡೆತ್ ಆದ ಹಿನ್ನೆಲೆ ಪಿಎಸ್‌ಐ ಹಾಗೂ ಇಬ್ಬರು ಪೊಲೀಸ್ ಪೇದೆಗಳ ವಿರುದ್ಧ ಪ್ರಕರಣ ದಾಖಲಾಗಿದೆ.

ಕೋಲಾರ ಜಿಲ್ಲೆಯ ಮುಳಬಾಗಿಲು ನಂಗಲಿ ಪೊಲೀಸ್ ಠಾಣೆ ಪಿಎಸ್‌ಐ ಹಾಗೂ ಇಬ್ಬರು ಪೊಲೀಸ್ ಪೇದೆಗಳ ವಿರುದ್ಧ ಎಫ್‌ಐಅರ್ ದಾಖಲಾಗಿದೆ. ಕಳವು ಪ್ರಕರಣದಲ್ಲಿ ಆಂಧ್ರಪ್ರದೇಶದ ಮದನಪಲ್ಲಿ ಮೂಲದ ಮುನಿರಾಜು ಹಾಗೂ ಬಾಲಾಜಿ ಎಂಬವವರನ್ನ ವಿಚಾರಣೆಗೆಂದು ಕರೆ ತಂದಿದ್ದ ವೇಳೆ ಮುನಿರಾಜು ಮೃತಪಟ್ಟಿದ್ದ.

ಇಲಾಖೆ ಹಿರಿಯ ಅಧಿಕಾರಿಗಳ ಗಮನಕ್ಕೆ ತಾರದೆ ಆರೋಪಿಗಳನ್ನ ವಿಚಾರಣೆ ಮಾಡಿ ಕರ್ತವ್ಯ ಲೋಪ ಎಸಗಿದ್ದಾರೆಂದು ಮುಳಬಾಗಿಲು ಡಿವೈಎಸ್‌ಪಿ ನಂದ ಕುಮಾರ್ ವರದಿ ಆಧರಿಸಿ, ಪಿಎಸ್‌ಐ ಪ್ರದೀಪ್ ಸಿಂಗ್, ಪೊಲೀಸ್ ಪೇದೆಗಳಾದ ಮಂಜುನಾಥ್, ಮಹಾಂತೇಶ್ ಪೂಜಾರಿ ವಿರುದ್ಧ ಪ್ರಕರಣ ದಾಖಲಾಗಿದೆ. ಸೆ. 17ರಂದು ಮುನಿರಾಜು ಹಾಗೂ ಬಾಲಾಜಿ ಎಂಬ ಇಬ್ಬರನ್ನು ಕರೆತಂದಿದ್ದರು. ಅಕ್ಟೋಬರ್ 1 ರಂದು ಮುನಿರಾಜು ಕೋಲಾರದ ಖಾಸಗಿ ಆಸ್ಪತ್ರೆಯಲ್ಲಿ ಮೃತಪಟ್ಟಿದ್ದ. ಇಲಾಖೆ ಹಿರಿಯ ಅಧಿಕಾರಿಗಳ ಗಮನಕ್ಕೆ ತಾರದೆ, 15 ದಿನಗಳ ಕಾಲ ಪೊಲೀಸ್ ಠಾಣೆ, ಬೇರೆ ಬೇರೆ ಸ್ಥಳಗಳಲ್ಲಿರಿಸಿ ವಿಚಾರಣೆ ವೇಳೆ ಮುನಿರಾಜು ಮೃತಪಟ್ಟಿದ್ದ. ಪರಿಣಾಮ ಪಿಎಸ್‌ಐ ಸೇರಿ ಇಬ್ಬರು ಪೊಲೀಸ್ ಪೇದೆಗಳ ವಿರುದ್ಧ ಪ್ರಕರಣ ದಾಖಲಾದ ಕಾರಣ ಇವರನ್ನು ಕೋಲಾರ ಎಸ್ಪಿ ನಾರಾಯಣ ಅಮಾನತು ಮಾಡಿದ್ದಾರೆ.

# ಹಾವು ಕಡಿದು 4ನೇ ತರಗತಿ ವಿದ್ಯಾರ್ಥಿನಿ ಸಾವು



ಕಲಬುರಗಿ: ಹಾವು ಕಡಿದು ಶಾಲಾ ಬಾಲಕಿ ಸಾವನ್ನಪ್ಪಿದ ಘಟನೆ ಅಫಜಲಪುರ ತಾಲೂಕಿನ ಬಿಲ್ವಾಡ್ (ಬಿ) ಗ್ರಾಮದಲ್ಲಿ ನಡೆದಿದೆ. ಸೋನಿಕಾ ಪಾಟೀಲ್ (10) ಮೃತ ಶಾಲಾ ಬಾಲಕಿ ಸೋನಿಕಾ ಬಿಲ್ವಾಡ್ (ಬಿ) ಗ್ರಾಮದ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆಯಲ್ಲಿ 4ನೇ ತರಗತಿ ಓದುತ್ತಿದ್ದಳು. ನಿನ್ನೆ ಶಾಲೆಯಿಂದ ಮನೆಗೆ ಬರುತ್ತಿರುವಾಗ ಹಾವು ಕಡಿದಿತ್ತು. ಅಫಜಲಪುರ ಪೊಲೀಸ್ ಠಾಣೆಯಲ್ಲಿ ಈ ಪ್ರಕರಣ ದಾಖಲಾಗಿದೆ.

# ಬರ ನಿರ್ವಹಣೆಯಲ್ಲಿ ಲೋಪವಾದರೆ ಅಧಿಕಾರಿಗಳೇ ಹೊಣೆ ಸಚಿವ ಸತೀಶ್ ಜಾರಕಿಹೊಳಿ ಎಚ್ಚರಿಕೆ

ಹುಕ್ಕೇರಿ ತಾಪಂ ಸಭಾಭವನದಲ್ಲಿ ನಡೆದ ಕೆಡಿಪಿ ಸಭೆ

ಹುಕ್ಕೇರಿ: ಬರ ನಿರ್ವಹಣೆಗೆ ಸರ್ಕಾರ ರೂಪಿಸಿರುವ ಕಾರ್ಯಕ್ರಮಗಳನ್ನು ಅನುಷ್ಠಾನಕ್ಕೆ ತರುವಲ್ಲಿ ಲೋಪವಾದರೆ ಅಧಿಕಾರಿಗಳನ್ನೇ ಹೊಣೆಗಾರರನ್ನಾಗಿ ಮಾಡಲಾಗುವುದು ಎಂದು ಲೋಕೋಪಯೋಗಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಸತೀಶ ಜಾರಕಿಹೊಳಿ ಎಚ್ಚರಿಸಿದರು.

ಪಟ್ಟಣದ ತಾಲೂಕು ಪಂಚಾಯಿತಿ ಸಭಾಭವನದಲ್ಲಿ ಮಂಗಳವಾರ ನಡೆದ ಬರ ನಿರ್ವಹಣೆ ಮತ್ತು ತ್ರೈಮಾಸಿಕ ಕೆಡಿಪಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ತಹಸೀಲದಾರ ಹಾಗೂ ನೋಡೆಲ್ ಅಧಿಕಾರಿಗಳು ಕೆಳ ಹಂತದ ಅಧಿಕಾರಿಗಳಿಂದ ಕೆಲಸ ತೆಗೆದುಕೊಳ್ಳಬೇಕು. ಈ ಕರ್ತವ್ಯದಲ್ಲಿ ಉದಾಸೀನತೆ ತೋರುವವರ ವಿರುದ್ಧ ನಿರ್ಧಾಕ್ಷೀಣ್ಯ ಕ್ರಮ ಕೈಗೊಳ್ಳಲಾಗುವುದು ಎಂದು ತಾಕೀತು ಮಾಡಿದರು.



ಸರ್ಕಾರ ಬರವನ್ನು ಗಂಭೀರವಾಗಿ ಪರಿಗಣಿಸಿದ್ದು ಬರ ಪರಿಹಾರಕ್ಕೆ ಯಾವುದೇ ರೀತಿಯ ಅನುದಾನದ ಕೊರತೆಯಿಲ್ಲ. ಅಗತ್ಯ ಕೆಲಸಗಳಿಗೆ ಕೋರಿಕೆ ಸಲ್ಲಿಸಿದ ಕೂಡಲೇ ಜಿಲ್ಲಾಧಿಕಾರಿ ಹಣ ಬಿಡುಗಡೆ ಮಾಡುತ್ತಾರೆ. ಇಲಾಖೆ ಅಧಿಕಾರಿಗಳು ಎಚ್ಚರಿಕೆಯಿಂದ ಕಾರ್ಯನಿರ್ವಹಿಸಬೇಕು.

ಅಧಿಕಾರಿಗಳ ಕಾರ್ಯವೈಖರಿ ಮೇಲೆ ನಿಗಾ ವಹಿಸಬೇಕು ಎಂದು ಅವರು ಸೂಚಿಸಿದರು.

ಜನ ಮತ್ತು ಜಾನುವಾರುಗಳ ಕುಡಿಯುವ ನೀರು ಪೂರೈಕೆಯಲ್ಲಿ ಯಾವುದೇ ರೀತಿಯಲ್ಲಿ ತೊಂದರೆಯಾಗದಂತೆ ನೋಡಿಕೊಳ್ಳಬೇಕು. ಜಾನುವಾರುಗಳ ವಿಮೆ ಅವೈಜ್ಞಾನಿಕವಾಗಿದ್ದು ಮರು ಪರಿಶೀಲಿಸುವಂತೆ ಸರ್ಕಾರಕ್ಕೆ ಪ್ರಸ್ತಾವಣೆ ಸಲ್ಲಿಸಬೇಕು. ಗ್ರಾಮ ಲೆಕ್ಕಾಧಿಕಾರಿಗಳು ಮತ್ತು ಪಂಚಾಯಿತಿ ಅಭಿವೃದ್ಧಿ ಅಧಿಕಾರಿ(ಪಿಡಿಒ)ಗಳು ಕೇಂದ್ರ ಸ್ಥಾನದಲ್ಲಿದ್ದು ಬರ ಪರಿಸ್ಥಿತಿಯನ್ನು ಪರಿಣಾಮಕಾರಿ ಎದುರಿಸಬೇಕು ಎಂದು ಅವರು ಆದೇಶಿಸಿದರು.

ಉದ್ಯೋಗ ಖಾತರಿಯಲ್ಲಿ ದುಡಿಯುವ ಕೈಗಳಿಗೆ ಕೆಲಸ ನೀಡಬೇಕು.

15ನೇ ಹಣಕಾಸು ಯೋಜನೆಯಡಿ ಸೇರಿದಂತೆ ವಿವಿಧ ಅನುದಾನದಡಿ ಕೈಗೆತ್ತಿಕೊಂಡ ಕಾಮಗಾರಿಗಳನ್ನು ನಿಗದಿತ ಅವಧಿಯಲ್ಲಿ ಪೂರ್ಣಗೊಳಿಸಬೇಕು.

ಈ ಮೂಲಕ ಯಾವುದೇ ಅನುದಾನ ಸರ್ಕಾರಕ್ಕೆ ಮರಳಿ ಹೋಗದಂತೆ ಕರ್ತವ್ಯ ನಿರ್ವಹಿಸಬೇಕು ಎಂದು ಅವರು ಹೇಳಿದರು.

ಉಪವಿಭಾಗಾಧಿಕಾರಿ ಶ್ರವಣ ನಾಯಿಕ, ತಾಪಂ ಆಡಳಿತಾಧಿಕಾರಿಯೂ ಆದ ಸಮಾಜ ಕಲ್ಯಾಣ ಇಲಾಖೆ ಜಂಟಿ ನಿರ್ದೇಶಕ ಲಕ್ಷ್ಮಣ ಬಬಲಿ, ತಾಪಂ ಕಾರ್ಯನಿರ್ವಾಹಕ ಅಧಿಕಾರಿ ಪ್ರವೀಣ ಕಟ್ಟಿ, ತಹಶಿಲ್ದಾರ್ ಮಂಜುಳಾ ನಾಯಕ ಮತ್ತಿತರರು ಉಪಸ್ಥಿತರಿದ್ದರು.

## ಇಂದು ರಾಜ್ಯ ಮಕ್ಕಳ ಸಾಹಿತ್ಯ ಪರಿಷತ್ ನೂತನ ಘಟಕ ಉದ್ಘಾಟಣೆ

ಬೈಲಹೊಂಗಲ: ಕರ್ನಾಟಕ ರಾಜ್ಯ ಮಕ್ಕಳ ಸಾಹಿತ್ಯ ಪರಿಷತ್ತು ತಾಲೂಕು ಘಟಕ ಉದ್ಘಾಟನೆ, ಗ್ರಂಥ ಲೋಕಾರ್ಪಣೆ ಮತ್ತು ಮಕ್ಕಳ ಮಂದಾರ ಪ್ರಶಸ್ತಿ ವಿತರಣೆ ಕಾರ್ಯಕ್ರಮವು ಪಟ್ಟಣದ ಬಿಇಓ ಕಚೇರಿ ಹತ್ತಿರದ ಶಾಸಕರ ಮತಕ್ಷೇತ್ರ ಮಾದರಿ ಕನ್ನಡ ಹಿರಿಯ ಪ್ರಾಥಮಿಕ ಕನ್ನಡ ಗಂಡು ಮಕ್ಕಳ ಶಾಲೆ ನಂ.4 ರಲ್ಲಿ ದಿ.29 ರಂದು ಬುಧವಾರ ಮಧ್ಯಾಹ್ನ 2.30 ಕ್ಕೆ ಜರುಗಲಿದೆ.

ಚಾರಿತ್ರಿಕ ಕಾದಂಬರಿಕಾರ, ಕನ್ನಡ ಸಾಹಿತ್ಯ ಪರಿಷತ್ತಿನ ಮಾಜಿ ಜಿಲ್ಲಾಧ್ಯಕ್ಷ ಯ.ರು.ಪಾಟೀಲ ಕಾರ್ಯಕ್ರಮ ಉದ್ಘಾಟಿಸುವರು. ಕರ್ನಾಟಕ ರಾಜ್ಯ ಮಕ್ಕಳ ಸಾಹಿತ್ಯ ಪರಿಷತ್ತಿನ ಜಿಲ್ಲಾಧ್ಯಕ್ಷ ಸಿದ್ರಾಮ ನಿಲಜಗಿ ಸಭೆಯ ಅಧ್ಯಕ್ಷತೆ ವಹಿಸುವರು. ಸದಾಶಿವಯ್ಯ ಪತ್ರಿಮಠ ಶಾಸ್ತ್ರಿಗಳು ಸಾನಿಧ್ಯ ವಹಿಸುವರು. ಮುಖ್ಯ ಅತಿಥಿಗಳಾಗಿ ಕ್ಷೇತ್ರ ಶಿಕ್ಷಣಾಧಿಕಾರಿ ಎ.ಎನ್.ಪ್ಯಾಟಿ, ಕ್ಷೇತ್ರ ಸಮನ್ವಯಾಧಿಕಾರಿ ಬಿ.ಎನ್.ಕಸಾಳೆ, ಕ.ರಾ.ಪ್ರೌ.ಶಾ.ಶಿಕ್ಷಕರ ಸಂಘದ ಜಿಲ್ಲಾಧ್ಯಕ್ಷ ಎಸ್.ಎಂ.ಪಾಟೀಲ, ಶಾಸಕರ ಮತಕ್ಷೇತ್ರದ ಮಾದರಿ ಪ್ರಾಥಮಿಕ ಶಾಲೆ ನಂ.4 ರ ಮುಖ್ಯೋಪಾಧ್ಯಾಯ ಸಿ.ಬಿ.ಶೀಗಿಹಳ್ಳಿ, ಜಾಗತಿಕ ಲಿಂಗಾಯತ ಮಹಾಸಭಾ ತಾಲೂಕಾ ಅಧ್ಯಕ್ಷ ಮಹೇಶ ಕೋಟಗಿ, ಕ.ರಾ.ಮ.ಸಾ.ಪ ಗೌರವ ಅಧ್ಯಕ್ಷ ಡಾ.ಲಕ್ಷ್ಮಣ ಚೌರಿ, ಕ.ರಾ.ಮ.ಸಾ.ಪ ಜಿಲ್ಲಾ ಕಾನೂನು ಸಲಹೆಗಾರ ಡಾ.ಉದ್ದಣ್ಣ ಗೋಡೇರ ಆಗಮಿಸುವರು.ಇದೇ ವೇಳೆ ಹಿರಿಯ ಪತ್ರಕರ್ತ ಸಿ.ವಾಯ್.ಮೆಣಸಿನಕಾಯಿ ಅವರು ರಚಿಸಿದ ಬಾಳು ಬಂಗಾರ ಮತ್ತಿತರ ಕಥೆಗಳು ಮತ್ತು ಕಾಲಚಕ್ರ ಮತ್ತಿತರ ಕಥೆಗಳು ಕಥಾ ಸಂಕಲನ ಲೋಕಾರ್ಪಣೆ ಕಾರ್ಯಕ್ರಮ ಹಾಗೂ ಮಕ್ಕಳ ಮಂದಾರ ಪ್ರಶಸ್ತಿ ವಿತರಣೆ, ಸನ್ಮಾನ ಕಾರ್ಯಕ್ರಮವು ನಡೆಯಲಿದೆ ಎಂದು ಬೈಲಹೊಂಗಲ ತಾಲೂಕಾ ಘಟಕದ ಸಂಘಟಣಾ ಕಾರ್ಯದರ್ಶಿ ಮಹಾಂತೇಶ ರಾಜಗೋಳಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅದ್ದೂರಿಯಾಗಿ ಸೆಟ್ಟೇರಿದ 'ಸಿಂಹರೂಪಿಣಿ'



ಬೆಂಗಳೂರ: ಭಕ್ತಿ ಪ್ರಧಾನ ಚಿತ್ರಗಳು ಕಡಿಮೆಯಾಗುತ್ತಿರುವ ಇಂದಿನ ದಿನಮಾನಗಳಲ್ಲಿ 'ಸಿಂಹರೂಪಿಣಿ' ಎನ್ನುವ ಭಕ್ತಿಪ್ರಧಾನ ಚಿತ್ರವೊಂದು ಯರಪ್ಪನಹಳ್ಳಿಯ ಶ್ರೀ ಆದಿಶಕ್ತಿ ಮಾರಮ್ಮದೇವಿ ಸನ್ನಿಧಿಯಲ್ಲಿ ಅದ್ದೂರಿಯಾಗಿ ಮುಹೂರ್ತದ ಚಿತ್ರೀಕರಣಕ್ಕೆ ಚಾಲನೆ ದೊರಕಿದೆ.

ಈಗಾಗಲೇ ಕೆಜಿಎಫ್ ,ಕಬ್ಜ, ಜಂಟಲ್‌ಮ್ಯಾನ್, ಮದಗಜ ಚಿತ್ರಗಳ ಮೂಲಕ ಚಿರಪರಿಚಿತವಾಗಿರುವ ಚಿತ್ರಸಾಹಿತಿ ಕಿನ್ನಾಳ ರಾಜ್ ಅವರು ಈ ಚಿತ್ರವನ್ನ ನಿರ್ದೇಶನ ಮಾಡುತ್ತಿದ್ದಾರೆ. ಶ್ರೀಚಕ್ರ ಫಿಲಂಸ್ ಲಾಂಛನದಲ್ಲಿ ಶ್ರೀಯುತ ಕೆ.ಎಂ.ನಂಜುಂಡೇಶ್ವರ ಅವರೆ ಕಥೆ ಬರೆದು ಚಿತ್ರ ನಿರ್ಮಾಣ ಮಾಡುತ್ತಿರುವ ಈ ಚಿತ್ರ ಶ್ರೀ ಮಾರಮ್ಮದೇವಿಯ ಭಕ್ತಿ ಪ್ರಧಾನ ಕಥೆ ಹೊಂದಿದ್ದು , ಪಕ್ಕಾ ಕಮರ್ಷಿಯಲ್ ಎಂಟ್ರಟೈನ್ಮೆಂಟ್ ಜೊತೆಗೆ ಅದ್ದೂರಿ ಗ್ರಾಫಿಕ್ಸ್ ತಂತ್ರಜ್ಞಾನ ಚಿತ್ರವಾಗಲಿದೆ ಎನ್ನುವುದು ಚಿತ್ರತಂಡದ ಮಾತು.

ಚಿತ್ರದಲ್ಲಿ ದೊಡ್ಡ ತಾರಾಬಳಗವೆ ಇದೆ. ಹರೀಶ್ ರಾಯ್, ಯಶ್ ಶೆಟ್ಟಿ ,ದಿನೇಶ್ ಮಂಗಳೂರು, ಪುನೀತ್ ರುದ್ರನಾಗ್, ನೀನಾಸಂ ಅಶ್ವತ್ಥ್ ಅಂತಹ ಕೆಜಿಎಫ್ ಚಿತ್ರದ ಘಟಾನುಘಟಿಗಳ ಜೊತೆಗೆ ತೆಲುಗಿನ ಸುಮನ್ ತಲ್ವಾರ್, ತಮಿಳಿನ ದಿನಾ ಕೂಡ ಮುಖ್ಯ ಪಾತ್ರ ನಿರ್ವಹಿಸುತ್ತಿದ್ದಾರೆ. ಸಾಗರ್ ಎನ್ನುವ ಹೊಸ ಹುಡುಗ ನಾಯಕನಾಗಿ ಕಾಣಿಸಿಕೊಳ್ಳುತ್ತಿದ್ದು. ಖ್ಯಾತ ನಿರೂಪಕಿ ಅಂಕಿತಾ ಗೌಡ ಅವರು ಈ ಚಿತ್ರದ ಮೂಲಕ ನಾಯಕಿಯಾಗಿ ಕನ್ನಡ ಚಿತ್ರರಂಗಕ್ಕೆ ಪಾದಾರ್ಪಣೆ ಮಾಡಲಿದ್ದಾರೆ. ಇನ್ನುಳಿದ ಮುಖ್ಯ ಪಾತ್ರಗಳಲ್ಲಿ ಯಶಸ್ವಿನಿ, ದಿವ್ಯಾ ಆಲೂರ ಭಜರಂಗಿ ಪ್ರಸನ್ನ, ಬಲರಾಜ ವಾಡಿ. ವಿಜಯ್ ಚಂಡೂರ್, ಗಣೇಶ್‌ರಾವ್ ಕೇಸರಕರ, ಮನಮೋಹನ್ ರೈ , ಆರವ್ ಲೋಹಿತ್, ಪಿಳ್ಳಣ್ಣ, ಕೆಂಪೇಗೌಡ, ಬಿಗ್‌ಬಾಸ್ ಖ್ಯಾತಿಯ ಸೋನು ಪಾಟೀಲ್, ರಿಲ್ಸ್ ಹಾಗೂ ಶಾರ್ಟ್ ಫಿಲಂಸ್ ಮೂಲಕ ಮನೆ ಮಾತಾಗಿರುವ ಭೂಮಿಕಾ ಮಂಜುನಾಥ್, ಹಾಗೂ ಮಧುಶ್ರೀ, ರಾಶೀಕ , ಯುಕ್ತ ಮಲ್ನಾಡ್, ವೇದಾ ಹಾಸನ್, ಸುನಂದಾ ಕಲ್ಬುರ್ಗಿ ಇನ್ನು ಅನೇಕ ಕಲಾವಿದರು ನಟಿಸುತ್ತಿದ್ದಾರೆ.

ಆಕಾಶ ಪರ್ವ ಸಂಗೀತ, ನಂದಕುಮಾರ ಛಾಯಾಗ್ರಹಣ, ವೆಂಕಿ ಯು ಡಿ ವಿ ಸಂಕಲನ, ಅರುಣ್ ರೈ ನೃತ್ಯ ,ಚಂದ್ರು ಬಂಡೆ ಸಾಹಸ, ಎಕ್ಸಿಕ್ಯೂಟಿವ್ ಪ್ರೊಡ್ಯೂಸರ್ ಕೆ. ಬಾಲಸುಬ್ರಹ್ಮಣ್ಯಂ , ಪಿ.ಆರ್.ಓ ಆರ್.ಚಂದ್ರಶೇಖರ್, ಪತ್ರಿಕಾ ಸಂಪರ್ಕ ಡಾ. ಪ್ರಭು ಗಂಜಿಹಾಳ್, ಡಾ. ವೀರೇಶ್ ಹಂಡಗಿ ಅವರದಿದೆ.

## 30ರಂದು ಹುಕ್ಕೇರಿಯಲ್ಲಿ ವೈಭವದ ಭಕ್ತ ಕನಕದಾಸರ ಜಯಂತಿ ಉತ್ಸವ

ಹುಕ್ಕೇರಿ : ಸಂತ ಶ್ರೇಷ್ಠ ಭಕ್ತ ಕನಕದಾಸ ಅವರ 536ನೇ ಜಯಂತಿ ಉತ್ಸವವನ್ನು ಈ ಬಾರಿ ಹುಕ್ಕೇರಿಯಲ್ಲಿ ಇದೇ ತಿಂಗಳು ನ. 30 ರಂದು ಅದ್ದೂರಿಯಾಗಿ ಸಡಗರ–ಸಂಭ್ರಮದಿಂದ ಆಚರಿಸಲಾಗುವುದು ಎಂದು ಉತ್ಸವ ಸಮಿತಿ ಕಾರ್ಯದರ್ಶಿಯೂ ಆದ ನ್ಯಾಯವಾದಿ ಭೀಮಸೇನ ಬಾಗಿ ಹೇಳಿದರು.

ಪಟ್ಟಣದಲ್ಲಿ ಸೋಮವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಈ ಬಾರಿ ಕನಕದಾಸರ ಜಯಂತಿಯನ್ನು ತಾಲೂಕು ಆಡಳಿತದ ಸಹಯೋಗದೊಂದಿಗೆ ವಿಶಿಷ್ಟ ಮತ್ತು ವಿಭಿನ್ನವಾಗಿ ಆಚರಿಸಲು ತಾಲೂಕಿನ ಸಮಸ್ತ ಕುರುಬರ (ಹಾಲುಮತ) ಸಮಾಜದ ಮುಖಂಡರು ನಿರ್ಧರಿಸಿದ್ದಾರೆ. ತಾಲೂಕಿನ ವಿವಿಧ ಗ್ರಾಮಗಳಿಂದ ಸಾವಿರಕ್ಕೂ ಹೆಚ್ಚು ಜನ ಸೇರುವ ನಿರೀಕ್ಷೆ ಇದೆ ಎಂದರು.



ನ. 30 ರಂದು ಬೆಳಗ್ಗೆ 8 ಕ್ಕೆ ಪಟ್ಟಣದ ಅಡವಿಸಿದ್ದೇಶ್ವರ ಮಠದಿಂದ ಪ್ರಮುಖ ಬೀದಿಗಳಲ್ಲಿ ಡೊಳ್ಳಿನ ವಾದ್ಯಮೇಳ, ಕುಂಭ ಮೇಳದೊಂದಿಗೆ ಕನಕದಾಸರ ಭಾವಚಿತ್ರದ ಭವ್ಯ ಮೆರವಣಿಗೆ ನಡೆಯಲಿದೆ. ಬಳಿಕ ತಾಲೂಕು ಪಂಚಾಯಿತಿ ಸಭಾಭವನದಲ್ಲಿ ಬೆಳಗ್ಗೆ 11 ಕ್ಕೆ ನಡೆಯುವ ಸಮಾರಂಭದ ಸಾನಿಧ್ಯವನ್ನು ಚಂದ್ರಶೇಖರ ಶಿವಾಚಾರ್ಯ ಸ್ವಾಮೀಜಿ, ಶಿವಬಸವ ಸ್ವಾಮೀಜಿ, ಅಭಿನವ ಮಂಜುನಾಥ ಸ್ವಾಮೀಜಿ ವಹಿಸುವರು. ಶಾಸಕ ನಿಖಿಲ ಕತ್ತಿ, ತಹಸೀಲದಾರ ಮಂಜುಳಾ ನಾಯಕ, ಸಮಾಜದ ಅಧ್ಯಕ್ಷ ಡಾ.ಜಯಪ್ರಕಾಶ ಕರಜಗಿ ಮತ್ತಿತರರು ಉಪಸ್ಥಿತರಿರುವರು. ಹಿರಿಯ ಸಾಹಿತಿ ಡಾ.ಗುರುಪಾದ ಮರಿಗುದ್ದಿ ಉಪನ್ಯಾಸ ನೀಡುವರು ಎಂದು ಅವರು ತಿಳಿಸಿದರು.

ಹಾಲುಮತ ಸಮಾಜದಿಂದ ಕನಕದಾಸರ ಜಯಂತಿ ಉತ್ಸವದ ವೈಭವ ಹೆಚ್ಚಿಸಲು ಇದೇ ಮೊಟ್ಟ ಮೊದಲ ಬಾರಿಗೆ ವಿವಿಧ ವಲಯಗಳಲ್ಲಿ ಅತ್ಯುತ್ತಮ ಸೇವೆ ಸಲ್ಲಿಸಿದ ಅಪ್ಪಾಸಾಹೇಬ ಶಿರಕೋಳಿ, ನಾಗಪ್ಪಾ ಕರಜಗಿ, ಭೀಮಣ್ಣಾ ರಾಮಗೋನಟ್ಟಿ, ಮಹಾವೀರ ನಿಲಜಗಿ, ಎಸ್.ನಂಜುಂಡಪ್ಪಾ ಅವರಿಗೆ ಕನಕ ಸದ್ಭಾವನಾ ಪ್ರಶಸ್ತಿ ನೀಡಿ ಗೌರವಿಸಲಾಗುವುದು. ಇದೇ ವೇಳೆ ಕನಕದಾಸರ ವಿಚಾರಧಾರೆಗಳನ್ನು ತಾಲೂಕಿನ ಪ್ರತಿ ಹಳ್ಳಿ ಹಳ್ಳಿಗೂ ತಲುಪಿಸಲು ವಿಶೇಷ ಕಾರ್ಯಕ್ರಮಗಳನ್ನು ರೂಪಿಸಲಾಗುವುದು ಎಂದು ಅವರು ಹೇಳಿದರು.

ಮುಖಂಡರಾದ ಗಜಾನನ ಕ್ವಳ್ಳಿ, ಕೆ.ಕೆ.ಬೆಣಚಿನಮರಡಿ, ಭೀಮಣ್ಣಾ ರಾಮಗೋನಟ್ಟಿ, ಬಸವರಾಜ ಹಾಲಟ್ಟಿ, ಸಿದ್ದಪ್ಪ ಏಗನ್ನವರ, ಸಿದ್ದಪ್ಪ ಹಳಿಜೋಳ, ಹೆಗಡೆ, ಕುಮಾರ ಬೆಂಕಿ, ಸತ್ಯಪ್ಪಾ ಚಂದರಗಿ, ಅಶೋಕ ಡುಮ್ಮನವರ, ಹಾಲಪ್ಪಾ ಕುಡ್ಡಬಾಳಪ್ಪಗೋಳ ಮತ್ತಿತರರು ಉಪಸ್ಥಿತರಿದ್ದರು

## ಎನ್.ಎಸ್.ಎಸ್ ವಾರ್ಷಿಕ ಶಿಬಿರ

ಬೆಳಗಾವಿ: ಕೆ.ಎಲ್.ಇ ಸಂಸ್ಥೆಯ ಜಿ.ಎ. ಪದವಿ ಪೂರ್ವ ಕಾಲೇಜಿನ 2023–24 ನೆ ಸಾಲಿನ ಎನ್. ಎಸ್.ಎಸ್ ವಾರ್ಷಿಕ ಶಿಬಿರವನ್ನು ಬೆಳಗಾವಿ ತಾಲೂಕಿನ ಕಂಗ್ರಾಳಿ ಬಿಕೆ ಗ್ರಾಮದಲ್ಲಿ ದಿನಾಂಕ 29/11/2023ರಿಂದ 05/12/2023ರ ವರೆಗೆ ಹಮ್ಮಿಕೊಳ್ಳಲಾಗಿದೆ.

ಉದ್ಘಾಟನಾ ಸಮಾರಂಭವನ್ನು ಗ್ರಾಮ ಪಂಚಾಯಿತಿ ಚೇರ್ಮನ್ ಕೌಸರ ಜಹಾನ್ ಬಿ ಸಯ್ಯದ್ ಉದ್ಘಾಟಿಸಲಿದ್ದಾರೆ.

ಪ್ರಾಚಾರ್ಯರಾದ ಶ್ರೀ ಆರ್ ಎಸ್ ಪಾಟೀಲ್ ಅಧ್ಯಕ್ಷತೆ ವಹಿಸಲಿದ್ದಾರೆ. 7 ದಿನಗಳ ಕಾಲ ವಿವಿಧ ಉಪನ್ಯಾಸ,ಹಾಗೂ ಆರೋಗ್ಯ ತಪಾಸಣೆ ಹಾಗೂ ಜಾಗೃತಿ ಜಾಥಾ ಕಾರ್ಯಕ್ರಮಗಳು ನಡೆಯಲಿವೆ ಎಂದು ಪ್ರಾಚಾರ್ಯ ರವೀಂದ್ರ ಪಾಟೀಲ ತಿಳಿಸಿದ್ದಾರೆ.

## ಬಸ್–ಬೈಕ್ ನಡುವೆ ಅಪಘಾತ: ಇಬ್ಬರು ಸ್ಥಳದಲ್ಲೇ ಸಾವು




ಕಲಬುರಗಿ: ಬರ್ತ್ ಡೇ ಪಾರ್ಟಿಗೆ ತೆರಳುತ್ತಿದ್ದ ಇಬ್ಬರು ಸ್ನೇಹಿತರು ಅಪಘಾತದಲ್ಲಿ ದಾರುಣವಾಗಿ ಸಾವನ್ನಪ್ಪಿರೋ ಘಟನೆ ಜಿಲ್ಲೆಯ ಜೇವರ್ಗಿ ತಾಲೂಕಿನ ಕಟ್ಟಿ ಸಂಗಾವಿ ಬಳಿ ನಡೆದಿದೆ.

ಶಶಿಕುಮಾರ್ (21) ಹಾಗೂ ಪ್ರಜ್ವಲ್(22) ಮೃತ ಬೈಕ್ ಸವಾರರು. ಬೈಕ್ ಮತ್ತು ಕೆಎಸ್ಆರ್‌ಟಿಸಿ ಬಸ್ ನಡುವೆ ಮುಖಾಮುಖಿ ಡಿಕ್ಕಿಯಾಗಿ ಸ್ಥಳದಲ್ಲೇ ಇಬ್ಬರು ಯುವಕರು ಮೃತಪಟ್ಟಿದ್ದಾರೆ. ಬಸ್ಗೆ ಡಿಕ್ಕಿ ಹೊಡೆದ ಪರಿಣಾಮ ಬೈಕ್ ಸಂಪೂರ್ಣ ನಜ್ಜುಗುಜ್ಜಾಗಿದೆ. ಮೃತ ಇಬ್ಬರು ಯಾದಗಿರಿ ಜಿಲ್ಲೆಯ ಶಹಾಪುರ ಮೂಲದವರು ಎಂದು ಗುರುತಿಸಲಾಗಿದೆ. ವಿಷಯ ತಿಳಿದ ಕೂಡಲೇ ಘಟನಾ ಸ್ಥಳಕ್ಕೆ ಜೇವರ್ಗಿ ಪೊಲೀಸ್ ಅಧಿಕಾರಿಗಳು ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.

## ಫೇವರ್ಸ ಹಾಗೂ ಆಸನಗಳ ಅಳವಡಿಕೆಗೆ ಕಾಮಗಾರಿಗೆ ಚಾಲನೆ



ಬೆಳಗಾವಿ: ತಾಲೂಕಿನ ಕುಕಡೊಳ್ಳಿ ಗ್ರಾಮದಲ್ಲಿ ಸನ್ 2022–23ನೇ ಸಾಲಿನ ರಾಜ್ಯಸಭಾ ಸಂಸದರ ಸ್ಥಳೀಯ ಪ್ರದೇಶಾಭಿವೃದ್ಧಿ ಯೋಜನೆ ಅಡಿಯಲ್ಲಿ ಗ್ರಾಮ ಪಂಚಾಯತ ಹತ್ತಿರ ಫೇವರ್ಸ ಹಾಗೂ ಆಸನಗಳ ಅಳವಡಿಕೆಗೆ ಕಾಮಗಾರಿಗೆ ರಾಜ್ಯಸಭಾ ಸಂಸದ ಈರಣ್ಣ ಕಡಾಡಿ ಚಾಲನೆ ನೀಡುತ್ತಿರುವುದು.

ಈ ಸಂದರ್ಭದಲ್ಲಿ ಪೂಜ್ಯ ಶ್ರೀ ಅಭಿನವ ಶ್ರೀ ಚನ್ನಮಲ್ಲಯ್ಯ ಸ್ವಾಮಿಗಳು, ಬೆಳಗಾವಿ ಗ್ರಾಮೀಣ ಮಂಡಲ ಬಿಜೆಪಿ ಅಧ್ಯಕ್ಷರಾದ ಶ್ರೀ ಧನಜಂಯ ಜಾಧವ, ಗ್ರಾ.ಪಂ ಉಪಾಧ್ಯಕ್ಷರಾದ ಶ್ರೀಮತಿ ಕರೆವ್ವಾ ಹುಚ್ಚನವರ, ಶ್ರೀ ಎ.ಎಂ ಲಕಮೋಜಿ, ಶ್ರೀ ಸಿ.ಪಿ ಇಟಗಿ, ಶ್ರೀ ಅಪ್ಪಯ್ಯ ಹುಡೇದ ಸೇರಿದಂತೆ ಗ್ರಾ. ಪಂ ಸದಸ್ಯರು ಹಾಗೂ ಕಾರ್ಯಕರ್ತರು ಉಪಸ್ಥಿತರಿದ್ದರು.

# ಲಿಂಗಪೂಜೆಯೆ ಶರಣರಿಗೆ ಸಂಭ್ರಮ: ಮಹಾಂತ ಸ್ವಾಮೀಜಿ

## ಡಾ. ಶಿವಬಸವ ಮಹಾಸ್ವಾಮಿಗಳವರ 134 ನೇ ಜಯಂತಿ ಮಹೋತ್ಸವ

ಬೆಳಗಾವಿ : ಶರಣ ಸಂಪ್ರದಾಯ ಅನುಕರಣೆ ಮಾಡುವವರಿಗೆ ನಿಜವಾದ ಸಡಗರ ಸಂಭ್ರಮ ಯಾವುದಾದರೂ ಇದ್ದರೆ ಅದು ಲಿಂಗಪೂಜೆ, ಜಂಗಮ ದಾಸೋಹ ಮಾತ್ರ. ಸಮಾಜದಲ್ಲಿನ ದುರ್ಬಲರಿಗೆ 'ಉಣಿಸಿ ಉಣ್ಣುವ' ಸಂಸ್ಕೃತಿ ತಿಳಿಸಿಕೊಟ್ಟವರು ಬಸವಾದಿ ಶಿವಶರಣರು. ಈ ಸಂಸ್ಕೃತಿಯನ್ನು ನೈಜ ಕಾರ್ಯರೂಪಕ್ಕೆ ತಂದವರು ನಾಗನೂರು ರುದ್ರಾಕ್ಷಿ ಮಠದ ಡಾ. ಶಿವಬಸವ ಮಹಾಸ್ವಾಮೀಜಿಯವರು. ಇಂತಹ ಶ್ರೇಷ್ಠ ಪರಂಪರೆಯನ್ನು ಸಮಾಜ ಮುಂದುವರಿಸಬೇಕು ಎಂದು ಮುದುಗಲ್ ಮಾಂತೇಶ್ವರ ಮಠ ಕಲ್ಯಾಣ ಆಶ್ರಮದ ಖ್ಯಾತ ಪ್ರವಚನ ಯೋಗಿ ಮಹಾಂತ ಸ್ವಾಮೀಜಿ ಅಭಿಪ್ರಾಯಪಟ್ಟರು.



ಅವರು ನಗರದ ನಾಗನೂರು ರುದ್ರಾಕ್ಷಿ ಮಠದ ಪ್ರಭುದೇವ ಸಭಾ ಗ್ರಹದಲ್ಲಿ ಕಾಯಕಯೋಗಿ. ಮಹಾಪ್ರಸಾದಿ ಡಾ. ಶಿವಬಸವ ಮಹಾಸ್ವಾಮಿಗಳವರ 134 ನೇ ಜಯಂತಿ ಮಹೋತ್ಸವ ನಿಮಿತ್ಯ ಆಯೋಜಿಸಿದ್ದ "ಶರಣರ ಅನುಭವಾಮೃತ ಪ್ರವಚನ" ಕಾರ್ಯಕ್ರಮದ ಉದ್ಘಾಟನಾ ಸಮಾರಂಭ ಉದ್ದೇಶಿಸಿ ಮಾತನಾಡಿದರು.

ನಾಗನೂರು ರುದ್ರಾಕ್ಷಿ ಮಠದ ಡಾ. ಅಲ್ಲಮಪ್ರಭು ಮಹಾಸ್ವಾಮಿಗಳು ಮಾತನಾಡಿ, ಬಸವಾದಿ ಶಿವಶರಣರು ನಾಡಿಗೆ ನೀಡಿರುವ ಕಾಯಕ, ದಾಸೋಹ ಅಂತಹ ಮಹಾನ್ ತತ್ವಗಳನ್ನು ಇಂದಿನ ಯುವ ಜನತೆ ತಮ್ಮ ಜೀವನದಲ್ಲಿ ಅಳವಡಿಸಿಕೊಳ್ಳಬೇಕು. ಈ ಕುರಿತು ಸಮಾಜದಲ್ಲಿ ಜಾಗೃತಿ ಮೂಡಿಸುವ ದೃಷ್ಟಿಯಿಂದ ಇಂದಿನಿಂದ ಡಿಸೆಂಬರ್ 4ರ ವರೆಗೆ ಪ್ರತಿದಿನ ಸಂಜೆ 6 ಗಂಟೆಗೆ ಶರಣರ ಅನುಭವಾಮೃತ ಪ್ರವಚನ ಹಮ್ಮಿಕೊಂಡಿದ್ದು ನಾಡಿನ ಜನತೆ ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದರು.

ಕಿತ್ತೂರು ರಾಜಗುರು ಸಂಸ್ಥಾನ ಕಲ್ಮಠದ ಮಡಿವಾಳ ರಾಜಯೋಗಿಂದ್ರ ಮಹಾಸ್ವಾಮಿಗಳು ಮಾತನಾಡಿ, ಶಿವಬಸವ ಸ್ವಾಮೀಜಿಯವರ ಜೀವನವೇ ಒಂದು ಆದರ್ಶ. ಅವರು ನೊಂದವರ ನೋವ ನಿವಾರಿಸಿ, ಅನ್ನ, ಅಕ್ಷರವನ್ನು ನೀಡ ಸಮಾಜವನ್ನು ಮುನ್ನಡೆಸಿದರು. ಅವರ ಸನ್ಮಾರ್ಗದಲ್ಲಿ ನಾವೆಲ್ಲ ನಡೆಯೋಣ ಎಂದರು.

ವೇದಿಕೆಯ ಮೇಲೆ ನಿಚ್ಚಣಕಿ ಮಡಿವಾಳೇಶ್ವರ ಮಠದ ಪಂಚಾಕ್ಷರಿ ಮಹಾಸ್ವಾಮಿಗಳು, ಓಂ ಗುರೂಜಿ ಉಪಸ್ಥಿತರಿದ್ದರು. ಪ್ರಾರಂಭದಲ್ಲಿ ಪ್ರಾಚಾರ್ಯ ಡಾ. ಎ.ಎಲ್. ಪಾಟೀಲ ಸ್ವಾಗತಿಸಿದರು ರಾಜಶೇಖರ ಪಾಟೀಲ ನಿರೂಪಿಸಿದರು. ಕೊನೆಯಲ್ಲಿ ಉಪನ್ಯಾಸಕ ಮಂಜುನಾಥ ಶರಣಪ್ಪನವರ ವಂದಿಸಿದರು.

## ವಿದ್ಯುತ್ ನಿಲುಗಡೆ

ಬೆಳಗಾವಿ: ಬೆಳಗಾವಿಯ 110 ಕೆ.ವ್ಹಿ ವಡಗಾಂವ ವಿದ್ಯುತ್ ವಿತರಣಾ ಉಪಕೇಂದ್ರದಿಂದ ಹೊರಡುವ ಪೂರಕಗಳ ಮೇಲೆ ಬೆಳಗಾವಿಯಲ್ಲಿ ಬರುವ ಬೆಳಗಾವಿ ನಗರದ ವಿವಿಧ ಪ್ರದೇಶಗಳಲ್ಲಿ ಬುಧವಾರ ನವ್ಹೆಂಬರ್ 29, 2023 ರಂದು ಬೆಳಿಗ್ಗೆ 10 ಗಂಟೆಯಿಂದ ಮಧ್ಯಾಹ್ನ 3 ಗಂಟೆಯ ವರೆಗೆ ವಿದ್ಯುತ್ ನಿಲುಗಡೆಯಾಗಲಿದೆ.

ವಿದ್ಯುತ ನಿಲುಗಡೆಯಾಗುವ ಪ್ರದೇಶಗಳು:

ಎಫ್–04 ಬಜಾರ ಗಲ್ಲಿ: ರಾಣಿ ಚನ್ನಮ್ಮಾ ನಗರ, 1ನೇ ಹಂತ, 2ನೇ ಹಂತ, ಬುಡಾ ಲೇಔಟ್, ಸುಭಾಸ ಚಂದ್ರ ನಗರ, ಉತ್ಸವ ಹೊಟೇಲ್, 3ನೇ ರೇಲ್ವೆಗೇಟ್, ವಸಂತ ವಿಹಾರ ಕಾಲೂನಿ,

ಎಫ್–5 ವಡಗಾಂವ: ವಿಷ್ಣುಗಲ್ಲಿ, ಧಾಮನೆ ರಸ್ತೆ, ಕಲ್ಮೇಶ್ವರ ರಸ್ತೆ, ದೇವಾಂಗ್ ನಗರ 1ನೇ ಕ್ರಾಸ್ ದಿಂದ 2ನೇ ಕ್ರಾಸ್‌ವರೆಗೆ, ವಿಜಯ ಗಲ್ಲಿ, ರೈತ ಗಲ್ಲಿ, ಮಲ್ಲಪ್ರಭಾ ನಗರ, ಕಲ್ಯಾಣ ನಗರ, ತೆಗ್ಗಿನ ಗಲ್ಲಿ, ವಡ್ಡರ್ ಚಾವಣಿ, ಡೋರ್ ಗಲ್ಲಿ

ಎಫ್–6 ಹಳೆ ಬೆಳಗಾವಿ: ಗಣೇಶ ಪೇಟ್, ಕುಲಕರ್ಣಿ ಗಲ್ಲಿ, ರೇಣುಕಾ ನಗರ, ದೇವಾಂಗ್ ನಗರ, ಬಸ್ತಿ ಗಲ್ಲಿ

ಎಫ್–7 ಹೊಸೂರ: ಮಾಧವರಸ್ತೆ, ಕಪಲೇಶ್ವರ ಕಾಲೋನಿ, ಮಾಹಾವೀರ ಕಾಲೋನಿ, ಸಮರ್ಥನಗರ, ಓಂ ನಗರ, ಪಾಟೀಲ ಗಲ್ಲಿ .ಎಫ್–11 ಸುಭಾಷ ಮಾರ್ಕೇಟ್: ಸುಭಾಷ ಮಾರ್ಕೇಟ್, ಆರ್.ಕೆ ಮಾರ್ಗ, ಹಿಂದವಾಡಿ ಕಾರ್ಪೋರೇಶನ್ ಕಾಂಪ್ಲೇಕ್ಸ, ಅಥರ್ವ ಟಾವರ್, ಆರ್.ಪಿ.ಡಿ ರಸ್ತೆ, ಭಾಗ್ಯನಗರ 10ನೇ ಕ್ರಾಸ್, ರಾನಡೆ ಕಾಲೋನಿ 1 ರಿಂದ 2ನೇ ಕ್ರಾಸ್, ಸರ್ವೋದಯ ಮಾರ್ಗ ರಸ್ತೆ, ಮಹಾವೀರ ಗಾರ್ಡನ್ ಮತ್ತು ಸುತ್ತ ಮುತ್ತಲಿನ ಪ್ರದೇಶ, ಆನಂದವಾಡಿ

ಎಫ್–12 ವಿದ್ಯಾನಗರ: ಅನಗೋಳ, ವಡಗಾಂವ ಮುಖ್ಯ ರಸ್ತೆ, ಸಹ್ಯಾದ್ರಿ ಕಾಲೋನಿ, ಪಾರಿಜಾತ ಕಾಲೋನಿ, ಸಾಯಿ ಶ್ರದ್ಧಾ ಕಾಲೋನಿ, ಅನಗೋಳ ಮುಖ್ಯ ರಸ್ತೆ, ಸಂತ ಮೀರಾ ರಸ್ತೆ, ವಾಡಾ ಕಂಪೌಂಡ, ರಘುನಾಥ ಪೇಟ್, ಸುಭಾಸ ಗಲ್ಲಿ, ಮಾರುತಿ ಗಲ್ಲಿ, ಕನಕದಾಸ ಕಾಲೋನಿ, ಮಹಾವೀರ ನಗರ, ಅಂಬೇಡ್ಕರ ನಗರ,

ಎಫ್–13 ಭಾಗ್ಯನಗರ: ಭಾಗ್ಯ ನಗರ 1ನೇ ಕ್ರಾಸ್ ದಿಂದ 10ನೇ ಕ್ರಾಸ್ ವರೆಗೆ, ಅನಗೋಳ ಮುಖ್ಯ ರಸ್ತೆ,

ಎಫ್–14 ಯಳ್ಳೂರ ರೋಡ್: ಸಾಂಭಾಜಿ ನಗರ, ಕೇಶವ್ ನಗರ, ಯಳ್ಳೂರ ಕೆಎಲ್‌ಇ, ಅನ್ನಪೂರ್ಣೆಶ್ವರಿ ನಗರ, ಆನಂದ ನಗರ, ಆದರ್ಶನಗರ 1,2,3,4,5, ಕ್ರಾಸ್, ಪಟ್ವರ್ಧನ್ ಲೇಔಟ್, ಮೇಘದೂತ ಹೌಸಿಂಗ್ ಸೋಸೈಟಿ, ಗುಮ್ಮತ್ ಮಾಲಾ, ನಾತಪೈ ಸರ್ಕಲ್, ಜೈಲ ಶಾಲೆ, ಗೋಮ್ಮಟೇಶ ಸಾರ್ವಜನಿಕರು ಸಹಕರಿಸಬೇಕು ಎಂದು ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಹುಕ್ಕೇರಿ ಅರ್ಬನ್ ಬ್ಯಾಂಕ್‌ಗೆ ಜಯಗೌಡ ಅಧ್ಯಕ್ಷ–ಮಂಗಲಾ ಉಪಾಧ್ಯಕ್ಷರಾಗಿ ಅವಿರೋಧ ಆಯ್ಕೆ

ಹುಕ್ಕೇರಿ: ಇಲ್ಲಿನ ಹುಕ್ಕೇರಿ ಅರ್ಬನ್ ಬ್ಯಾಂಕ್ ಅಧ್ಯಕ್ಷರಾಗಿ ಜಯಗೌಡ ಪಾಟೀಲ, ಉಪಾಧ್ಯಕ್ಷರಾಗಿ ಮಂಗಲಾ ಹಂದಿಗುಂದ ಅವಿರೋಧವಾಗಿ ಆಯ್ಕೆಯಾದರು.

ಕಳೆದ ತಿಂಗಳು ಅಧ್ಯಕ್ಷ–ಉಪಾಧ್ಯಕ್ಷರು ಸಲ್ಲಿಸಿದ ರಾಜೀನಾಮೆಯಿಂದ ತೆರವಾದ ಸ್ಥಾನಕ್ಕೆ ಬ್ಯಾಂಕ್‌ನ ಸಭಾಗೃಹದಲ್ಲಿ ಮಂಗಳವಾರ ನಡೆದ ಚುನಾವಣೆಯಲ್ಲಿ ಜಯಗೌಡ ಪಾಟೀಲ ಅಧ್ಯಕ್ಷರಾಗಿ, ಮಂಗಲಾ ಹಂದಿಗುಂದ ಉಪಾಧ್ಯಕ್ಷರಾಗಿ ಅವಿರೋಧವಾಗಿ ಆಯ್ಕೆಯಾದರು.



ಈ ಎರಡು ಸ್ಥಾನಗಳಿಗೆ ತಲಾ ಒಬ್ಬೊಬ್ಬರೇ ನಾಮಪತ್ರ ಸಲ್ಲಿಸಿದ್ದರಿಂದ ಅವಿರೋಧ ಆಯ್ಕೆ ನಡೆಯಿತು ಎಂದು ಚುನಾವಣೆ ಅಧಿಕಾರಿಯೂ ಆದ ಸಹಕಾರ ಸಂಘಗಳ ಹಿರಿಯ ನಿರೀಕ್ಷಕ ಮಹೇಶ ಶೇಡಬಾಳ ಘೋಷಿಸಿದರು.

ಬಳಿಕ ನೂತನ ಅಧ್ಯಕ್ಷ ಜಯಗೌಡ ಪಾಟೀಲ ಮಾತನಾಡಿ, ಬ್ಯಾಂಕಿನ ಎಲ್ಲ ಆಡಳಿತ ಮಂಡಳಿಯ ಸಹಕಾರದಿಂದ ಅವಿರೋಧವಾಗಿ ಆಯ್ಕೆಯಾಗಿದ್ದು ಮುಂಬರುವ ದಿನಗಳಲ್ಲಿ ಬ್ಯಾಂಕಿನ ಅಭಿವೃದ್ದಿಯೊಂದಿಗೆ ಗ್ರಾಹಕರ ಸೇವೆಗೆ ಪ್ರಾಮಾಣಿಕವಾಗಿ ಶ್ರಮಿಸಲಾಗುವುದು ಎಂದರು. ಇದೇ ವೇಳೆ ನೂತನ ಅಧ್ಯಕ್ಷ–ಉಪಾಧ್ಯಕ್ಷರನ್ನು ನಿರ್ದೇಶಕ ಮಂಡಳಿ, ಸಿಬ್ಬಂದಿಗಳು ಸನ್ಮಾನಿಸಿದರು.

ಈ ಸಂದರ್ಭದಲ್ಲಿ ನಿರ್ದೇಶಕರಾದ ಶಿವಾನಂದ ನೂಲಿ, ಮೌನೇಶ್ವರ ಪೋತದಾರ, ಚಂದ್ರಶೇಖರ ಪಾಟೀಲ, ವಿಜಯ ರವದಿ, ಗುರುಲಿಂಗಪ್ಪಾ ಗಂಧ, ಸಿದ್ದೇಶ್ವರ ಹೆದ್ದೂರಶೆಟ್ಟಿ, ಸೋಮಶೇಖರ ಪಟ್ಟಣಶೆಟ್ಟಿ, ಗೌರವ್ವಾ ನಾಯಿಕ, ಸುಭಾಷ ಪಾಟೀಲ, ರಾಜು ಬಾಗಲಕೋಟಿ, ಬಸವಣ್ಣಿ ಮಗದುಮ್ಮ, ರಾಜು ಗಸ್ತಿ, ಶ್ರೀಶೈಲ ಹುಂಡೇಕರ, ಗೀರಿಶ ನಡದಗಲ್ಲಿ, ವ್ಯವಸ್ಥಾಪಕ ಕಾಡಪ್ಪಾ ಬಂದಾಯಿ ಹಾಗೂ ಸಿಬ್ಬಂದಿಗಳು ಉಪಸ್ಥಿತರಿದ್ದರು.

## ಬಾಲಕ ನೀರು ಪಾಲು

ಕೊಪ್ಪಳ: ನಿನ್ನೆ ಗೌರಿ ಹುಣ್ಣಿಮೆ ಹಿನ್ನೆಲೆಯಲ್ಲಿ ಹುಲಿಗೆಮ್ಮ ದರ್ಶನಕ್ಕೆ ಬಂದಿದ್ದ ಬಾಲಕ ನೀರು ಪಾಲಾದ ಘಟನೆ ಮುನಿರಾಬಾದ್ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ನಡೆದಿದೆ.



ಕನಕಪ್ಪ ಈರಪ್ಪ ಮಾದರ್ (17) ತುಂಗಭದ್ರಾ ನದಿಯಲ್ಲಿ ನಾಪತ್ತೆ ಆಗಿದ್ದಾನೆ.

ಗೌರಿ ಹುಣ್ಣಿಮೆಯ ಪ್ರಯುಕ್ತ ಕನಕಪ್ಪ ಈರಪ್ಪ ಮಾದರ್, ಹುಲಿಗೆಮ್ಮ ದೇವಸ್ಥಾನಕ್ಕೆ ಬಂದಿದ್ದ. ತುಂಗಾಭದ್ರ ನದಿಯಲ್ಲಿ ಈಜಲು ಹೋದಾಗ ನೀರು ಪಾಲಾಗಿದ್ದಾನೆ.

ಈರಪ್ಪ ಮಾದರ್, ಯಲಬುರ್ಗಾ ತಾಲೂಕಿನ ಕುದುರಿ ಕೊಟಿಗೆ ಗ್ರಾಮದವ ಎನ್ನಲಾಗಿದೆ.

ತಡರಾತ್ರಿಯವರೆಗೆ ಶೋಧ ಕಾರ್ಯ ಮುಂದುವರಿದಿದೆ. ಆದರೆ ಬಾಲಕ ಇನ್ನೂ ಪತ್ತೆಯಾಗಿಲ್ಲ. ಮುನಿರಾಬಾದ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಸಂಪುಟ: 4 ಸಂಚಿಕೆ: 251 ಪುಟ: 4 RNI: KARKAN/2020/79084 Regn,No:G-2/PMG/KA/NK/BM/139/2021-23

BELAGAVI VARADI KANNADA DAILY MORNING : Editor, Printer, Publisher & Owned By : **Satish Basavani Gudagenatti,** Basavani House No.53, Ashray Colony, Sarathi Nagar, Tv Center - 590019, TQ & DIST Belagavi, Karnataka.

Printed At : LAXMI PRINTERS, No.627. Auto Nagar - 590016.TQ & DIST Belagavi, Karnataka Mob : 9900332089